


ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 279, ಪುಟಗಳು: 8, ಬುಧವಾರ, 17 ಜುಲೈ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


### ಸುಭಾಷಿತ

ನನ್ನ ಹಾಗೆ ನೀನೂ ಬದುಕು ಎಂದು ಸಲಹೆ ನೀಡಬಹುದೇ ವಿನಾ, ನಾನು ಹೇಗಾದರೂ ಬದುಕುತ್ತೇನೆ, ನೀನು ಹೀಗೇ ಬದುಕು ಎಂದು ಹೇಳುವುದು ಸರಿಯಲ್ಲ.

। ಕೆ.ಪಿ.ಪೂರ್ಣಚಂದ್ರತೇಜಸ್ವಿ

### ಪಂಚಾಂಗ

(ಬುಧವಾರ 17, ಜುಲೈ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಗ್ರೀಷ್ಮ ಋತು,
- ಆಷಾಡ ಮಾಸ, ಶುಕ್ಲ ಪಕ್ಷ,
- ಬುಧವಾರ, ಪ್ರಥಮ ಏಕಾದಶಿ,
- ಅನುರಾಧ ನಕ್ಷತ್ರ
- ರಾಹುಕಾಲ : 12.29 ರಿಂದ 2.05
- ಗುಳಿಕಕಾಲ : 10.53 ರಿಂದ 12.29
- ಯಮಗಂಡಕಾಲ : 7.41 ರಿಂದ 9.17






## ಪ್ರಪ್ರಥಮ ಡಬಲ್ ಡೆಕ್ಕರ್ ಫ್ಲೈ ಓವರ್ ಪ್ರಾಯೋಗಿಕ ಸಂಚಾರಕ್ಕೆ ಇಂದು ಚಾಲನೆ



**ಬೆಂಗಳೂರು:** ಇಂದು ನಗರದ ಪ್ರಪ್ರಥಮ ಡಬಲ್ ಡೆಕ್ಕರ್ ಫ್ಲೈ ಓವರ್ ಟ್ರಯಲ್ ರನ್ ನಡೆಯಲಿದೆ. ನಗರದ ಟ್ರಾಫಿಕ್ ಗೆ ಬ್ರೇಕ್ ಹಾಕಲು ಡಬಲ್ ಅಸ್ತ್ರ ಬಳಸಿದ್ದು ದಕ್ಷಿಣ ಭಾರತದ ಮೊದಲ ಡಬಲ್ ಡೆಕ್ಕರ್ ಫ್ಲೈ ಓವರ್ ಪ್ರಾಯೋಗಿಕ ಸಂಚಾರಕ್ಕೆ ಇಂದು ಚಾಲನೆ ಸಿಗಲಿದೆ. ಮುಂಬೈ ಜೈಪುರದಲ್ಲಿ ಇದ್ದ ಡಬಲ್ ಡೆಕ್ಕರ್ ವ್ಯವಸ್ಥೆ ಇನ್ಮುಂದೆ ಸಿಲಿಕಾನ್ ಸಿಟಿಯಲ್ಲೂ ಇರಲಿದೆ. ಡಿಸಿಎಂ ಡಿಕೆ ಶಿವಕುಮಾರ್ ಅವರು ಇಂದು ಮಧ್ಯಾಹ್ನ 3 ಗಂಟೆಗೆ ಪ್ರಾಯೋಗಿಕ ಸಂಚಾರಕ್ಕೆ ಹಸಿರು ನಿಶಾನೆ ತೋರಿಸಲಿದ್ದಾರೆ. ಡಿಸಿಎಂಗೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಮತ್ತು ಶಾಸಕರು ಸಾಥ್ ನೀಡಲಿದ್ದಾರೆ.

ಬಹು ನಿರೀಕ್ಷಿತ ಡಬಲ್ ಡೆಕ್ಕರ್ ಫ್ಲೈ ಓವರ್ 3.36 ಕಿಲೋ ಮೀಟರ್ ಉದ್ದವಿದೆ. ಇದು ರಾಗಿಗುಡ್ಡ-ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೆ ನಿರ್ಮಾಣವಾಗಿದೆ. 449 ಕೋಟಿ ವೆಚ್ಚದಲ್ಲಿ ನಿರ್ಮಾಣ ಆಗಿರುವ ಡಬಲ್ ಡೆಕ್ಕರ್ ಫ್ಲೈ ಓವರ್, ರಾಗಿಗುಡ್ಡ -ಸಿಲ್ಕ್ ಬೋರ್ಡ್ ಜಂಕ್ಷನ್ ಸಂಚಾರ ದಟ್ಟಣೆಯನ್ನು ನಿವಾರಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಲಿದೆ. ಸಿಗ್ನಲ್-ಮುಕ್ತ ಕಾರಿಡಾರ್ ಆಗಿ ಪರಿವರ್ತಿಸುವಲ್ಲಿ ಇದು ಮಹತ್ವದ ಪಾತ್ರವಹಿಸಲಿದೆ. ರಾಗಿಗುಡ್ಡದಿಂದ ಇನ್ಮುಂದೆ ಸಿಗ್ನಲ್ ಇಲ್ಲದೆ ಸಿಲ್ಕ್ ಬೋರ್ಡ್ ಜಂಕ್ಷನ್ ಗೆ ಪ್ರಯಾಣಿಸಲು ಅವಕಾಶ ಸಿಗಲಿದೆ.

ಈ ಡಬಲ್ ಡೆಕ್ಕರ್ ಫ್ಲೈಓವರ್ ನಲ್ಲಿ ಮೆಟ್ರೋ ರೈಲು ಹಾಗೂ ವಾಹನ ಸಂಚರಿಸುತ್ತೆ. ಕೆಳರಸ್ತೆಯಿಂದ ಡಬ್ಬಲ್ ಡೆಕ್ಕರ್‌ನ ಮೊದಲ ಫ್ಲೈಓವರ್ 8 ಮೀ. ಎತ್ತರದಲ್ಲಿದ್ದರೆ, ಮೆಟ್ರೋ ವಯಡಕ್ಟ್ 16 ಮೀ. ಎತ್ತರದಲ್ಲಿದೆ. ಇದೇ ಮೊದಲ ಬಾರಿಗೆ ನಗರದ ಫ್ಲೈಓವರ್ ಮೇಲೆ ಮೆಟ್ರೋ ಲೇನ್ ಹಾದು ಹೋಗಿದೆ. ಎಚ್‌ಎಸ್‌ಆರ್ ಲೇಔಟ್ ಹಾಗೂ ಹೊಸೂರ್ ಲೇಔಟನ್ನು ಇದರಿಂದ ಅಡ್ಡಿಯಿಲ್ಲದೆ ತಲುಬಹುದು.

### ಫ್ಲೈ ಓವರ್ ಸಂಪರ್ಕ

- ಸೆಂಟ್ರಲ್ ಸಿಲ್ಕ್ ಬೋರ್ಡ್ ಜಂಕ್ಷನ್‌ನಲ್ಲಿ ಐದು ಲೂಪ್‌ಗಳು ಮತ್ತು ರ ಯಾಂಪ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಇವುಗಳನ್ನು ಎ, ಬಿ, ಸಿ, ಡಿ, ಮತ್ತು ಇ ರ ಯಾಂಪ್‌ಗಳೆಂದು ಗುರುತಿಸಲಾಗಿದೆ.
- ಎ, ಬಿ ಮತ್ತು ಸಿ ರಾಗಿಗುಡ್ಡ/ ಬಿಟಿಎಂ ಲೇಔಟ್ ಕಡೆಯಿಂದ ಕೆಆರ್ ಪುರಂ ಮತ್ತು ಹೊಸೂರು ರಸ್ತೆ ಸಂಪರ್ಕ
- ಡಿ ಮತ್ತು ಇ ಕೆಆರ್ ಪುರಂ ಅನ್ನು ಬಿಟಿಎಂ ಲೇಔಟ್ ಮತ್ತು ರಾಗಿಗುಡ್ಡ ರಸ್ತೆಯನ್ನು ಸಂಪರ್ಕಿಸಲಿವೆ.
- ಎ, ಬಿ, ಸಿ, ರ ಯಾಂಪ್‌ಗಳ ಪ್ರಮುಖ ಕಾಮಗಾರಿ ಮುಗಿದಿದ್ದು ಇಂದು ಪ್ರಾಯೋಗಿಕ ಸಂಚಾರಕ್ಕೆ ಸಿದ್ಧತೆ ನಡೆದಿದೆ.

ಪುಟ 2

## ಖಾಸಗಿ ಕಂಪನಿಗಳಲ್ಲಿ ಕನ್ನಡಿಗರಿಗೆ ಶೇ 50-75ರಷ್ಟು ಉದ್ಯೋಗ ಮೀಸಲಾತಿ

# ಮಸೂದೆಗೆ ಸಂಪುಟ ಅನುಮೋದನೆ

**ಬೆಂಗಳೂರು:** ಕರ್ನಾಟಕದಲ್ಲಿ ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಶೇ 50 ರಿಂದ ಶೇ 75ರ ವರೆಗೆ ಮೀಸಲಾತಿ ನೀಡುವುದಕ್ಕೆ ಸಂಬಂಧಿಸಿದ ವಿಧೇಯಕಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋ? ಲಾಡ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಈ ಬಗ್ಗೆ ಸಂದೇಶ ಪ್ರಕಟಿಸಿರುವ ಅವರು, ಖಾಸಗಿ ವಲಯಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲು ಕಲ್ಪಿಸುವ ವಿಧೇಯಕಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆದ ವಿಷಯವನ್ನು ನಿಮ್ಮೆಲ್ಲರಲ್ಲಿ ಹಂಚಿಕೊಳ್ಳಲು ಖುಷಿಯಾಗುತ್ತಿದೆ ಎಂದು ಉಲ್ಲೇಖಿಸಿದ್ದಾರೆ.

ಈ ವಿಧೇಯಕದ ಜಾರಿಯಿಂದ ರಾಜ್ಯದಲ್ಲಿರುವ ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಶೇ 50 ರಿಂದ ಶೇ 75ರ ವರೆಗೆ ಮೀಸಲಾತಿ ಸಿಗಲಿದೆ ಎಂದು ಅವರು ತಿಳಿಸಿದ್ದಾರೆ.

**ಸಂತೋಷ್ ಲಾಡ್ ಎಕ್ಸ್ ಸಂದೇಶ:** ಖಾಸಗಿ ವಲಯಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲು ಕಲ್ಪಿಸುವ ವಿಧೇಯಕಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆದ ವಿಷಯವನ್ನು ನಿಮ್ಮೆಲ್ಲರಲ್ಲಿ ಹಂಚಿಕೊಳ್ಳಲು ಖುಷಿಯಾಗುತ್ತಿದೆ.



ಈ ವಿಧೇಯಕದ ಜಾರಿಯಿಂದ ರಾಜ್ಯದಲ್ಲಿರುವ ಖಾಸಗಿ ವಲಯದ ಉದ್ಯೋಗಗಳಲ್ಲಿ ಕನ್ನಡಿಗರಿಗೆ ಶೇ 50 ರಿಂದ ಶೇ 75ರ ವರೆಗೆ ಮೀಸಲಾತಿ ಸಿಗಲಿದೆ.?

ಖಾಸಗಿ ವಲಯಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲು ಕಲ್ಪಿಸುವ ವಿಧೇಯಕಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾದ ವಿಷಯವನ್ನು ನಿಮ್ಮೊಂದಿಗೆ ಹಂಚಿಕೊಳ್ಳಲು ತುಂಬ ಖುಷಿಯಾಗುತ್ತಿದೆ. ಈ ವಿಧೇಯಕದಿಂದ ಶೇ 50 ರಷ್ಟು ಮ್ಯಾನೇಜ್ ಮೆಂಟ್ ಹುದ್ದೆಗಳು ಹಾಗೂ ಶೇ 75 ರಷ್ಟು ನಾನ್ ಮ್ಯಾನೇಜ್ ಮೆಂಟ್ ಹುದ್ದೆಗಳಲ್ಲಿ ಸ್ಥಳಿಯರಿಗೆ ಮೀಸಲಾತಿ ಸಿಗಲಿದೆ ಎಂದು ಅವರು ತಿಳಿಸಿದ್ದಾರೆ.

**ಮೀಸಲಾತಿಗೆ ಯಾರು ಅರ್ಹರು?:** ಕರ್ನಾಟಕದಲ್ಲಿ ಹುಟ್ಟಿದವರು, ಕರ್ನಾಟಕದಲ್ಲಿ 15 ವರ್ಷಗಳಿಂದ ವಾಸಿಸುತ್ತಿರುವವರು, ಕನ್ನಡ ಭಾಷೆಯಲ್ಲಿ ಮಾತಾಡಲು, ಓದಲು ಹಾಗೂ ಬರೆಯಲು ಬರುವವರು ಅಲ್ಲದೇ ನೋಡಲ್ ಏಜೆನ್ಸಿಗಳು ನಡೆಸುವ ಕನ್ನಡ ಭಾಷಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವವರು ಈ ಮೀಸಲಾತಿಗೆ ಅರ್ಹರಿರಲಿದ್ದಾರೆ.

**ಉಲ್ಲಂಘಿಸುವ ಸಂಸ್ಥೆಗಳಿಗೆ ದಂಡ:** ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲಾತಿ ನೀಡುವ ನಿಯಮವನ್ನು ಉಲ್ಲಂಘಿಸುವ ಸಂಸ್ಥೆಗಳಿಗೆ ದಂಡ ವಿಧಿಸುವ ಅಂಶವನ್ನು ಸಹ ವಿಧೇಯಕದಲ್ಲಿ ಸೇರಿಸಲಾಗಿದ್ದು, ರಾಜ್ಯದಲ್ಲಿ ಕಟ್ಟುನಿಟ್ಟಾಗಿ ಜಾರಿಗೆ ತರಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ.

**ಸಿ ಮತ್ತು ಡಿ ದರ್ಜೆಯ ಹುದ್ದೆಗಳಿಗೆ ನೂರರಷ್ಟು ಮೀಸಲಾತಿ:** ರಾಜ್ಯದ ಎಲ್ಲಾ ಖಾಸಗಿ ಕೈಗಾರಿಕೆಗಳಲ್ಲಿ ''ಸಿ ಮತ್ತು ಡಿ'' ದರ್ಜೆಯ ಹುದ್ದೆಗಳಿಗೆ ನೂರಕ್ಕೆ ನೂರರಷ್ಟು ಕನ್ನಡಿಗರ ನೇಮಕಾತಿಯನ್ನು ಕಡ್ಡಾಯಗೊಳಿಸುವ ವಿಧೇಯಕಕ್ಕೆ ನಿನ್ನೆ ನಡೆದ ಸಚಿವ ಸಂಪುಟ ಸಭೆಯು ಒಪ್ಪಿಗೆ ನೀಡಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪುಟ 2

## ಮೊದಲ ಬಾರಿ ಗೆದ್ದ ಕಾಂಗ್ರೆಸ್ ಶಾಸಕರಿಗೆ ಡಿಕೆ ಆಪ್ತರಿಂದ

# ಡಿನ್ನರ್ ಪಾರ್ಟಿ

**ಬೆಂಗಳೂರು:** ಕಾಂಗ್ರೆಸ್ ಆಂತರಿಕ ಸಂಘರ್ಷ ತಣ್ಣಗಾಗುತ್ತಿದೆ ಎನ್ನುತ್ತಿರುವಂತೆಯೇ ಮೊದಲ ಬಾರಿಗೆ ಆಯ್ಕೆಯಾಗಿರುವ ಕಾಂಗ್ರೆಸ್ ಶಾಸಕರು ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದನ್ನೇ ನೆಪವಾಗಿಟ್ಟುಕೊಂಡು, ಶಾಸಕರ ಮುನಿಸು ತಣಿಸುವುದಕ್ಕೆಂದು ಡಿಸಿಎಂ ಡಿಕೆ ಶಿವಕುಮಾರ್ ಆಪ್ತರು ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ರಾತ್ರಿ ಮೊದಲ ಬಾರಿಗೆ ಆಯ್ಕೆಯಾಗಿರುವ ಕಾಂಗ್ರೆಸ್ ಶಾಸಕರಿಗೆ ಡಿನ್ನರ್ ಪಾರ್ಟಿ ಆಯೋಜಿಸಿದ್ದಾರೆ. ತಡರಾತ್ರಿ ವರೆಗೂ ಡಿನ್ನರ್ ಪಾರ್ಟಿ ನಡೆದಿದೆ. ಮಂಡ್ಯ



ಶಾಸಕ ರವಿಕುಮಾರ್ ಗಣಿಗ ಡಿನ್ನರ್ ಪಾರ್ಟಿ ಆಯೋಜಿಸಿದ್ದಾರೆ. ಡಿನ್ನರ್ ಪಾರ್ಟಿ ನೆಪದಲ್ಲಿ ತಡ ರಾತ್ರಿವರೆಗೆ ಚರ್ಚೆ ನಡೆದಿದೆ.

ಪುಟ 2

### ಸಂಕ್ಷಿಪ್ತ ಸುದ್ದಿ

## ಪ್ರೇಯಸಿ, ಆಕೆಯ ಸಹೋದರಿ, ತಂದೆಯ ಕತ್ತು ಸೀಳಿದ ಹುಚ್ಚು ಪ್ರೇಮಿ

**ಬಿಹಾರ:** ಬಿಹಾರದಲ್ಲಿ ತ್ರಿವಳಿ ಕೊಲೆ ನಡೆದಿದೆ, ಹುಚ್ಚು ಪ್ರೇಮಿಯೊಬ್ಬ ಪ್ರೇಯಸಿ ಹಾಗೂ ಆಕೆಯ ಸಹೋದರಿ, ತಂದೆಯ ಕತ್ತು ಸೀಳಿ ಕೊಲೆ ಮಾಡಿರುವ



ಘಟನೆ ವರದಿಯಾಗಿದೆ. ಬಿಹಾರದ ಸರನ್ ಜಿಲ್ಲೆಯಲ್ಲಿ ಘಟನೆ ನಡೆದಿದೆ, 55 ವರ್ಷದ ತಾರಕೇಶ್ವರ್ ಅವರ ಇಬ್ಬರು ಹೆಣ್ಣುಮಕ್ಕಳಾದ ಚಾಂದಿನಿ ಕುಮಾರಿ ಹಾಗೂ ಅಭಾ ಕುಮಾರಿ ಹಾಗೂ ಪತ್ನಿ ಎಲ್ಲರೂ ಮನೆಯಲ್ಲಿ ಮಲಗಿದ್ದರು.

ಪುಟ 2

## ಕೆರೆಯಲ್ಲಿ ವಿಜಯನಗೆರ ಕಾಲದ ಪುರಾತನ ಶಿಲ್ಪ ಪತ್ತೆ



**ದಾವಣಗೆರೆ:** ದಾವಣಗೆರೆ: ಜಿಲ್ಲೆಯ ಕೆರೆಯೊಂದರಲ್ಲಿ ವಿಜಯನಗರ ಕಾಲದ ಪುರಾತನ ಶಿಲಾ ಶಿಲ್ಪ ಪತ್ತೆಯಾಗಿದೆ. ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲೂಕಿ ಸವಳಂಗ ಗ್ರಾಮದ ಹೊರವಲಯದಲ್ಲಿರುವ ಹೊಸಕೆರೆಯಲ್ಲಿ ಮೂರ್ತಿಯೊಂದು ಪತ್ತೆಯಾಗಿದೆ. ಮೇಲ್ನೋಟಕ್ಕೆ ಭೈರವ, ಕಾಳಿ ಮತ್ತು ವೀರಭದ್ರ ಶಿಲ್ಪಗಳಿಗೆ ಹೊಂದಾಣಿಕೆಯಾಗುವ ಲಕ್ಷಣವಿರುವ ಶಿಲ್ಪ ಇದಾಗಿದೆ. ಕಪ್ಪು ಶಿಲೆಯಲ್ಲಿ ಕೆತ್ತಲಾಗಿದ್ದು ವಿಜಯನಗರ ಕಾಲಕ್ಕೆ ಸೇರಿದ್ದೆನ್ನಲಾಗಿದೆ. ಚತುರ್ಭುಜಗಳಿದ್ದು, ಬಲ ಭಾಗದ ಮುಂಗೈನಲ್ಲಿ ಖಡ್ಗ, ಮೇಲ್ಮುಖವಾಗಿ ಭುಜದ ಮೇಲಿದೆ.

ಪುಟ 2

## ಅಜಿತ್ ಪವಾರ್ ಪಕ್ಷ ತೊರೆದ ನಾಲ್ವರು ಪ್ರಮುಖ ನಾಯಕರು

# ಶರದ್ ಬಣಕ್ಕೆ ಸೇರ್ಪಡೆ ಸಾಧ್ಯತೆ

**ನವದೆಹಲಿ:** ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿಗೆ ಹಿನ್ನಡೆಯಾಗಿದೆ. ಪಿಂಪ್ರಿ-ಚಿಂಚ್‌ವಾಡ ಘಟಕದ ನಾಲ್ವರು ಉನ್ನತ ನಾಯಕರು ರಾಜೀನಾಮೆ ನೀಡಿದ್ದು, ಶೀಘ್ರದಲ್ಲೇ ಶರದ್ ಪವಾರ್ ಬಣಕ್ಕೆ ಸೇರುವ ಸಾಧ್ಯತೆಯಿದೆ. ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೆ ತಿಂಗಳುಗಳ ಹಿಂದೆ ಈ ಬೆಳವಣಿಗೆ ನಡೆದಿದೆ.



ಎನ್‌ಸಿಪಿಯ ಪಿಂಪ್ರಿ-ಚಿಂಚ್‌ವಾಡ ಘಟಕದ ಮುಖ್ಯಸ್ಥ ಅಜಿತ್ ಗವಾಹನೆ, ಪಿಂಪ್ರಿ-ಚಿಂಚ್‌ವಾಡ್ ವಿದ್ಯಾರ್ಥಿಗಳ ವಿಭಾಗದ ಮುಖ್ಯಸ್ಥ ಯಶ್ ಸಾನೆ ಮತ್ತು ಮಾಜಿ ಕಾರ್ಪೊರೇಟರ್‌ಗಳಾದ ರಾಹುಲ್ ಭೋಸ್ಲೆ ಮತ್ತು ಪಂಕಜ್ ಭಾಲೇಕರ್ ಅವರು ಅಜಿತ್ ಪವಾರ್ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಭೋಸಾರಿ ವಿಧಾನಸಭಾ ಸ್ಥಾನಕ್ಕೆ ಟಿಕೆಟ್ ಪಡೆಯುವ ಪ್ರಯತ್ನ ವಿಫಲವಾದ ನಂತರ ಅಜಿತ್ ಗವಾಹನೆ ರಾಜೀನಾಮೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಳೆದ ಎರಡು ಅವಧಿಗೆ ಭೋಸಾರಿ ಕ್ಷೇತ್ರದಿಂದ ಬಿಜೆಪಿ ಶಾಸಕ ಮಹೇಶ್ ಲಾಂಜೆ ಆಯ್ಕೆಯಾಗಿದ್ದಾರೆ.

ಲೋಕಸಭೆ ಚುನಾವಣೆಯಲ್ಲಿ, ಮಹಾ ವಿಕಾಸ್ ಅಘಾಡಿ (ಎಂವಿಎ) ಮಹಾರಾಷ್ಟ್ರದಲ್ಲಿ 48 ಸ್ಥಾನಗಳಲ್ಲಿ 30 ಸ್ಥಾನಗಳನ್ನು ಗೆಲ್ಲುವ ಮೂಲಕ ಆಡಳಿತಾರೂಢ ಮಹಾಯುತಿ ಮೈತ್ರಿಕೂಟವನ್ನು ಬೆರಗುಗೊಳಿಸಿತು. ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ರಾಯಗಡದಲ್ಲಿ ಕೇವಲ ಒಂದು ಸ್ಥಾನವನ್ನು ಗೆದ್ದರೆ, ಶರದ್ ಪವಾರ್ ಬಣ ಎಂಟು ಸ್ಥಾನಗಳನ್ನು ಗಳಿಸಿತು.

ಪುಟ 2

## ಡೆಂಗ್ಯೂ ಜತೆಗೆ ಚಿಕುನ್ ಗುನ್ಯಾ

# ಪ್ರಕರಣಗಳೂ ಏರಿಕೆ

**ಬೆಂಗಳೂರು:** ರಾಜ್ಯದಲ್ಲಿ ಈಗಾಗಲೇ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಮಿತಿ ಮೀರಿದೆ. ಅದರಲ್ಲೂ ಬೆಂಗಳೂರಿನಲ್ಲಿ ಅತಿ ಹೆಚ್ಚು ಪ್ರಕರಣಗಳು ವರದಿಯಾಗುತ್ತಿದ್ದು, ಇದನ್ನ ತಡೆಗಟ್ಟಲು ಆರೋಗ್ಯ ಇಲಾಖೆ ಹರಸಾಹಸ ಪಡುತ್ತಿದೆ. ಆದರೂ ಡೆಂಗ್ಯೂ ಹತೋಟಿಗೆ ಬರುತ್ತಿಲ್ಲ. ಇದೆಲ್ಲದರ ಆತಂಕದ ಮಧ್ಯೆ ನಗರದಲ್ಲಿ ಚಿಕುನ್ ಗುನ್ಯಾ ಕೂಡಾ ಹೆಚ್ಚಾಗಲು ಶುರುವಾಗಿದೆ. ಬೆಂಗಳೂರಿನ ಆಸ್ಪತ್ರೆಗಳಲ್ಲಿ ಚಿಕುನ್ ಗುನ್ಯಾ ಪ್ರಕರಣ ಏರಿಕೆಯಾಗುತ್ತಿದೆ.



**ಬಿಬಿಎಂಪಿ ವ್ಯಾಪ್ತಿಯಲ್ಲಿ ತಿಂಗಳಲ್ಲಿ 300 ಪ್ರಕರಣ:** ಕಳೆದ ತಿಂಗಳ 15 ರಂದು ರಾಜ್ಯದಲ್ಲಿ ಸುಮಾರು 687 ಪ್ರಕರಣಗಳು ದಾಖಲಾಗಿದ್ದವು. ಬಿಬಿಎಂಪಿ ವ್ಯಾಪ್ತಿಯಲ್ಲಿ 123 ಕೇಸ್ ದಾಖಲಾಗಿತ್ತು. ಡೆಂಗ್ಯೂ ನಡುವೆ ಇದೀಗ 15 ದಿನಗಳಲ್ಲೇ ಚಿಕುನ್ ಗುನ್ಯಾ ಕೇಸ್‌ಗಳು ಹೆಚ್ಚಾಗಿವೆ. ಸೋಮವಾರದ ವರೆಗೆ ರಾಜ್ಯದಲ್ಲಿ 810 ಪ್ರಕರಣ ಕಂಡುಬಂದರೆ, ಬಿಬಿಎಂಪಿ ವ್ಯಾಪ್ತಿಯಲ್ಲಿ 176 ಚಿಕುನ್ ಗುನ್ಯಾ ಪಾಸಿಟಿವ್ ಕೇಸ್‌ಗಳು ಪತ್ತೆಯಾಗಿವೆ.

ಪುಟ 2

## ಶಿರೂರಿನಲ್ಲಿ ಒಂದೇ ಕುಟುಂಬದ ನಾಲ್ವರು ಭೂ ಸಮಾಧಿ

# ಅಂತ್ಯಸಂಸ್ಕಾರ ಮಾಡಲೂ ಜನರಿಲ್ಲ

**ಕಾರವಾರ:** ರಾಜ್ಯದ ಕರಾವಳಿಯಲ್ಲಿ ಸುರಿಯುತ್ತಿರುವ ಮಳೆ ಮರಣ ಮಳೆಯಾಗಿ ಬದಲಾಗಿದೆ. ಅದರಲ್ಲೂ ರಣಮಳೆ ಮತ್ತು ಭಾರೀ ಭೂಕುಸಿತಗಳಿಂದ ಉತ್ತರ ಕನ್ನಡ ಜಿಲ್ಲೆ ತತ್ತರಿಸಿ ಹೋಗಿದೆ. ಅಂಕೋಲಾದ ಶಿರೂರು ಬಳಿ ಮಂಗಳೂರು ಗೋವಾಗೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿ-66ರಲ್ಲಿ ಗುಡ್ಡ ಕುಸಿದು ಕನಿಷ್ಠ 10 ಮಂದಿ ಬಲಿ ಆಗಿದ್ದಾರೆ.

ಮೃತರಲ್ಲಿ ಟೀ ಅಂಗಡಿ ಇಟ್ಟುಕೊಂಡಿದ್ದ ಒಂದೇ ಕುಟುಂಬದ ಐವರಿದ್ದಾರೆ. ಇನ್ನೂ 20 ಮಂದಿ ಕಣ್ಮರೆಯಾಗಿರುವ ಶಂಕೆ ಇದ್ದು, ಭಾರೀ ಮಳೆ ನಡುವೆ ಎನ್‌ಡಿಆರ್‌ಎಫ್ ಶೋಧ ಕಾರ್ಯ ನಡೆಸಿದ್ದು, ಐವರ ಶವ ಹೊರತೆಗೆದಿದೆ. ಮಂಗಳವಾರ ಇಡೀ ದಿನ ನಡೆದ ಎನ್‌ಡಿಆರ್‌ಎಫ್ ಕಾರ್ಯಾಚರಣೆ ರಾತ್ರಿ ವೇಳೆ ಸ್ಥಗಿತ ಮಾಡಲಾಗಿದ್ದು ಇಂದು ಮುಂದುವರಿಯಲಿದೆ.

ಜೀವನ ನಿರ್ವಹಣೆಗಾಗಿ ದೂರದ ಕಾರವಾರದಿಂದ ಬಂದು ಗಂಗಾವಳಿ ನದಿ





ಬಳಿಯ ಶಿರೂರಿನಲ್ಲಿ ಟೀ ಅಂಗಡಿ ವ್ಯಾಪಾರ ನಡೆಸುತ್ತಿದ್ದ ಲಕ್ಷ್ಮಣ ನಾಯ್ಕ್ ಇಡೀ ಕುಟುಂಬವೇ ಗುಡ್ಡ ಕುಸಿತಕ್ಕೆ ಬಲಿಯಾಗಿದೆ. ಇಡೀ ದಿನ ನಡೆದ ಕಾರ್ಯಾಚರಣೆಯಲ್ಲಿ 6 ಜನರ ಮೃತ ದೇಹ ಪತ್ತೆಯಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮಿ ಪ್ರಿಯಾ ಹೇಳಿದ್ದಾರೆ.

ಮೃತರನ್ನು ಲಕ್ಷ್ಮಣ ನಾಯ್ಕ್, ಶಾಂತಿ ನಾಯ್ಕ್, ರೋಶನ್, ಅವಂತಿಕಾ, ಜಗನ್ನಾಥ ಎಂದು ಗುರುತಿಸಲಾಗಿದೆ. ಈ ನತದೃಷ್ಟ ಕುಟುಂಬದಲ್ಲಿ ಅಂತ್ಯಕ್ರಿಯೆ ಮಾಡಲೂ ಯಾರು ಉಳಿದಿಲ್ಲ. ಸಂಬಂಧಿ ಲಕ್ಷ್ಮಣ ನಾಯ್ಕ್ ಕುಟುಂಬ ಬಲಿಯಾಗಿದೆ ಎಂಬ ಸುದ್ದಿ ತಿಳಿದು ಸ್ಥಳಕ್ಕೆ ಓಡಿ ಬಂದ ಸಂಬಂಧಿಕರು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಲಕ್ಷ್ಮಣ ನಾಯ್ಕ್ ಕುಟುಂಬದ ಸದಸ್ಯರ ಸಾಮೂಹಿಕ ಅಂತ್ಯಕ್ರಿಯೆ ಮಾಡುವುದಾಗಿ ಹೇಳಿದರು.

ಪುಟ 2

# ಲಾಲ್ ಬಾಗ್ ಫ್ಲವರ್ ಶೋ ದಿನಾಂಕ ನಿಗದಿ

**ಬೆಂಗಳೂರು:** ಬೆಂಗಳೂರಿನ ಲಾಲ್ ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ವೀಕ್ಷಿಸಲು ಜನರು ಕಾತರದಿಂದ ಇರುತ್ತಾರೆ. ಪ್ರತಿ ವರ್ಷ ವಿಭಿನ್ನ ಥೀಮ್‌ನಲ್ಲಿ ಫ್ಲವರ್ ಶೋ ಆಯೋಜಿಸುವ ಮೂಲಕ ಲಾಲ್ ಬಾಗ್‌ಗೆ ಅಸಂಖ್ಯಾತ ಜನರನ್ನು ಆಕರ್ಷಿಸಲಾಗುತ್ತದೆ.

ಈ ವರ್ಷ ಕೂಡ ಸ್ವಾತಂತ್ರ್ಯ ದಿನಾಚರಣೆಯ ಸಲುವಾಗಿ ಲಾಲ್ ಬಾಗ್‌ನಲ್ಲಿ ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಅವರ ಜೀವನ ಗಾಥೆಯನ್ನು ಬಿಂಬಿಸುವ ಪುಷ್ಪ ಪ್ರದರ್ಶನ ಆಯೋಜಿಸಲಾಗುತ್ತಿದ್ದು, ಆಗಸ್ಟ್ 8 ರಿಂದ 19 ರವರೆಗೆ ಫಲಪುಷ್ಪ ಪ್ರದರ್ಶನಕ್ಕೆ ದಿನಾಂಕ ನಿಗದಿ ಮಾಡಲಾಗಿದೆ. ವಿದೇಶಿ ಹಾಗೂ ಸ್ವದೇಶಿ ಹೂಗಳಿಂದ ಈ ಬಾರಿಯ ಫ್ಲವರ್ ಶೋ ಕಂಗೊಳಿಸಲಿದೆ.

ಪುಟ 2



## ಒಮಾನ್ ಕರಾವಳಿಯಲ್ಲಿ ತೈಲ ಟ್ಯಾಂಕರ್ ಪಲ್ಟಿ

# 16 ಜನರು ನಾಪತ್ತೆ



**ಒಮಾನ್:** ಒಮಾನ್ ಕರಾವಳಿಯಲ್ಲಿ ತೈಲ ಟ್ಯಾಂಕರ್ ಪಲ್ಟಿಯಾಗಿ 13 ಮಂದಿ ಭಾರತೀಯರು ಸೇರಿದಂತೆ ಒಟ್ಟು 16 ಮಂದಿ ನಾಪತ್ತೆಯಾಗಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಕೊಮೊರೊಸ್ ಧ್ವಜ ಇರುವ ತೈಲ ಟ್ಯಾಂಕರ್ ಪ್ರೆಸ್ಟೀಜ್ ಫಾಲ್ಕನ್ ಸಿಬ್ಬಂದಿಯಲ್ಲಿ 13 ಭಾರತೀಯರು ಮತ್ತು ಮೂವರು ಶ್ರೀಲಂಕಾದವರು ಇದ್ದರು. ಒಮಾನಿ ಬಂದರು ಡುಕ್ಮ್ ಬಳಿ ರಾಸ್ ಮದರಕಾದಿಂದ ಆಗ್ನೇಯಕ್ಕೆ 25 ನಾಟಿಕಲ್ ಮೈಲುಗಳಷ್ಟು ದೂರದಲ್ಲಿ ಹಡಗು ಮುಳುಗಿದೆ.

ರಾಯಿಟರ್ಸ್ ವರದಿಯ ಪ್ರಕಾರ, ತೈಲ ಟ್ಯಾಂಕರ್ ನೀರಿನಲ್ಲಿ ಮುಳುಗಿದೆ ಮತ್ತು ತಲೆಕೆಳಗಾಗಿ ಬಿದ್ದಿದೆ, ಆದರೆ ಹಡಗು ಸ್ಥಿರವಾಗಿದೆಯೇ ಅಥವಾ ಸಮುದ್ರಕ್ಕೆ ತೈಲ ಸೋರಿಕೆಯಾಗುತ್ತಿದೆಯೇ ಎಂಬುದು ಇನ್ನೂ ಖಚಿತವಾಗಿಲ್ಲ.

ಪುಟ 2

## ದ್ರಾವಿಡ್‌ಗೆ ಕರ್ನಾಟಕ ಸರ್ಕಾರ ಸನ್ಮಾನ ಮಾಡಬೇಕು



**ಬೆಂಗಳೂರು:** ಟಿ20 ವರ್ಲ್ಡ್ ಕಪ್ ಗೆದ್ದ ಟೀಂ ಇಂಡಿಯಾ ತಂಡಕ್ಕೆ ವಿಧಾನ ಪರಿಷತ್ ಕಲಾಪದಲ್ಲಿ ಅಭಿನಂದನೆ ಸಲ್ಲಿಸಲಾಯ್ತು. ಬಿಜೆಪಿ ಸದಸ್ಯ ಡಿ.ಎಸ್.ಅರುಣ್ ಕಲಾಪದಲ್ಲಿ ಅಭಿನಂದನೆ ನಿರ್ಣಯ ಮಂಡಿಸಿದರು. ಅರುಣ್ ಪ್ರಸ್ತಾಪಕ್ಕೆ ಇಡೀ ಸದನ ಒಕ್ಕೊರಲಿನಿಂದ ಒಪ್ಪಿಗೆ ಸೂಚಿಸಿ ಅಭಿನಂದನೆ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಕಾಂಗ್ರೆಸ್ ಸದಸ್ಯ ಪ್ರಕಾಶ್ ರಾಥೋಡ್, ರಾಹುಲ್ ದ್ರಾವಿಡ್ ನಮ್ಮ ಕರ್ನಾಟದ ಹೆಮ್ಮೆ, ಅವರನ್ನ ಕರೆದು ಕರ್ನಾಟಕ ಸರ್ಕಾರ ಸನ್ಮಾನ ಮಾಡಬೇಕು. ಬೇರೆ ಬೇರೆ ರಾಜ್ಯಗಳಲ್ಲಿ ರಾಹುಲ್ ದ್ರಾವಿಡ್ ಗೆ ಸನ್ಮಾನ ಮಾಡಿದ್ದಾರೆ. ಹಣದ ರೂಪದಲ್ಲಿ ಗೌರವ ಸಲ್ಲಿಕೆ ಮಾಡಿದ್ದಾರೆ. ಹೀಗಾಗಿ ನಮ್ಮ ಸರ್ಕಾರ ಕೂಡಾ ದ್ರಾವಿಡ್ ಕರೆದು ಸನ್ಮಾನ ಮಾಡಬೇಕು ಎಂದು ಸರ್ಕಾರಕ್ಕೆ ಪ್ರಕಾಶ್ ರಾಥೋಡ್ ಒತ್ತಾಯ ಮಾಡಿದರು.

ಬಿಜೆಪಿ ಸದಸ್ಯೆ ಭಾರತಿ ಶೆಟ್ಟಿ ಮಾತನಾಡಿ, ರಾಹುಲ್ ದ್ರಾವಿಡ್‌ರಂತೆ ಫೈನಲ್ ಮ್ಯಾಚ್ ಗೆಲ್ಲಲು ಕಾರಣರಾದ ನಮ್ಮ ಕರ್ನಾಟಕದ ಅಳಿಯ ಸೂರ್ಯಕುಮಾರ್ ಯಾದವ್‌ಗೂ ಸನ್ಮಾನ ಮಾಡಬೇಕು ಅಂತ ಮನವಿ ಮಾಡಿದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ , ಸಚಿವರ ವಿರುದ್ಧ ಬಿಜೆಪಿ ನಾಯಕರ ಕಿಡಿ

# ಸದನದಲ್ಲಿ ವಾಲ್ಮೀಕಿ ನಿಗಮ ಹಗರಣ ಗದ್ದಲ

**ಬೆಂಗಳೂರು:** ವಿಧಾನಸಭೆಯಲ್ಲಿ ವಾಲ್ಮೀಕಿ ನಿಗಮದ ಅಕ್ರಮ ಪ್ರಕರಣ ಸರ್ಕಾರ ಹಾಗೂ ವಿಪಕ್ಷ ನಾಯಕರ ಗದ್ದಲಕ್ಕೆ ಕಾರಣವಾಯಿತು. ಸದನದಲ್ಲಿ ಜಟಾಪಟಿಯೂ ತಾರಕಕ್ಕೆ ಏರಿತ್ತು.

ಬಿಜೆಪಿ ಮಾಜಿ ಡಿಸಿಎಂ ಅಶ್ವಥ್ ನಾರಾಯಣ್ ಮಾತನಾಡಿ, ಸದನದಲ್ಲಿ ಕಾಂಗ್ರೆಸ್‌ನವರು ಯಾರೂ ಇಲ್ಲ, ಸಿಎಂ ಇಲ್ಲ, ಸಚಿವರು ಇಲ್ಲ ಎಂದು ಅಸಮಾಧಾನ ಹೊರಹಾಕಿದರು. ಖುದ್ದು ಸಿಎಂ ಮೇಲೆ ಆರೋಪವಿದೆ. ಆದರೆ ಇದರ ಚರ್ಚೆ ವೇಳೆ ಸಿಎಂ ಇಲ್ಲ. ಇದೇನಾ ಅವರ ಜವಾಬ್ದಾರಿ? ಸದನ ನಡೀತಿದೆ, ಸದನಕ್ಕೆ ಬರಲು ಸಿಎಂಗೆ ಪುರುಸೊತ್ತಿಲ್ವಾ? ಕರೆಸಿ ಸಿಎಂನಾ ಎಂದು ಕಿಡಿಕಾರಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಡಿಸಿಎಂ ಡಿ.ಕೆ.ಶಿವಕುಮಾರ್, ಹೌದು.. ನೀವು ಲೂಟಿ ಮಾಡಿದ್ದಕ್ಕೆ ಜನ ನಮ್ಮನ್ನ ಇಲ್ಲಿ ಕೂರಿಸಿರೋದು. ನೀವು ಮಾಡಬಾರದ ಲೂಟಿ ಮಾಡಿದ್ದಕ್ಕೆ ನಿಮ್ಮನ್ನ ಜನ ಅಲ್ಲಿ ಕೂರಿಸಿರೋದು. ನೀನು ಲೂಟಿ ಮಾಡುವವರ ಪಿತಾಮಹ ಅಂತಾ ಏಕವಚನದಲ್ಲಿ ವಾಗ್ದಾಳಿ ನಡೆಸಿದರು.

ಡಿಸಿಎಂ ನನ್ನ ಹೆಸರು ಹೇಳಿ ಆರೋಪ ಮಾಡಿದ್ದಾರೆ. ಹಿಟ್ ಅಂಡ್ ರನ್ ಹೇಳಿಕೆ



ಕೊಟ್ಟಿದ್ದಾರೆ. ನಾನು ಮಾಡಬಾರದ್ದು ಏನು ಮಾಡಿದ್ದೀನಿ ಅಂತಾ ಡಿಕೆಶಿವಕುಮಾರ್ ಹೇಳಬೇಕು. ನಾವು ನಿಮ್ಮ ಹಾಗೆ ಓಡಿ ಹೋಗಲ್ಲ. ಇಲ್ಲೇ ಇರ್ತೇವೆ. ಡಿ.ಕೆ.ಶಿವಕುಮಾರ್ ಕ್ಷಮೆ ಕೇಳಬೇಕು ಎಂದು ಅಶ್ವಥ್ ನಾರಾಯಣ್ ಸೇರಿದಂತೆ ಬಿಜೆಪಿ ಶಾಸಕರು ಪಟ್ಟು ಹಿಡಿದರು. ಆಡಳಿತ ಹಾಗೂ ವಿಪಕ್ಷ ನಾಯಕರ ಗದ್ದಲ ಏರ್ಪಟ್ಟಿತ್ತು.

ನಿಗಮದ ಅಕ್ರಮ ಪ್ರಕರಣ ಕುರಿತು ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಸಿಎಂ ಅವರು 187 ಕೋಟಿ ಅಕ್ರಮ ವರ್ಗಾವಣೆ ಆಗಿಲ್ಲ. ವರ್ಗಾವಣೆ ಆಗಿರೋದು 89.62 ಕೋಟಿ ಅಂದ್ರು. ಅಲ್ಲಿಗೆ ಅಕ್ರಮ ವರ್ಗಾವಣೆ ಆಗಿರೋದನ್ನ ಸಿಎಂ ಒಪ್ಪಿಕೊಂಡ ಹಾಗಾಯ್ತಲ್ಲ. ಎಂಜಿ ರಸ್ತೆಯಲ್ಲಿ ಕಳ್ಳತನಕ್ಕೆ ಅಂತಾನೇ ಖಾತೆ ತೆರೆದು 187 ಕೋಟಿ ಕದ್ದು ವರ್ಗಾವಣೆ ಮಾಡಿದ್ದಾರೆ. ಕಳವು ಮಾಡಲು 187 ಕೋಟಿ ವರ್ಗಾವಣೆ ಮಾಡಿದ್ರೆ, ಹಗರಣ ಸಹ 187 ಕೋಟಿ ಅಷ್ಟೇ ಆಗಿದೆ ಅಂತರ್ಥ. ಸಿಎಂ 89.62 ಕೋಟಿ ಅಂತಾ ಹೇಗೆ ಹೇಳ್ತಾರೆ? ಇದು ಪಕ್ಕಾ 187 ಕೋಟಿ ಅಕ್ರಮನೇ. ಕದ್ದು ಇನ್ನೊಂದು ಕಡೆ ಇಟ್ಟಿದ್ದಾರೆ ಅಂದ್ರೆ, ಅದು ನಿಗಮದ ಹಣ ತಾನೇ? ಈ ಕಳ್ಳತನ ಸಿಎಂಗೆ ಗೊತ್ತಿದ್ರೂ ಅವರದ್ದೇ ತಪ್ಪು ಗೊತ್ತಿಲ್ಲ ಅಂದ್ರೂ ಅವರದ್ದೇ ತಪ್ಪು. ಯಾಕಂದ್ರೆ, ಸಿಎಂ ಅವರೇ ಯಜಮಾನರು ಎಂದು ಆರೋಪಿಸಿದರು.

ವಾಲ್ಮೀಕಿ ಪ್ರಕರಣದಲ್ಲಿ ಎಸ್‌ಐಟಿ ವಿಫಲ ಆಗಿದೆ. ನಾಗೇಂದ್ರ ಎಸ್‌ಐಟಿ ವಿಚಾರಣೆ ಎದುರಿಸಿ ನಗ್ತಾ ಹೋಗ್ತಾರೆ, ನಗ್ತಾ ಬರ್ತಾರೆ. ಅದೇ ರೇವಣ್ಣ ಎಸ್‌ಐಟಿ ವಿಚಾರಣೆಗೆ ಮುನ್ನ ಬೇಲ್ ಬೇಲ್ ಅಂತಾ ಓಡ್ತಾರೆ. ಇದು ಎಸ್‌ಐಟಿ ವೈಫಲ್ಯ. ವಾಲ್ಮೀಕಿ ಪ್ರಕರಣ ಮುಚ್ಚಿ ಹಾಕಲು ಎಸ್‌ಐಟಿ ರಚನೆ ಆಗಿದೆಯಾ? ಬೇನಾಮಿ ಖಾತೆಗಳಿಗೆ ಹಣ ವರ್ಗಾವಣೆ ಆಗಿದೆ. ಎಸ್‌ಐಟಿ ಏನ್ ಮಾಡ್ತಿದೆ. ನಾಗೇಂದ್ರಗೆ ಒಂದು ಕಾನೂನು ಬೇರೆಯವರಿಗೆ ಒಂದು ಕಾನೂನಾ ಎಂದು ಸರ್ಕಾರದ ವಿರುದ್ಧ ಹರಿಹಾಯ್ದರು.

ಅಶೋಕ್ ಮಾತಿಗೆ ಶಾಸಕ ರಿಜ್ವಾನ್ ಅರ್ಷದ್ ಆಕ್ಷೇಪ ವ್ಯಕ್ತಪಡಿಸಿದರು. ಈ ಪ್ರಕರಣ, ಆ ಪ್ರಕರಣ ಒಂದೇನಾ? ಅಲ್ಲಿ ನೂರಾರು ಮಹಿಳೆಯರ ಮಾನ ಹೋಗಿದೆ. ಮಹಿಳೆಯರ ಮಾನದ ಬಗ್ಗೆ ಚಿಂತೆ ಇಲ್ವಾ? ಪದೇ ಪದೇ ಎರಡರ ತುಲನೆ ಮಾಡಿ ಮಾತಾಡ್ತಿದ್ದಾರೆ ಅಶೋಕ್. ರೇವಣ್ಣ ಪ್ರಕರಣ ಗಂಭೀರ ಅಲ್ವಾ ಎಂದು ಪ್ರಶ್ನಿಸಿದರು. ವಾಲ್ಮೀಕಿ ನಿಗಮದ ಪ್ರಕರಣದಲ್ಲಿ ಎಸ್ಟಿ ಸಮುದಾಯಕ್ಕೆ ಅನ್ಯಾಯ ಆಗಿದೆ. ವಾಲ್ಮೀಕಿ ಜನಾಂಗದ ಶಾಪ ಸರ್ಕಾರಕ್ಕೆ ತಟ್ಟಬಾರದು ಅಂದ್ರೆ ಕೂಡಲೇ 187 ಕೋಟಿ ವಾಪಸ್ ಪಡೆಯಿರಿ. ಪ್ರಕರಣದ ಸಿಬಿಐ ತನಿಖೆ ಆಗಬೇಕು. ಇದು ಸಿಎಂ ಹಣಕಾಸು ಇಲಾಖೆಗೆ ಬರುತ್ತೆ, ಸಿಎಂ ನೈತಿಕ ಹೊಣೆ ಹೊರಬೇಕು. ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ಕೊಡಬೇಕು ಎಂದು ಅಶೋಕ್ ಆಗ್ರಹಿಸಿದರು. ಮೇಜು ಕುಟ್ಟಿ ಬಿಜೆಪಿ ಸದಸ್ಯರು ಸ್ವಾಗತಿಸಿದರು.

ಸಿಎಂ ರಾಜೀನಾಮೆಗೆ ಅಶೋಕ್ ಒತ್ತಾಯಿಸಿದ್ದಕ್ಕೆ ಸದನದಲ್ಲಿ ಕಾಂಗ್ರೆಸ್ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಸದನದಲ್ಲಿ ಮತ್ತೆ ಗದ್ದಲ ಶುರುವಾಯಿತು. ಅಶೋಕ್ ಚರ್ಚೆ ಮುಗಿದ ಬೆನ್ನಲ್ಲೇ ವಾಕ್ಸಮರ ತಾರಕಕ್ಕೇರಿತು.

## ಕಾರವಾರ ಡಿಪೋಗೆ ನುಗ್ಗಿದ ನೀರು 50ಕ್ಕೂ ಹೆಚ್ಚು ಬಸ್ಸುಗಳು ಜಲಾವೃತ



**ಕಾರವಾರ:** ಉತ್ತರ ಕನ್ನಡದಲ್ಲಿ ಭಾರೀ ಮಳೆಯಾಗುತ್ತಿದ್ದು ನಗರದಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ಡಿಪೋ ಜಲಾವೃತವಾಗಿದೆ. 50ಕ್ಕೂ ಹೆಚ್ಚು ಬಸ್ಸುಗಳು ನೀರಿನಲ್ಲಿ ಜಲಾವೃತವಾಗಿದ್ದು ವಿವಿಧ ಭಾಗಗಳಿಗೆ ತೆರಳುವ ಬಸ್ಸುಗಳ ಸೇವೆಯಲ್ಲಿ ವ್ಯತ್ಯಯವಾಗಿದೆ. ಹಬ್ಬುವಾಡ ರಸ್ತೆಯಲ್ಲಿ ಡಿಪೋ ಇದ್ದು ಬಸ್ಸುಗಳನ್ನು ಹೊರ ತೆಗೆಯಲು ಚಾಲಕರು ಹರಸಾಹಸ ಪಡುತ್ತಿದ್ದಾರೆ. ಮೂರು ದಿನಗಳಿಂದ ಬಿಟ್ಟು ಬಿಡದೇ ಮಳೆ ಸುರಿಯುತ್ತಿದ್ದು, ಚರಂಡಿ ನೀರು ಡಿಪೋಗೆ ನುಗ್ಗಿದ ಪರಿಣಾಮ ಸಮಸ್ಯೆಯಾಗಿದೆ. ಹೊನ್ನಾವರ ಭಾಸ್ಕೇರಿ ವರ್ನಕೇರಿ ಬಳಿ ಮತ್ತೆ ಗುಡ್ಡ ಕುಸಿತವಾಗಿದ್ದು ರಾಷ್ಟ್ರೀಯ ಹೆದ್ದಾರಿ 69 ಸಂಚಾರ ತಾತ್ಕಾಲಿಕ ಬಂದ್ ಆಗಿತ್ತು. ಹೊನ್ನಾವರ -ಬೆಂಗಳೂರು ರಸ್ತೆಯಲ್ಲಿ ನೂರಾರು ವಾಹನಗಳು ಬೆಳಗ್ಗೆ ನಿಂತಿದ್ದವು. ಗುಡ್ಡ ತೆರವು ಮಾಡಿದ ಬಳಿಕ ಈಗ ವಾಹನಗಳು ಸಂಚರಿಸುತ್ತಿವೆ.

# ಅಂಕೋಲಾದ ಶಿರೂರು ಬಳಿ ಗುಡ್ಡ ಕುಸಿತಕ್ಕೆ 7 ಮಂದಿ ಬಲಿ



**ಕಾರವಾರ:** ಉತ್ತರ ಕನ್ನಡ ಜಿಲ್ಲೆಯಾದ್ಯಂತ ಭಾರಿ ಮಳೆ ಸುರಿಯುತ್ತಿದ್ದು, ಅಂಕೋಲಾ ತಾಲೂಕಿನ ಶಿರೂರು ಬಳಿ ಗುಡ್ಡ ಕುಸಿದು 7 ಮಂದಿ ಸಾವನ್ನಪ್ಪಿದ್ದಾರೆ.

ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ 7 ಮಂದಿ ಮೃತಪಟ್ಟಿರುವುದನ್ನು ದೃಢಪಡಿಸಿದ್ದಾರೆ. ಟ್ಯಾಂಕರ್ ಚಾಲಕ, ಕ್ಲೀನರ್ ಸೇರಿ 7 ಮಂದಿ ಮೃತಪಟ್ಟಿದ್ದಾರೆ.

ಗುಡ್ಡ ಕುಸಿದು 7 ಜನ ಮೃತಪಟ್ಟಿರುವುದಾಗಿ ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ. ಮಣ್ಣಿನಡಿ ಸಿಲುಕಿರುವವರ ರಕ್ಷಿಸಲು ಸೂಚನೆ ನೀಡಿದ್ದೇನೆ. ಎನ್‌ಡಿಆರ್‌ಎಫ್ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದು ಸಂಸದರು ತಿಳಿಸಿದರು.

ಭಾರೀ ಮಳೆಯಿಂದ ಹೆದ್ದಾರಿಯಲ್ಲಿ ಗುಡ್ಡ ಕುಸಿತ ಉಂಟಾಗಿತ್ತು. ರಕ್ಷಣಾ ತಂಡ ಶಾಂತಿ ನಾಯ್ಕ(37) ಎನ್ನುವವರ ಮೃತದೇಹವನ್ನು ಮಣ್ಣಿನಿಂದ ಹೊರಕ್ಕೆ ತೆಗೆದಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಗುಡ್ಡ ಕುಸಿತವಾದ ಜಾಗದಲ್ಲಿ ಒಂದು ಚಹಾ ಅಂಗಡಿ ಇತ್ತು. ಇಲ್ಲಿ ಕೆಲವರು ಚಹಾ ಸೇವಿಸುತ್ತಿದ್ದರು. ಹೀಗಾಗಿ ಎಷ್ಟು ಮಂದಿ ಅಲ್ಲಿದ್ದರು ಎನ್ನುವ ಬಗ್ಗೆ ಖಚಿತವಾದ ಮಾಹಿತಿ ಸಿಕ್ಕಿಲ್ಲ. ಟ್ಯಾಂಕರ್ ಚಾಲಕ ಮತ್ತು ಕ್ಲೀನರ್ ಟ್ಯಾಂಕರ್ ನಿಲ್ಲಿಸಿ ಚಹಾ ಸೇವಿಸುತ್ತಿದ್ದಾಗ ದುರಂತ ಸಂಭವಿಸಿದೆ.

### ಬೆಂಗಳೂರಿನಲ್ಲಿ ಮತ್ತೊಂದು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ

# ಎಂ.ಬಿ. ಪಾಟೀಲ್ ಘೋಷಣೆ

**ಬೆಂಗಳೂರು:** ನಗರ ಅಥವಾ ಬೆಂಗಳೂರು ಸುತ್ತಮುತ್ತ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಮಾಡಲಾಗುತ್ತದೆ ಎಂದು ಬೃಹತ್ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯಗಳ ಸಚಿವ ಎಂಬಿ ಪಾಟೀಲ್ ಘೋಷಣೆ ಮಾಡಿದರು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ನವೀನ್ ಪ್ರಶ್ನೆಗೆ ಸಚಿವ ಎಂ.ಬಿ ಪಾಟೀಲ್ ಉತ್ತರ ನೀಡಿದರು.

ತುಮಕೂರು ಹಾಗೂ ಚಿತ್ರದುರ್ಗದ ಮಧ್ಯೆ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಪ್ರಸ್ತಾಪ ಇಲ್ಲ. ಆದರೆ ಬೆಂಗಳೂರಿನಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮಾಡುವ ಪ್ರಸ್ತಾಪ ಇದೆ. ಈಗಾಗಲೇ ಏರ್‌ಪೋರ್ಟ್ ನಿರ್ಮಾಣಕ್ಕೆ 7-8 ಸ್ಥಳಗಳನ್ನ ಗುರುತಿಸಲಾಗಿದೆ. ಈಗ ಇರೋ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಅನುಕೂಲ ಅಗುವಂತೆ ಹಾಗೂ ರಾಜ್ಯದ ಜನರಿಗೆ ಅನುಕೂಲ ಆಗುವಂತೆ ಹೊಸ ಏರ್‌ಪೋರ್ಟ್ ನಿರ್ಮಾಣ ಮಾಡ್ತೀವಿ. ಬೆಂಗಳೂರಿನ 50-60 ಕಿಲೋಮೀಟರ್ ಸುತ್ತಮುತ್ತ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಚಿಂತನೆ ಇದೆ ಅಂತ ತಿಳಿಸಿದರು.

7-8 ಲೊಕೇಶನ್ ಗಳಲ್ಲಿ ಮೆರಿಟ್ ಆಧಾರದಲ್ಲಿ ಜಾಗ ಫೈನಲ್ ಮಾಡಿ ಏರ್ ಪೋರ್ಟ್ ಮಾಡ್ತೀವಿ. ತುಮಕೂರು, ಚಿತ್ರದುರ್ಗ ಸೇರಿ ಹಲವು ಜಿಲ್ಲೆಗಳಲ್ಲಿ



ಏರ್‌ಪೋರ್ಟ್ ಮಾಡೊಕೆ ಒತ್ತಡ ಬರ್ತಿದೆ. ಬೆಂಗಳೂರು ಮತ್ತು ರಾಜ್ಯಕ್ಕೆ ಅನುಕೂಲ ಆಗೋ ರೀತಿ ಜಾಗದ ಬಗ್ಗೆ ನಿರ್ಧಾರ ನಾವು ತೆಗೆದುಕೊಳ್ಳಬೇಕು. ಈಗ ಇರುವ ಏರ್‌ಪೋರ್ಟ್ 2035ರ ವೇಳೆಗೆ ತನ್ನ ಸಾಮರ್ಥ್ಯದ ಪೀಕ್‌ಗೆ ಹೋಗುತ್ತದೆ ಎಂದು ಎಚ್ಚರಿಸಿದ್ದಾರೆ.

ಅಷ್ಟರಲ್ಲಿ ಹೊಸ ವಿಮಾನ ನಿಲ್ದಾಣ ಮಾಡುವ ಪ್ಲ್ಯಾನ್ ನಾವು ಮಾಡಿಕೊಳ್ಳಬೇಕು. ಹೊಸ ಅಂತಾರಾಷ್ಟ್ರೀಯ ವಿಮಾನ ನಿರ್ಮಾಣ ಪ್ರಾರಂಭ ಮಾಡುವ ಬಗ್ಗೆ ಪ್ರಕ್ರಿಯೆ ಶುರು ಮಾಡಲಾಗಿದೆ. ಏರ್‌ಪೋರ್ಟ್ ನಿರ್ಮಾಣ ಮಾಡುವ ಏಜೆನ್ಸಿ (ಹೈಡಕ್) ಜೊತೆಗೂ ಚರ್ಚೆ ಆಗಿದೆ. ಎಲ್ಲಿ ಮಾಡಬೇಕು ಅಂತ ಮೆರಿಟ್ ಆಧಾರದಲ್ಲಿ ಚರ್ಚೆ ನಡೆಸಿ, ಕೇಂದ್ರದ ಜೊತೆಗೂ ಮಾತನಾಡಿ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

## ಮೊದಲನೇ ಪುಟದಿಂದ...

## ಇಂದು ಚಾಲನೆ

- ಡಿ ಮತ್ತು ಇ ರ ಯಾಂಪ್‌ಗಳು 2025 ರ ಜೂನ್ ವೇಳೆಗೆ ಕಾರ್ಯನಿರ್ವಹಿಸುವ ನಿರೀಕ್ಷೆ ಇದೆ.

ಜನರಿಗೆ ಏನು ಲಾಭ

- ರಾಗಿಗುಡ್ಡ ಹಾಗೂ ಸಿಲ್ಕ್ ಬೋರ್ಡ್ ಜಂಕ್ಷನ್ ರಸ್ತೆಯ ಉದ್ದಕ್ಕೂ ಸಂಚಾರ ದಟ್ಟಣೆ ನಿವಾರಣೆ
- ಸಿಗ್ನಲ್-ಮುಕ್ತ ಕಾರಿಡಾರ್ ಆಗಿ ಪರಿವರ್ತಿಸುವಲ್ಲಿ ಇದು ಮಹತ್ವದ ಪಾತ್ರ
- ರಾಗಿಗುಡ್ಡದಿಂದ ಪ್ರಯಾಣಿಸುವವರು ಇನ್ನು ಮುಂದೆ ಸಿಗ್ನಲ್ ಇಲ್ಲದೆ ಪ್ರಯಾಣ
- ಸಿಲ್ಕ್ ಬೋರ್ಡ್ ಜಂಕ್ಷನ್‌ಗೆ ಆರಾಮಾಗಿ ಪ್ರಯಾಣಿಸಬಹುದು.

## ಮಸೂದೆಗೆ ಸಂಪುಟ ಅನುಮೋದನೆ

ಕನ್ನಡಿಗರು ಕನ್ನಡದ ನೆಲದಲ್ಲಿ ಉದ್ಯೋಗ ವಂಚಿತರಾಗುವುದನ್ನು ತಪ್ಪಿಸಿ, ತಾಯ್ನಾಡಿನಲ್ಲಿ ನೆಮ್ಮದಿಯ ಬದುಕು ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಬೇಕು ಎಂಬುದು ನಮ್ಮ ಸರ್ಕಾರದ ಆಶಯ. ನಮ್ಮದು ಕನ್ನಡಪರವಾದ ಸರ್ಕಾರ. ಕನ್ನಡಿಗರ ಹಿತ ಕಾಯುವುದು ನಮ್ಮ ಆದ್ಯತೆಯಾಗಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

'ಕೈಗಾರಿಕೆಗಳು, ಕಾರ್ಖಾನೆಗಳು ಮತ್ತು ಇತರ ಸಂಸ್ಥೆಗಳಲ್ಲಿ ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡುವ ಕರ್ನಾಟಕ ರಾಜ್ಯ ಉದ್ಯೋಗ ಮಸೂದೆ 2024' ಗುರುವಾರ ವಿಧಾನಸಭೆಯಲ್ಲಿ ಮಂಡನೆಯಾಗಲಿದೆ ಎನ್ನಲಾಗಿದೆ.

## ಡಿನ್ನರ್ ಪಾರ್ಟಿ

ಸರ್ಕಾರದೊಳಗಿನ ಕೆಲ ತೀರ್ಮಾನಗಳಿಂದ ಬೇಸತ್ತಿರುವ ಹೊಸ ಶಾಸಕರು ಡಿನ್ನರ್ ಪಾರ್ಟಿಯಲ್ಲಿಯೂ ಅಸಮಾಧಾನ ಹೇಳಿಕೊಂಡಿದ್ದಾರೆ ಎನ್ನಲಾಗಿದೆ.

**ಕಾಂಗ್ರೆಸ್ ಶಾಸಕರ ಅಸಮಾಧಾನಗಳೇನು?:** ವರ್ಗಾವಣೆ ವಿಚಾರಗಳಿಂದಲೂ ನಮಗೆ ಲಾಭ ಇಲ್ಲ. ನಮಗೆ ಹೆಚ್ಚಿನ ಅನುದಾನ ಕೂಡ ಸಿಗುತ್ತಿಲ್ಲ. ಹೀಗೆಯೇ ಆದರೆ ಶಾಸಕರಾಗಿ ನಮಗೆ ಏನು ಪ್ರಯೋಜನ ಎಂದು ಶಾಸಕರು ಅಸಮಾಧಾನ ತೋಡಿಕೊಂಡಿದ್ದಾರೆ. ಇಷ್ಟೇ ಅಲ್ಲದೆ, ಪಿಡಿಒ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡುವ ತೀರ್ಮಾನವನ್ನು ಸರ್ಕಾರ ತೆಗೆದುಕೊಂಡಿದೆ. ಇದರ ಜೊತೆ ಸಬ್ ರಿಜಿಸ್ಟ್ರಾರ್ ವರ್ಗಾವಣೆ ಕೂಡ ಕೌನ್ಸಿಲಿಂಗ್ ಮೂಲಕ ಮಾಡುವ ತೀರ್ಮಾನ ಕೈಗೊಳ್ಳಲಾಗಿದೆ. ಇನ್‌ಸ್ಪೆಕ್ಟರ್ ವರ್ಗಾವಣೆ ಎರಡು ವರ್ಷಕ್ಕೊಮ್ಮೆ ಮಾಡಲಾಗಿದೆ. ಹೀಗಾಗಿ ವರ್ಗಾವಣೆ ವಿಚಾರದಿಂದಲೂ ನಮ್ಮನ್ನು ದೂರ ಇಡಲಾಗಿದೆ ಎಂದು ಶಾಸಕರು ಅಳಲು ತೋಡಿಕೊಂಡಿದ್ದಾರೆ.

ಇತ್ತ ಸರ್ಕಾರದಿಂದ ಸಮರ್ಪಕವಾದ ಅನುದಾನ ಕೂಡ ಸಿಗುತ್ತಾ ಇಲ್ಲ. ಹೊಸದಾಗಿ ಆಯ್ಕೆಯಾದ ಶಾಸಕರು ನಾವು. ನಮ್ಮ ಕಷ್ಟ ಕೇಳುವವರು ಯಾರು ಎಂದು ಅವರು ಅಲವತ್ತುಕೊಂಡಿದ್ದಾರೆ.

ಗುರುವಾರ ಕಾಂಗ್ರೆಸ್ ಸಿಎಲ್‌ಪಿ ಸಭೆ ನಡೆಯಲಿದ್ದು, ಅದಕ್ಕೂ ಮುನ್ನ ಡಿನ್ನರ್ ಪಾರ್ಟಿ ನೆಪದಲ್ಲಿ ಕಾಂಗ್ರೆಸ್ ನೂತನ ಶಾಸಕರು ಒಗ್ಗೂಡಿದ್ದಾರೆ. ಹೊಸ ಶಾಸಕರು ಸಿಎಲ್‌ಪಿ ಸಭೆಯಲ್ಲಿ ಕೂಡ ತಮ್ಮ ಅಸಮಾಧಾನ ವ್ಯಕ್ತಪಡಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

## ಸೇರ್ಪಡೆ ಸಾಧ್ಯತೆ

ಅಜಿತ್ ಪವಾರ್ ಪಾಳೆಯದ ಕೆಲವು ನಾಯಕರು ಶರದ್ ಪವಾರ್ ಪಾಳಯಕ್ಕೆ ಮರಳಲು ಸಿದ್ಧರಿದ್ದಾರೆ ಎಂಬ ಗುಸುಗುಸು ನಡುವೆಯೇ ರಾಜೀನಾಮೆ ಸುದ್ದಿ ಮುನ್ನೆಲೆಗೆ ಬಂದಿದೆ. ಈ ತಿಂಗಳ ಆರಂಭದಲ್ಲಿ, ಶರದ್ ಪವಾರ್ ಅವರು ತಮ್ಮ ಪಕ್ಷದ ಹಿರಿಯ ನಾಯಕ ಜಯಂತ್ ಪಾಟೀಲ್ ಅವರನ್ನು ಭೇಟಿಯಾದ ಎನ್‌ಸಿಪಿ ಬಣದ ಕೆಲವು ಶಾಸಕರು ಹೇಳಿದ್ದಾರೆ

ಮಹಾರಾಷ್ಟ್ರದ ಸಚಿವ ಮತ್ತು ಹಿರಿಯ ಎನ್‌ಸಿಪಿ ನಾಯಕ ಛಗನ್ ಭುಜಬಲ್ ಕೂಡ ಬಣ ತೊರೆಯಬಹುದು ಎನ್ನುವ ಊಹಾಪೋಹಗಳಿವೆ. ಕಳೆದ ತಿಂಗಳು, ಮಹಾ ವಿಕಾಸ್ ಅಘಾಡಿಯ ಭಾಗವಾದ ಶಿವಸೇನೆಯ (ಯುಬಿಟಿ) ಹಿರಿಯ ನಾಯಕರೊಬ್ಬರು ಭುಜಬಲ್ ಅವರನ್ನು ಭೇಟಿಯಾಗಿದ್ದರು.

ಬಾರಾಮತಿ ಲೋಕಸಭಾ ಚುನಾವಣೆಯಲ್ಲಿ ಸುಪ್ರಿಯಾ ಸುಳೆ ವಿರುದ್ಧ ಸೋತ ನಂತರ ಅಜಿತ್ ಪವಾರ್ ಅವರು ತಮ್ಮ ಪತ್ನಿ ಸುನೇತ್ರಾ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿದ ಬಗ್ಗೆ ಭುಜಬಲ್ ಅಸಮಾಧಾನಗೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಪ್ರಕರಣಗಳೂ ಏರಿಕೆ

ಇದುವರೆಗೂ ಒಂದು ತಿಂಗಳಲ್ಲಿ 303 ಪ್ರಕರಣ ದಾಖಲಾಗಿದೆ.

ನಗರದ ಜನರು ಎಚ್ಚರಿಕೆ ವಹಿಸಬೇಕಾಗಿದೆ. ಸಂಧಿಗಳಲ್ಲಿ ನೋವು, ಜ್ವರ ಕಂಡು ಬಂದಲ್ಲಿ ವೈದ್ಯರನ್ನ ಸಂಪರ್ಕಿಸಿ ಎಂದು ತಜ್ಞರು ಸಲಹೆ ನೀಡಿದ್ದಾರೆ. ಲಕ್ಷಣಗಳು ಕಂಡುಬಂದಲ್ಲಿ ಚಿಕುನ್ ಗುನ್ಯಾ ಪರೀಕ್ಷೆ ಮಾಡಿಸಿದರೆ ಉತ್ತಮ ಎಂದು ವೈದ್ಯರು ಸಲಹೆ ನೀಡಿದ್ದಾರೆ.

ಜುಲೈ 15ರ ಅಂಕಿಅಂಶ ಪ್ರಕಾರ ರಾಜ್ಯದಲ್ಲಿ 937 ಪ್ರಕರಣಗಳು ವರದಿಯಾಗಿವೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 176 ಪ್ರಕರಣಗಳು ಪತ್ತೆಯಾಗಿದ್ದು, ಈವರೆಗಿನ ಒಟ್ಟು ಪ್ರಕರಣಗಳ ಸಂಖ್ಯೆ 1,113 ಆಗಿದೆ.

ಇದರ ಜೊತೆಗೆ ಈಗಾಗಲೇ ನಗರದ ಕೆಸಿ ಜನರಲ್, ವಿಕ್ಟೋರಿಯಾ, ಜಯನಗರ ಜನರಲ್ ಆಸ್ಪತ್ರೆಯಲ್ಲಿ ಡೆಂಗ್ಯೂಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಇದೀಗ ಚಿಕುನ್ ಗುನ್ಯಾದಂತಹ ಪ್ರಕರಣಗಳ ಗುಣಲಕ್ಷಣಗಳು ಕಂಡು ಬಂದಲ್ಲಿ, ಅಂತಹವರನ್ನ ಪರೀಕ್ಷೆಗೆ ಒಳಪಡಿಸಲಾಗ್ತಿದೆ. ಪಾಸಿಟಿವ್ ಬಂದವರಿಗೆ ಚಿಕಿತ್ಸೆ ಹಾಗೂ ಮೆಡಿಸನ್ ನೀಡಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ.

**ಡೆಂಗ್ಯೂ ಪ್ರಕರಣಗಳ ಸಂಖ್ಯೆ ಶೇ 200ರಷ್ಟು ಏರಿಕೆ:** ರಾಜ್ಯದಲ್ಲಿ ಕಳೆದ ವರ್ಷಕ್ಕೆ ಹೋಲಿಕೆ ಮಾಡಿದ್ರೆ, ಡೆಂಗ್ಯೂ ಪ್ರಕರಣಗಳ ಸಂಖ್ಯೆ ಶೇ 200 ಕ್ಕೂ ಹೆಚ್ಚು ಏರಿಕೆ ಕಂಡಿದೆ. ಕಳೆದ ವರ್ಷ ಜುಲೈ 14 ರವೇಳಗೆ ರಾಜ್ಯದಲ್ಲಿ ಒಟ್ಟು 1818 ಡೆಂಗ್ಯೂ ಕೇಸ್ ಪತ್ತೆಯಾಗಿದ್ದವು. ಬಿಬಿಎಂಪಿ ವ್ಯಾಪ್ತಿಯಲ್ಲಿ 905 ಡೆಂಗ್ಯೂ ಕೇಸ್ ಪತ್ತೆಯಾಗಿದ್ದವು. ಈ ಮೂಲಕ ಒಟ್ಟು 2723 ಕೇಸ್ ದಾಖಲಾಗಿದ್ದು ಯಾವುದೇ ಸಾವು ಕಂಡು ಬಂದಿರಲಿಲ್ಲ, ಆದರೆ ಈ ವರ್ಷ ಜುಲೈ ವೇಳೆಗೆ ದಾಖಲೆಯ 9527 ಕೇಸ್ ಪತ್ತೆಯಾಗಿವೆ.

ಒಟ್ಟಿನಲ್ಲಿ ನಗರದಲ್ಲಿ ವೈದ್ಯರು ನಡುವೆ ಚಿಕುನ್ ಗುನ್ಯಾ ಕೂಡಾ ಆತಂಕವನ್ನು ಹುಟ್ಟಿಸಿದ್ದು, ಪ್ರಕರಣಗಳು ಇನ್ನಷ್ಟು ಹೆಚ್ಚುವ ಮುನ್ನ ಆರೋಗ್ಯ ಇಲಾಖೆ ಮುಂಜಾಗ್ರತೆ ವಹಿಸಬೇಕಿದೆ. ಜನರು ಕೂಡಾ ತಮ್ಮ ಮನೆಗಳ ಬಳಿ ಸ್ವಚ್ಛತೆ ಕಾಪಾಡಿ ಡೆಂಗ್ಯೂ ಹಾಗೂ ಚಿಕುನ್ ಗುನ್ಯಾದಿಂದ ದೂರ ಉಳಿಯಬೇಕಿದೆ.

## 16 ಜನರು ನಾಪತ್ತೆ

2007ರಲ್ಲಿ ನಿರ್ಮಿಸಲಾದ 117 ಮೀಟರ್ ಉದ್ದದ ತೈಲ ಉತ್ಪನ್ನ ಟ್ಯಾಂಕರ್ ಎಲ್ ಎಸ್ ಇಜಿ ಶಿಪ್ಪಿಂಗ್ ಡೇಟಾ ಬಹಿರಂಗಪಡಿಸಿದೆ. ಸ್ವಲ್ಪ ದೂರದವರೆಗೆ ಪ್ರಯಾಣವಿದ್ದರೆ ಮಾತ್ರ ಈ ಟ್ಯಾಂಕರ್ ನೀಡಲಾಗುತ್ತದೆ.

ಒಮಾನ್‌ನ ನೈರುತ್ಯ ಕರಾವಳಿಯಲ್ಲಿರುವ ಡುಕ್ಮ್ ಬಂದರು ದೇಶದ ಪ್ರಮುಖ ತೈಲ ಮತ್ತು ಅನಿಲ ಗಣಿಗಾರಿಕೆ ಯೋಜನೆಗಳಿಗೆ ಪ್ರಮುಖ ಕೇಂದ್ರವಾಗಿದೆ.

ಗಂಗಾ ನದಿಯಲ್ಲಿ 17 ಮಂದಿ ಪ್ರಯಾಣಿಸುತ್ತಿದ್ದ ದೋಣಿ ಮುಳುಗಡೆ, 6 ಮಂದಿ ನಾಪತ್ತೆ ಗಂಗಾನದಿಯಲ್ಲಿ 17 ಮಂದಿ ಪ್ರಯಾಣಿಸುತ್ತಿದ್ದ ದೋಣಿ ಮುಳುಗಡೆಯಾಗಿದ್ದು, 6 ಮಂದಿ ನಾಪತ್ತೆಯಾಗಿರುವ ಘಟನೆ ನಡೆದಿದೆ. ಪಾಟ್ನಾದಿಂದ 70 ಕಿಮೀ ದೂರದಲ್ಲಿರುವ ಬಾರ್ಹ್ ಪಟ್ಟಣದ ಬಳಿ ಗಂಗಾ ನದಿಯಲ್ಲಿ ಮುಳುಗಿದೆ. ಹನ್ನೊಂದು ಪ್ರಯಾಣಿಕರು ಈಜಿ ದಡ ತಲುಪಿದ್ದಾರೆ, ಉಳಿದ ಆರು ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ.

ಘಟನೆ ಸಂಭವಿಸಿದಾಗ ಬೋಟ್ ಬರ್ಹ್‌ನ ಉಮಾನಾಥ್ ಘಾಟ್‌ನಿಂದ ಡಿಯಾರಾಗೆ ಪ್ರಯಾಣಿಸುತ್ತಿದ್ದು, ಪ್ರಸ್ತುತ ಬೋಟ್‌ನಲ್ಲಿರುವ ಉಳಿದ ಆರು ಪ್ರಯಾಣಿಕರಿಗಾಗಿ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಳೆದ ತಿಂಗಳ ಆರಂಭದಲ್ಲಿ ಬಿಹಾರದ ಮಹಾವೀರ್ ತೋಲಾ ಗ್ರಾಮದ ಬಳಿ ಗಂಗಾ ನದಿಯಲ್ಲಿ ದೋಣಿ ಮುಳುಗಿ ಇಬ್ಬರು ನಾಪತ್ತೆಯಾಗಿದ್ದರು. ಮೇ 19 ರಂದು ಬೆಳಿಗ್ಗೆ 7-8 ರ ಸುಮಾರಿಗೆ ಕೆಲವು ರೈತರು ತಮ್ಮ ತರಕಾರಿಗಳನ್ನು ದೋಣಿಯಲ್ಲಿ ತೆಗೆದುಕೊಂಡು ಹೋಗುತ್ತಿದ್ದಾಗ ಈ ಘಟನೆ ಸಂಭವಿಸಿತ್ತು.

## ದಿನಾಂಕ ನಿಗದಿ

ಫ್ಲವರ್ ಶೋನಲ್ಲಿ 60ಕ್ಕೂ ಹೆಚ್ಚು ಬಗೆಯ ಹೂಗಳನ್ನು ಬಳಕೆ ಮಾಡಿಕೊಳ್ಳುತ್ತಿದ್ದು, ಒಟ್ಟು 15 ಲಕ್ಷದಷ್ಟು ಹೂಗಳನ್ನು ಬಳಕೆ ಮಾಡಿಕೊಳ್ಳುವ ಸಾಧ್ಯತೆ ಇದೆ. ಸದ್ಯ ಲಾಲ್ ಬಾಗ್ ಗಾರ್ಡನ್‌ನಲ್ಲಿ 4 ಸಾವಿರಕ್ಕೂ ಹೆಚ್ಚು ವಿವಿಧ ಬಗೆಯ ಹೂಗಳನ್ನು ಸಿದ್ದಮಾಡಿಕೊಳ್ಳಲಾಗುತ್ತಿದೆ.

**ಫ್ಲವರ್ ಶೋನಲ್ಲಿ ಯಾವೆಲ್ಲ ಹೂಗಳು?:** ಫ್ಲವರ್ ಶೋನಲ್ಲಿ ಆಂಥೋರಿಯಂ ಹೂಗಳು, ಗುಲಾಬಿ, ಜರ್ಬೆರಾ, ಆರ್ಕಿಡ್, ನಂದಿ ಗಿರಿಧಾಮದ ಇಂಪೇಷನ್ಸ್ ಹೂಗಳು, ರೆಡ್‌ಹಾಟ್ ಪೋಕರ್, ಆಲ್‌ಸ್ಟೋಮೇರಿಯನ್ ಲಿಲ್ಲಿ, ಪೂಷಿಯಾ, ಅಗಪಾಂಥಸ್, ಕ್ಯಾಲಾಲಿಲ್ಲಿ, ಸುಗಂಧ ರಾಜ, ಕುಂಡಗಳಲ್ಲಿ ಅರಳಿದ ದೇಶ-ವಿದೇಶಗಳ ಹತ್ತಾರು ಬಗೆಯ ಹೂಗಳು, ಬೋಗನ್‌ವಿಲ್ಲಾದ ಹೂ ಗಿಡಗಳು, ಲಿಲ್ಲಿ, ಜರ್ ಬೆರಾ ಹೂಗಳು, ಕೊಲಂಬಿಯಾ, ನೆದರ್ ಲ್ಯಾಂಡ್ಸ್, ಬೆಲ್ಜಿಯಂ, ಕೀನ್ಯಾ, ಆಸ್ಟ್ರೇಲಿಯಾದಿಂದ ಆಮದು ಮಾಡಿದ ಹೂಗಳು ಇರಲಿವೆ. ಅಲ್ಲದೇ ವಿವಿಧ ಬಗೆಯ ಆಕರ್ಷಕ ಬೋನ್ಸಾಯ್, ಇಕೆಬಾನ ಹಾಗೂ ತರಕಾರಿ ಕೆತ್ತನೆ ಪ್ರದರ್ಶನ, ತೋಟಗಳ ಸ್ಪರ್ಧೆ ಮತ್ತು ನಾನಾ ಹೂವಿನ ಜೋಡಣೆ ಕಲೆಗಳ ಪ್ರದರ್ಶನವೂ ಇರಲಿದೆ. ಸಧ್ಯ ಒಂದೊಂದೆ ವಿದೇಶಿಹೂಗಳನ್ನ ತರಿಸಿಕೊಳ್ಳಲಾಗುತ್ತಿದೆ ಎಂದು ಲಾಲ್ ಬಾಗ್ ನಿರ್ದೇಶಕ ರಮೇಶ್ ತಿಳಿಸಿದ್ದಾರೆ.

**ಟಿಕೆಟ್ ದರ ಎಷ್ಟು?:** ಫ್ಲವರ್ ಶೋ ವೀಕ್ಷಿಸಲು ವಯಸ್ಕರಿಗೆ 80 ರೂ. ಪ್ರವೇಶ ದರ ನಿಗದಿಯಾಗಿದ್ದು, ಶಾಲಾ ಮಕ್ಕಳಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದೆ. ಇದು 214ನೇ ಫಲಪುಷ್ಪ ಪ್ರದರ್ಶನವಾಗಿರಲಿದ್ದು, ಹಲವು ವಿಶೇಷತೆಗಳನ್ನು ಒಳಗೊಂಡಿರುತ್ತದೆ.

## ಅಂತ್ಯಸಂಸ್ಕಾರ ಮಾಡಲೂ ಜನರಿಲ್ಲ

ಶಿರೂರು ಬಳಿ ಕೇಂದ್ರ ಐಆರ್‌ಬಿ ಹೆದ್ದಾರಿ ಕಾಮಗಾರಿ ನಡೆಸುತ್ತಿದ್ದು ಇದೇ ಕಾಮಗಾರಿ ನಡೆಯುಗ ಸ್ಥಳದಲ್ಲೇ ಲಕ್ಷ್ಮಣ ನಾಯ್ಕ್ ಕುಟುಂಬ ಟೀ ಅಂಗಡಿ ಇಟ್ಟುಕೊಂಡು ವ್ಯಾಪಾರ ಮಾಡುತ್ತಿದ್ದರು. ಸತತ ಮಳೆಯಿಂದಾಗಿ ಗುಡ್ಡದಲ್ಲಿ ನೀರು ಹರಿದು ಗುಡ್ಡ ಕುಸಿತವಾಗಿದೆ. ಕುಸಿತ ಗುಡ್ಡ ರಸ್ತೆಯಲ್ಲಿ ನಿಂತ ಎಲ್‌ಪಿಜಿ ಟ್ಯಾಂಕರ್ ಮೇಲೆ ಬಿದ್ದಿದೆ. ಹೆದ್ದಾರಿ ಬದಿ ನಿಲ್ಲಿಸಲಾಗಿದ್ದ ಗ್ಯಾಸ್ ಟ್ಯಾಂಕರ್ ಗಂಗಾವಳಿ ನದಿಗೆ ಉರುಳಿದ್ದು, ನದಿಯಲ್ಲಿ ತೇಲುತ್ತಿದೆ. ಹೈವೇ ಪಕ್ಕ ಟ್ಯಾಂಕರ್ ನಿಲ್ಲಿಸಿದ್ದ ಚಾಲಕ ಮತ್ತು ಕ್ಲೀನರ್ ಟೀ ಕುಡಿಯುವಾಗ ಈ ದುರಂತ ಸಂಭವಿಸಿದೆ.

ಸ್ಥಳಕ್ಕೆ ಭೇಟಿ ನೀಡಿ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳು ವೈದ್ಯ ಹಾಗೂ ಶಾಸಕ ಸತೀಶ್ ಶೈಲ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಳೆದ ಒಂದು ವರ್ಷದಿಂದ ಕೇಂದ್ರ ಐಆರ್‌ಬಿ ಅಧಿಕಾರಿಗಳಿಗೆ ರಸ್ತೆ ತೆರವು ಮಾಡಿಕೊಡುವಂತೆ ಮಾಡಿದ್ರು, ಗಮನ ಹರಿಸಲಿಲ್ಲ. ಸತತ ಮಳೆ ಹಾಗೂ ಐಆರ್‌ಬಿ ಅಧಿಕಾರಿಗಳ ಕಾಮಗಾರಿಗಳಿಂದಲೇ ಈ ದುರಂತವಾಗಿದೆ ಎಂದು ಮಂಕಾಳು ವೈದ್ಯ ಅಸಮಧಾನ ವ್ಯಕ್ತಪಡಿಸಿದರು.

## ಪ್ರೇಮಿ

ಆಗ ಮೂವರ ಕತ್ತು ಸೀಳಿ ಕೊಲೆ ಮಾಡಿದ್ದ ಆರೋಪಿ ತಾರಕೇಶ್ವರ್ ಪತ್ನಿಯನ್ನು ಕೊಲ್ಲಲು ಬಂದಾಗ ಅವರಿಗೆ ಎಚ್ಚರವಾಗಿ ಓಡಿ ಹೋಗಿ ಪ್ರಾಣ ಉಳಿಸಿಕೊಂಡಿದ್ದಾರೆ. ಆರೋಪಿ ಪ್ರೇಯಸಿಯ ತಾಯಿಯ ಭುಜದ ಮೇಲೆ ಹಲ್ಲೆ ನಡೆಸಿದ್ದಾನೆ. ಈ ಕೊಲೆಯ ಹಿಂದೆ ಪ್ರೇಮ ಪ್ರಕರಣ ಬೆಳಕಿಗೆ ಬಂದಿದೆ.

ಪೊಲೀಸರು ತಾರಕೇಶ್ವರ್ ಪತ್ನಿ ಶೋಭಾ ದೇವಿಯ ಹೇಳಿಕೆಯನ್ನು ದಾಖಲಿಸಿದ್ದಾರೆ. ಅನುಮಾನದ ಮೇಲೆ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇಬ್ಬರು ಆರೋಪಿಗಳು ತಮ್ಮ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಮನೆಯವರೆಲ್ಲರೂ ತಾರಸಿಯ ಮೇಲೆ ಮಲಗಿದ್ದರು, ಇಬ್ಬರು ಆರೋಪಿಗಳು ಬಂದು ಹರಿತವಾದ ಆಯುಧದಿಂದ ಒಬ್ಬರಾದ ಮೇಲೆ ಒಬ್ಬರ ಕತ್ತನ್ನು ಸೀಳಿ ಕೊಲೆ ಮಾಡಿದ್ದಾರೆ.

ಬಳಿಕ ಶೋಭಾದೇವಿ ಹತ್ಯೆ ಮಾಡಲು ಯತ್ನಿಸಿದಾಗ ಆಕೆ ಓಡಿಹೋಗಲು ಪ್ರಯತ್ನಿಸಿದಳು ಆಗ ಆಕೆಯ ಮೇಲೂ ಹಲ್ಲೆ ನಡೆಸಿದ್ದಾರೆ. ಆರೋಪಿ ರೊಷನ್ ಹಾಗೂ ಚಾಂದಿನಿ ಆಗಾಗ ಮಾತನಾಡುತ್ತಿದ್ದರು, ಆದರೆ ಕುಟುಂಬದವರ ಮಾತಿನಿಂದಾಗಿ ಅವರಿಬ್ಬರು ಮಾತನಾಡುವುದನ್ನು ನಿಲ್ಲಿಸಿದ್ದರು.

ಆಕೆ ನನ್ನನ್ನು ಮದುವೆಯಾಗದಿದ್ದರೆ ಬೇರೆಯವರನ್ನು ಮದುವೆಯಾಗಲು ನಾನು ಬಿಡುವುದಿಲ್ಲ ಎಂದು ಹೇಳಿ ಸ್ನೇಹಿತನ ಜತೆ ಮನೆಗೆ ಹೋಗಿ ಮೂವರನ್ನು ಹತ್ಯೆ ಮಾಡಿದ್ದ. ಪೊಲೀಸರು ಸುಧಾಂಶು ಅಲಿಯಾಸ್ ರೋಷನ್ ನನ್ನು ಬಂಧಿಸಿದ್ದಾರೆ.

## ಶಿಲ್ಪ ಪತ್ತೆ

ಬಲಭಾಗದ ಇನ್ನೊಂದು ಕೈಯಲ್ಲಿ ತ್ರಿಶೂಲವಿದ್ದು ಎಡಗೈಯೊಂದು ಭಗ್ನಗೊಂಡಿದೆ. ಇನ್ನೊಂದು ಕೈಯಲ್ಲಿ ಪಾಶವಿರುವಂತ ಲಕ್ಷಣ ಶಿಲ್ಪದಲ್ಲಿ ಕಂಡುಬಂದಿದೆ. ಶಿರದ ಎಡ, ಬಲ ಭಾಗದಲ್ಲಿ ಸೂರ್ಯ ಚಂದ್ರರ ಕೆತ್ತನೆ ಇದೆ. ಶಿಲ್ಪದಲ್ಲಿ ಯಾವುದೇ ಶಾಸನ ಕೆತ್ತನೆ ಇಲ್ಲ ಎನ್ನಲಾಗಿದೆ. ಸದ್ಯ ಇದು ಯಾವ ರಾಜರ ಕಾಲದ್ದು, ಏಕೆ ಕೆತ್ತಿಸಲಾಗಿತ್ತು. ಕೆತ್ತಿದ್ದು ಯಾರು ಎಂಬ ಬಗ್ಗೆ ಸಂಶೋಧನೆ ನಡೆಯಬೇಕಿದೆ.

**ನಾಗಮಂಗಲದಲ್ಲಿ ಹೊಯ್ಸಳರ ಕಾಲದ ಅಪರೂಪದ ಕಲ್ಲು ಪತ್ತೆ:** ಇನ್ನು ಮತ್ತೊಂದೆಡೆ ಇತ್ತೀಚೆಗೆ ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ಮಾಚಲಘಟ್ಟ ಕುಗ್ರಾಮದ ಮಲ್ಲೇಶ್ವರ ದೇವಸ್ಥಾನದ ಬಳಿ ಹೊಯ್ಸಳರ ಕಾಲದ ಶಾಸನಗಳು ಮತ್ತು ರೇಖಾಚಿತ್ರಗಳು ಇರುವ ಅಪರೂಪದ ಕಲ್ಲು ಪತ್ತೆಯಾಗಿತ್ತು. ಪ್ರೀಮಿಯರ್ ಸೆಂಟ್ರಲ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯನ್ ಲ್ಯಾಂಗ್ವೇಜಸ್ (ಅಖಖಐ) ನ ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರದ ಸಂಶೋಧಕರು ನಡೆಸಿದ ಕ್ಷೇತ್ರ ಕಾರ್ಯದಲ್ಲಿ ಶಿಲೆ ಪತ್ತೆಯಾಗಿತ್ತು. ತಜ್ಞರ ಪ್ರಕಾರ, ಇದು 16 ನೇ ಶತಮಾನದ ಶಿಲಾ ಶಾಸನವಾಗಿದ್ದು, ದುಷ್ಟಶಕ್ತಿಗಳನ್ನು ಗ್ರಾಮದಿಂದ ದೂರವಿಡಲು ಸ್ಥಾಪಿಸಲಾಗಿದೆ ಎಂದು ತಿಳಿದುಬಂದಿತ್ತು.

ಅಲ್ಲದೆ ಸಿಕ್ಕ ಚಪ್ಪಡಿ ಕಲ್ಲಿನಲ್ಲಿ ರೇಖೆಗಳನ್ನು ಕೆತ್ತಲಾಗಿದ್ದು, ಬರಹಗಳು ಮೋದಿ ಲಿಪಿಯಲ್ಲಿದ್ದವು. ಅರ್ಧ ಶಿಲೆ (ಮೇಲಿನ ಭಾಗ) ಮಾತ್ರ ಪತ್ತೆಯಾಗಿದ್ದು, ಇನ್ನೂ ಅರ್ಧ ಶಿಲೆ ಭೂಮಿಯೊಳಗೆ ಹುದುಗಿ ಹೋಗಿದೆ ಎಂದು ಹೇಳಲಾಗುತ್ತಿದೆ. ಹಿರಿಯ ಸಂಶೋಧನಾ ಸಹೋದ್ಯೋಗಿ ಶಶಿಧರ ಸಿಎ ಅವರು ಈ ಸಂಶೋಧನೆಯನ್ನು ನಡೆಸಿದರು. ಸಿಐಐಎಲ್ ನಿರ್ದೇಶಕ ಶೈಲೇಂದ್ರ ಮೋಹನ್ ಅವರ ಮಾರ್ಗದರ್ಶಕರಾಗಿದ್ದರು.

## ನೀವು ಮುಡಾ ಹಗರಣದಿಂದ ಗೆದ್ದು ಬನ್ನಿ: ಅಲ್ಲಿವರೆಗೆ ರಾಜಿನಾಮೆ ಕೊಡಿ ಸಿದ್ದರಾಮಯ್ಯ!



**ತುಮಕೂರು:** ರಾಜ್ಯದ ಸಾಂಸ್ಕೃತಿಕ ನಗರ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಿವೇಶನ ಹಂಚಿಕೆಯಲ್ಲಿ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಹೆಸರಿನಲ್ಲಿ ದೊಡ್ಡ ಹಗರಣ ನಡೆದಿದೆ. ಸೀತೆ ಅಗ್ನಿ ಪರೀಕ್ಷೆ ಗೆದ್ದುಬಂದಂತೆ ನೀವೂ ಮುಡಾ ಹಗರಣದಿಂದ ಗೆದ್ದುಬನ್ನಿ.. ಅಲ್ಲಿವರೆಗೂ ನೀವು ರಾಜೀನಾಮೆ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾಜಿ ವಿಧಾನ ಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ಸವಾಲು ಹಾಕಿದ್ದಾರೆ.

ತುಮಕೂರು ಜಿಲ್ಲೆಯ ಶಿರಾದಲ್ಲಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸೀತೆ ಅಗ್ನಿ ಪರೀಕ್ಷೆ ಗೆದ್ದು ಬಂದಂತೆ ನೀವು ಗೆದ್ದು ಬನ್ನಿ ಅಲ್ಲಿವರೆಗೂ ರಾಜೀನಾಮೆ ಕೊಡಿ. ಮುಡಾ ಹಗರಣ ಬೆಂಗಳೂರಿನ ಬದಲಿ ಸೈಟ್ ಗಿಂತ ದೊಡ್ಡ ಹಗರಣವಾಗಿದೆ. ಸರಿ ಸುಮಾರು 5,000 ಕೋಟಿ ರೂ.ಗಿಂತಲೂ ಅಧಿಕ ಹಗರಣ ನಡೆದಿದೆ. ಮೂಡಾ ಹಾಗೂ ವಾಲ್ಮೀಕಿ ನಿಮಗದ ಹಗರಣಗಳನ್ನು ತನಿಖೆ ಮಾಡಲು ಸಿಬಿಐಗೆ ವಹಿಸಬೇಕು. ಹಾಗಾದಲ್ಲಿ ಮಾತ್ರ ಸತ್ಯಾಂಶ ಹೊರಗೆ ಬರಲಿದೆ ಎಂದು ಹೇಳಿದ್ದಾರೆ.

ಮುಡಾ ಹಗರಣದ ಸತ್ಯಾಂಶ ಹೊರ ಬರುವವರೆಗೂ ಸಿಎಂ ಸಿದ್ಧರಾಮಯ್ಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಸಮಾಜವಾದಿ ಹೋರಾಟದಿಂದ ಬಂದ ನೀವು ಹೋರಾಟದಿಂದ ಬದುಕು ಕೊಟ್ಟಿಕೊಂಡವರು. ಬಿಜೆಪಿ ಮುಖಂಡರ ಹೋರಾಟ ಹತ್ತಿಕ್ಕುವ ನಿಮಗೆ ಉಳಿಗಾಲವಿಲ್ಲ. ಲೋಕಾಯುಕ್ತ ಸಂಸ್ಥೆಯನ್ನು ಸಾಯಿಸಿದ್ದು ಇದೇ ಸಿದ್ಧರಾಮಯ್ಯ, ಲೋಕಾಯುಕ್ತ ಸಾಯಿಸಿ ಎಸಿಬಿ ಮಾಡಿದ್ದಾರೆ. ಆದರೆ, ಎಸಿಬಿ ಕೆಲಸ ಏನೆಂದರೆ ತಮಗೆ ಆಗದವರ ವಿರುದ್ಧ ಕೇಸ್ ಹಾಕೋದು ಆಗಿದೆ. ಲೋಕಾಯುಕ್ತ ಗಟ್ಟಿಯಾಗಿದಿದ್ದರೆ ಸಿಎಂ ಸೇರಿ ಹಲವು ಸಚಿವರು ಜೈಲು ಪಾಲಾಗುತಿದ್ದರು ಎಂದು ಟೀಕೆ ಮಾಡಿದರು.

ತುಮಕೂರು-ಚಿತ್ರದುರ್ಗ ನಡುವೆ ಏರ್ಪೋರ್ಟ್ ಇಲ್ಲ; ತಮಿಳುನಾಡಿಗೆ ಕೌಂಟರ್ ಕೊಡಲು ಬೆಂಗಳೂರಲ್ಲೇ 2ನೇ ಏರ್ಪೋರ್ಟ್ ನಿರ್ಮಾಣ

**ತುಮಕೂರು ಬಳಿ ಏರ್ಪೋರ್ಟ್ ನಿರ್ಮಾಣಕ್ಕೆ ಗುಡ್‌ಬೈ ಹೇಳಿದ ಸರ್ಕಾರ:** ರಾಜ್ಯದಲ್ಲಿ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೊರೆಯನ್ನು ತಗ್ಗಿಸಲು ತುಮಕೂರು - ಚಿತ್ರದುರ್ಗ ಮಧ್ಯದಲ್ಲಿ ಹೊಸ ವಿಮಾನ ನಿಲ್ದಾಣ ಮಾಡುವ ಪ್ರಸ್ತಾವನೆ ಇಲ್ಲ. ಬೆಂಗಳೂರಿನಲ್ಲಿಯೇ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ 7 ಲೊಕೇಶನ್ ಗುರುತಿಸಲಾಗಿದ್ದು, ಅದನ್ನು ಕೇಂದ್ರದ ಅನುಮತಿ ಪಡೆದು ಅಂತಿಮಗೊಳಿಸಲಾಗುವುದು ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

ಸಂಜೆ ಟಿಪ್ಸ್

TATA ASSET MANAGEMEN

## ಭಾರತದ ಚೊಚ್ಚಲ ಪ್ರವಾಸೋದ್ಯಮ ಸೂಚ್ಯಂಕ ನಿಧಿಯನ್ನು ಪ್ರಾರಂಭಿಸಿದ ಟಾಟಾ ಅಸೆಟ್ ಮ್ಯಾನೇಜ್ಮೆಂಟ್

ಮ್ಯೂಚುವಲ್ ಫಂಡ್ ಉದ್ಯಮದ ಪ್ರವರ್ತಕ ಸಂಸ್ಥೆಯಾದ ಟಾಟಾ ಅಸೆಟ್ ಮ್ಯಾನೇಜ್ಮೆಂಟ್ ಕಂಪನಿಯು ದೇಶದ ಮೊದಲ ಪ್ರವಾಸೋದ್ಯಮ ಸೂಚ್ಯಂಕ ನಿಧಿಯನ್ನು ಪ್ರಾರಂಭಿಸಿದೆ, ಇದು ನಿಫ್ಟಿ 500?ನ ಭಾಗವಾಗಿರುವ ಕಂಪನಿಗಳನ್ನು ಒಳಗೊಂಡಿದೆ. ಟಾಟಾ ನಿಫ್ಟಿ ಇಂಡಿಯಾ ಪ್ರವಾಸೋದ್ಯಮ ಸೂಚ್ಯಂಕ ನಿಧಿ?ಯು ನಿಫ್ಟಿ ಇಂಡಿಯಾ ಪ್ರವಾಸೋದ್ಯಮ ಸೂಚ್ಯಂಕದ ಮೇಲ ನಿಗಾ ಇಡಲಿದೆ. ಭಾರತದ ವೇಗವಾಗಿ ಬೆಳೆಯುತ್ತಿರುವ ಪ್ರಯಾಣ, ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರದ ಕಂಪನಿಗಳಲ್ಲಿ ಹೂಡಿಕೆ ಮಾಡಲು, ಹೂಡಿಕೆದಾರರಿಗೆ ಅವಕಾಶ ನೀಡುವ ನಿಟ್ಟಿನಲ್ಲಿ ಈ ಮುಕ್ತ-ನಿರ್ಗಮನ ಇಂಡೆಕ್ಸ್ ಫಂಡ್ ಅನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾಗಿದೆ. ಸೂಚ್ಯಂಕವನ್ನು ರೂಪಿಸುವ ಕಂಪನಿಗಳು ಆಯಾ ವಿಭಾಗಗಳಲ್ಲಿ ಮುಂಚೂಣಿಯಲ್ಲಿದ್ದು, ಹೆಚ್ಚುತ್ತಿರುವ ಖರ್ಚು ಮಾಡಬಹುದಾದ ಆದಾಯದ ಪ್ರಮಾಣ, ವಿಕಸನಗೊಳ್ಳುತ್ತಿರುವ ಭಾರತೀಯ ಗ್ರಾಹಕರ ಅಭಿರುಚಿಗಳು ಮತ್ತು ಹೆಚ್ಚಿನ ವಿವೇಚನಾ ವೆಚ್ಚಗಳಿಂದ ಈ ಸಂಸ್ಥೆಗಳು ಪ್ರಯೋಜನ ಪಡೆದಿವೆ. ಸೂಚ್ಯಂಕ ನಿಧಿಯನ್ನು ಬಿಡುಗಡೆ ಮಾಡಿದ ಟಾಟಾ ಅಸೆಟ್ ಮ್ಯಾನೇಜ್ಮೆಂಟ್ ಮುಖ್ಯ ವ್ಯವಹಾರ ಅಧಿಕಾರಿ ಆನಂದ್ ವರದರಾಜನ್, ಅವರು, ಹೆಚ್ಚಿದ ಖರ್ಚು ಮಾಡಬಹುದಾದ ಆದಾಯ, ಉತ್ತಮ ಹೆದ್ದಾರಿ ಸಂಪರ್ಕ, ಸುಧಾರಿತ ರೈಲ್ವೆ ಸೌಲಭ್ಯ ಮತ್ತು ವೇಗ ಮುಂತಾದ ಮೂಲಸೌಕರ್ಯ ಅಭಿವೃದ್ಧಿಗಳ ಜೊತೆಗೆ, ದೇಶದ ವಿವಿಧೆಡೆ ತಲೆ ಎತ್ತಿದ ಅನೇಕ ಹೊಸ ವಿಮಾನ ನಿಲ್ದಾಣಗಳು ಪ್ರಯಾಣವನ್ನು ಸುಲಭ, ತ್ವರಿತ ಮತ್ತು ಸುರಕ್ಷಿತವಾಗಿಸಿವೆ. ದೇಶೀಯ ವಿಮಾನಯಾನ, ಹೋಟೆಲ್ಗಳು, ರೆಸ್ಟೋರೆಂಟ್ಗಳು ಮತ್ತು ಪ್ರಯಾಣದಲ್ಲಿ ನಾವು ಅಗಾಧ ಬೆಳವಣಿಗೆಯನ್ನು ಕಾಣುತ್ತಿದ್ದೇವೆ, ಇದು ಪ್ರವಾಸೋದ್ಯಮ ಕ್ಷೇತ್ರದ ಪಾಲಿಗೆ ಉತ್ತಮ ಬೆಳವಣಿಗೆಯಾಗಿದೆ. ತೀರ್ಥಯಾತ್ರೆ, ವ್ಯವಹಾರ, ವೈದ್ಯಕೀಯ, ವಿರಾಮ ಸೇರಿದಂತೆ ಎಲ್ಲಾ ರೀತಿಯ ಪ್ರಯಾಣದಲ್ಲೂ ಹೆಚ್ಚಳ ಕಂಡು ಬರುತ್ತಿದೆ.

## ಹಾಗಲಕಾಯಿ ಟೊಮೆಟೊ ಪಲ್ಯ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಹಾಗಲಕಾಯಿ-1, ಟೊಮೆಟೊ-1, ಈರುಳ್ಳಿ-1, ಹಸಿ ಮೆಣಸಿನಕಾಯಿ-4, ಕಾಯಿ ತುರಿ-ಸ್ವಲ್ಪ, ಬೆಲ್ಲ-ಸ್ವಲ್ಪ, ಕೊತ್ತೊಂಬರಿ ಸೊಪ್ಪು- ಸ್ವಲ್ಪ, ಕಡಲೆಬೇಳೆ- ಸ್ವಲ್ಪ, ಉದ್ದಿನಬೇಳೆ- ಸ್ವಲ್ಪ, ಸಾಸಿವೆ- ಸ್ವಲ್ಪಕರಿಬೇವು- ಸ್ವಲ್ಪ, ಅರಿಶಿಣ- ಸ್ವಲ್ಪ, ಹಿಂಗು-ಚಿಟಿಕೆ, ಎಣ್ಣೆ-ಸ್ವಲ್ಪ

### ಮಾಡುವ ವಿಧಾನ

ಹಾಗಲಕಾಯಿ, ಟೊಮೆಟೊ, ಈರುಳ್ಳಿಯನ್ನು ಸಣ್ಣಗೆ ಹೆಚ್ಚಿಕೊಳ್ಳಬೇಕು. ಒಂದು ಬಾಣಲೆಗೆ ಎಣ್ಣೆ ಹಾಕಿ ಕಡಲೆಬೇಳೆ, ಉದ್ದಿನಬೇಳೆ, ಸಾಸಿವೆ, ಕರಿಬೇವು, ಅರಿಶಿಣ, ಹಿಂಗು, ಹಸಿ ಮೆಣಸಿನ ಹಾಕಿ ಒಗ್ಗರಣೆ ಮಾಡಿ ಅದಕ್ಕೆ ಹೆಚ್ಚಿದ ಹಾಗಲಕಾಯಿ ಹಾಕಿ 2 ನಿಮಿಷ ಹುರಿದುಕೊಳ್ಳಿ. ನಂತರ ಟೊಮೆಟೊ, ಈರುಳ್ಳಿ, ಉಪ್ಪು, ಬೆಲ್ಲ ಹಾಕಿ ಹುರಿಯಬೇಕು. ಕೊನೆಯಲ್ಲಿ ಕೊತ್ತೊಂಬರಿ ಸೊಪ್ಪಿನಿಂದ ಅಲಂಕರಿಸಿದರೆ ರುಚಿಕರವಾದ ಹಾಗಲಕಾಯಿ ಟೊಮೆಟೊ ಪಲ್ಯ ಸವಿಯಲು ಸಿದ್ಧ.

## 'ಗಣೇಶ' ವಿಗ್ರಹದೊಂದಿಗೆ ಅಸಭ್ಯವಾಗಿ ಫೋಟೋ ಕ್ಲಿಕ್ಕಿಸಿದ ಕಿಮ್ ಕಾರ್ದಶಿಯಾನ್: ನೆಟ್ಟಿಗರ ಕಿಡಿ



ನಟಿ, ಉದ್ಯಮಿ ಕಿಮ್ ಕಾರ್ದಶಿಯಾನ್ ಮುಂಬೈನಲ್ಲಿ ನಡೆದ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ವಿವಾಹ ಸಮಾರಂಭದಲ್ಲಿ ಭಾಗಿಯಾಗಿದ್ದರು. ಇದೇ ಮೊದಲ ಬಾರಿ ಭಾರತಕ್ಕೆ ಬಂದ ಅವರಿಗೆ ಅದ್ದೂರಿ ಸ್ವಾಗತ ಸಿಕ್ಕಿತ್ತು. ಮದುವೆ ಫೋಟೋಗಳನ್ನು ಕಿಮ್, ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

ಅದ್ರಲ್ಲಿ ಗಣೇಶ ವಿಗ್ರಹದ ಜೊತೆಗಿರುವ ಅವರ ಫೋಟೋ ಒಂದು ಬಳಕೆದಾರರ ಗಮನ ಸೆಳೆದಿದೆ. ಅನೇಕರ ಅಸಮಾಧಾನಕ್ಕೆ ಕಾರಣವಾಗಿದೆ.

ಕಿಮ್, ಮನೀಶ್ ಮಲ್ಹೋತ್ರಾ ಡಿಸೈನ್ ಮಾಡಿದ ಲೆಹೆಂಗಾ ಧರಿಸಿ ಮಿಂಚಿದ್ದರು. ವಜ್ರಾಭರಣವನ್ನು ಧರಿಸಿ ಫೋಟೋಕ್ಕೆ ಫೋಸ್ ನೀಡಿದ್ದ ಕಿಮ್, ಅಂಬಾನಿ ಮದುವೆಗೆ ವಜ್ರಗಳು ಮತ್ತು ಮುತ್ತುಗಳು ಎಂದು ಶೀರ್ಷಿಕೆ ಹಾಕಿದ್ದರು. ಅವರು, ಒಂದು ಫೋಟೋದಲ್ಲಿ ಗಣೇಶ ವಿಗ್ರಹದ ಹಿಂದೆ ನಿಂತು ಫೋಟೋಕ್ಕೆ ಫೋಸ್ ನೀಡಿದ್ದಾರೆ. ವಿಗ್ರಹದ ಪ್ರಾಪ್ ಆಗಿ ಬಳಸಿಕೊಂಡಿದ್ದಾರೆ. ವಿಗ್ರಹದ ಮೇಲೆ ಕೈ ಇಟ್ಟು, ಅದ್ರ ಮೇಲೆ ತಮ್ಮ ಗಲ್ಲವನ್ನಿಟ್ಟಿದ್ದಾರೆ. ಕಿಮ್ ಈ ಫೋಟೋ ದೇಸಿ ಅಭಿಮಾನಿಗಳಿಗೆ ಇಷ್ಟವಾಗಿಲ್ಲ. ಫೋಟೋ ವೇಗವಾಗಿ ವೈರಲ್ ಆಗಿದ್ದಲ್ಲದೆ, ಅನೇಕರು ಇದಕ್ಕೆ ಕಮೆಂಟ್ ಮಾಡಿದ್ದಾರೆ. ಇದನ್ನು ನೋಡಿದ ಕಿಮ್ ಯಾವುದೇ ಪ್ರತಿಕ್ರಿಯೆ ನೀಡದೆ ಆ ಫೋಟೋವನ್ನು ಡಿಲೀಟ್ ಮಾಡಿದ್ದಾರೆ.

ಜುಲೈ 12 ರಂದು ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ವಿವಾಹದಲ್ಲಿ ಪಾಲ್ಗೊಳ್ಳಲು ಕಿಮ್ ತನ್ನ ಸಹೋದರಿ ಖ್ಲೋಯ್ ಕಾರ್ದಶಿಯಾನ್ ಜೊತೆಗೆ ಭಾರತಕ್ಕೆ ಬಂದಿದ್ದರು.

ಇತ್ತೀಚಿಗೆ ಇನ್ಸ್ಟಾಗ್ರಾಮ್ನಲ್ಲಿ ಆ ಫೋಟೊ ಹಂಚಿಕೊಂಡಿದ್ದರು. ಗಣೇಶ ಮೂರ್ತಿ ಮೇಲೆ ಒರಗಿ ಕ್ಲಿಕ್ಕಿಸಿರುವ ಫೋಟೊ ಬಗ್ಗೆ ಆಕ್ಷೇಪ ವ್ಯಕ್ತವಾಗಿತ್ತು. ಹಿಂದೂಗಳ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂದು ಆರೋಪ ಕೇಳಿಬಂದಿತ್ತು. ಬಳಿಕ ಫೋಟೋವನ್ನು ಡಿಲೀಟ್ ಮಾಡಿದ್ದಾರೆ.

ಈ ಹಿಂದೆ ಅನೇಕ ವಿದೇಶಿ ಸೆಲೆಬ್ರಿಟಿಗಳು ಇದೇ ರೀತಿಯ ತಪ್ಪನ್ನು ಮಾಡಿದ್ದಾರೆ. ಹಿಂದೂಗಳು ಪೂಜಿಸುವ ದೇವರ ಫೋಟೋಗಳು ಮತ್ತು ವಿಗ್ರಹಗಳನ್ನು ವಿದೇಶಿಗರಿಗೆ ಅಲಂಕಾರಿಕ ವಸ್ತುಗಳಂತೆ ಕಾಣಿಸುತ್ತವೆ. ಕಿಮ್ ಕರ್ದಾಶಿಯಾನ್ ಕೂಡ ಅದೇ ತಪ್ಪನ್ನು ಮಾಡಿದ್ದಾರೆ. ನಿಮ್ಮ ದರಿದ್ರ ಫೋಟೊಶೂಟ್ಗೆ ಹಿಂದೂ ದೇವರನ್ನು ಉಪಯೋಗಿಸುತ್ತೀರಾ? ಎಂದು ಕೆಲವರು ಕಾಮೆಂಟ್ ಮಾಡಿ ಆಕ್ರೋಶ ಹೊರ ಹಾಕಿದ್ದರು.

ಮುಂಬೈನಲ್ಲಿ 3 ದಿನಗಳ ಕಾಲ ಅನಂತ್ ಅಂಬಾನಿ ಹಾಗೂ ರಾಧಿಕಾ ಮರ್ಚೆಂಟ್ ವಿವಾಹ ಮಹೋತ್ಸವ ನಡೆಯಿತು. ಭಾರತೀಯ ಚಿತ್ರರಂಗದ ತಾರೆಯರ ಜೊತೆ ಸಾಕಷ್ಟು ಉದ್ಯಮಿಗಳು, ರಾಜಕೀಯ ಮುಖಂಡರು ಈ ಸಂಭ್ರಮದಲ್ಲಿ ಭಾಗಿ ಆಗಿದ್ದರು.

## ಹೃದಯಾಘಾತ ತಪ್ಪಿಸಲು ಹತ್ತಬೇಕು ಮೆಟ್ಟಿಲು!



ಹೆಲ್ತ್ ಟಿಪ್ಸ್

ಆರೋಗ್ಯವಾಗಿರಲು ದೈಹಿಕವಾಗಿ ಸಕ್ರಿಯವಾಗಿರುವುದು ಬಹಳ ಮುಖ್ಯ. ನಿಯಮಿತವಾದ ವ್ಯಾಯಾಮ ಮತ್ತು ಯೋಗದ ಮೂಲಕ ಫಿಟ್ ಆಗಿರಬಹುದು. ಇದರ ಜೊತೆಜೊತೆಗೆ ಸಣ್ಣ-ಪುಟ್ಟ ದೈನಂದಿನ ಅಭ್ಯಾಸಗಳು ಸಹ ಪ್ರಮುಖ ಪಾತ್ರವನ್ನು ವಹಿಸುತ್ತವೆ. ಇವುಗಳಲ್ಲೊಂದು ಮೆಟ್ಟಿಲು ಹತ್ತುವುದು.

ಮೆಟ್ಟಿಲುಗಳನ್ನು ಹತ್ತುವುದರಿಂದ ಸ್ನಾಯುಗಳನ್ನು ಬಲಪಡಿಸಬಹುದು ಜೊತೆಗೆ ಹೃದಯ ಸಂಬಂಧಿ ಕಾಯಿಲೆಗಳ ಅಪಾಯವೂ ಕಡಿಮೆಯಾಗುತ್ತದೆ. ವಿಶೇಷವಾಗಿ ಹೃದಯಾಘಾತವನ್ನು ತಡೆಯಲು ಈ ಅಭ್ಯಾಸ ಬಹಳ ಸಹಕಾರಿಯಾಗಿದೆ. ಹೃದಯವನ್ನು ಬಲಪಡಿಸಲು ಪ್ರತಿದಿನ ಎಷ್ಟು ಮೆಟ್ಟಿಲುಗಳನ್ನು ಹತ್ತಬೇಕು ಎಂಬುದು ಸಹ ಬಹಳ ಮುಖ್ಯ.

ವಿಜ್ಞಾನಿಗಳ ಹೊಸ ಅಧ್ಯಯನದ ಪ್ರಕಾರ ಪ್ರತಿದಿನ 50 ಮೆಟ್ಟಿಲುಗಳನ್ನು ಹತ್ತುವುದು ಹೃದ್ರೋಗದ ಅಪಾಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಮೆಟ್ಟಿಲುಗಳನ್ನು ಹತ್ತುವವರಿಗೆ ಹೃದ್ರೋಗದ ಅಪಾಯವು ಇತರರಿಗಿಂತ ಶೇ.20ರಷ್ಟು ಕಡಿಮೆ ಇರುತ್ತದೆ. ಜಿಮ್ಗೆ ಹೋಗಲು ಅಥವಾ ದೀರ್ಘ ನಡಿಗೆಗೆ ಸಮಯ ಸಿಗದೇ ಇದ್ದರೆ ಮೆಟ್ಟಿಲು ಹತ್ತುವ ಮೂಲಕ ಫಿಟ್ನೆಸ್ ಕಾಪಾಡಿಕೊಳ್ಳಬಹುದು.

ಮೆಟ್ಟಿಲುಗಳನ್ನು ಹತ್ತುವುದರಿಂದ ದೇಹದಲ್ಲಿ ಹೆಚ್ಚಿನ ಸಾಂದ್ರತೆಯ ಲಿಪೊಪ್ರೋಟೀನ್ (ಎಚ್ಡಿಎಲ್) ಮಟ್ಟ ಹೆಚ್ಚಾಗುತ್ತದೆ. ಇದನ್ನು ಉತ್ತಮ ಕೊಲೆಸ್ಟ್ರಾಲ್ ಎಂದು ಕರೆಯಲಾಗುತ್ತದೆ. ಡರ್ಟಿ ಕೊಲೆಸ್ಟ್ರಾಲ್ ಎಂದು ಕರೆಯಲ್ಪಡುವ ಕಡಿಮೆ ಸಾಂದ್ರತೆಯ ಲಿಪೊಪ್ರೋಟೀನ್ (ಐಆಐ) ಮಟ್ಟವು ಕಡಿಮೆಯಾಗುತ್ತದೆ. ಇದರಿಂದಾಗಿ ಹೃದಯದಲ್ಲಿ ಯಾವುದೇ ಅಡಚಣೆಯಿರುವುದಿಲ್ಲ ಮತ್ತು ಹೃದಯಾಘಾತದ ಸಾಧ್ಯತೆಯು ಬಹಳ ಕಡಿಮೆಯಾಗುತ್ತದೆ.

ಲಿಫ್ಟ್ ಬಳಸುವ ಬದಲು ಮೆಟ್ಟಿಲುಗಳನ್ನು ಹತ್ತುವ ಅಭ್ಯಾಸ ಮಾಡಿಕೊಂಡರೆ ಬೊಜ್ಜು ಕೂಡ ಕಡಿಮೆ ಮಾಡಬಹುದು.

## ಸುರಕ್ಷಿತ ಅಲಾರಂ ಸೌಲಭ್ಯದ ಎವರೆಡಿಯ ಸೈರನ್ ಟಾರ್ಚ್ ಅನಾವರಣಗೊಳಿಸಿದ ಕಿರಣ್ ಬೇಡಿ




ಭಾರತದ ನಂ.1 ಬ್ಯಾಟರಿ ಬ್ರ್ಯಾಂಡ್ ಆಗಿರುವ ಎವೆರೆಡಿ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್ (ಇಐಐಎಲ್), ಶಕ್ತಿ, ಕಾರ್ಯಕ್ಷಮತೆ ಮತ್ತು ವಿಶ್ವಾಸಾರ್ಹತೆಗೆ ಇನ್ನೊಂದು ಹೆಸರಾಗಿದೆ. ಫ್ಲ್ಯಾಷ್ಲೈಟ್ ಜೊತೆಗೆ ಸುರಕ್ಷತಾ ಎಚ್ಚರಿಕೆ ಗಂಟೆ ಮೊಳಗಿಸುವ ಇದೇ ಮೊದಲ ಬಾರಿಗೆ ಮಾರುಕಟ್ಟೆಗೆ ಬಂದಿರುವ - ಎವರೆಡಿ ಸೈರನ್ ಟಾರ್ಚ್ ಅನ್ನು ಭಾರತದ ಮೊದಲ ಮಹಿಳಾ ಐಪಿಎಸ್ ಅಧಿಕಾರಿ ಡಾ. ಕಿರಣ್ ಬೇಡಿ ಅವರು ಅನಾವರಣಗೊಳಿಸಿದರು.

ಅಪಾಯದ ಪರಿಸ್ಥಿತಿಯಲ್ಲಿ ಸಿಲುಕಿದಾಗ ಬಳಕೆದಾರರು ಟಾರ್ಚ್ಗೆ ಲಗತ್ತಿಸಲಾದ ಕೀ ಚೈನ್ ಎಳೆದಾಗ ಈ ಸೈರನ್ ಫ್ಲ್ಯಾಷ್ಲೈಟ್ ಜೋರಾಗಿ 100 ಡೆಸಿಬಲ್ನಷ್ಟು (ಡಿಬಿಎ) ಸುರಕ್ಷತೆಯ ಎಚ್ಚರಿಕೆಯ ಸದ್ದು ಮೊಳಗಿಸುತ್ತದೆ. ದೇಶದಲ್ಲಿ ಇದೇ ಮೊದಲ ಬಾರಿಗೆ ಮಾರುಕಟ್ಟೆಗೆ ಪರಿಚಯಿಸಿರುವ ಈ ಸೈರನ್ ಟಾರ್ಚ್, ಮಾರುಕಟ್ಟೆಯಲ್ಲಿ ಸಂಚಲನ ಮೂಡಿಸಲಿದೆ. ಮಹಿಳೆಯರು ಮತ್ತು ಜನರ ಸುರಕ್ಷತೆ ಹೆಚ್ಚಿಸುವ ರೀತಿಯಲ್ಲಿ ಇದನ್ನು ವಿನ್ಯಾಸಗೊಳಿಸಲಾಗಿದೆ. ಹೊಸದಾಗಿ ಬಿಡುಗಡೆಯಾಗಿರುವ ಸೈರನ್ ಫ್ಲ್ಯಾಷ್ಲೈಟ್- ದೈನಂದಿನ ಜೀವನದಲ್ಲಿ ಸುರಕ್ಷತೆ ಮತ್ತು ಭದ್ರತೆ ಹೆಚ್ಚಿಸುವ ಗುರಿ ಹೊಂದಿದೆ. ಈ ವಿನೂತನ ಉತ್ಪನ್ನವು ಬ್ರ್ಯಾಂಡ್ನ ಇತ್ತೀಚಿನ ಪ್ರಚಾರ ಅಭಿಯಾನವಾಗಿರುವ ಆವಾಜ್ಉಠಾಣೆಕಾಪವರ್ ನಿಂದ ಬೆಂಬಲಿತವಾಗಿದೆ. ಇದು ಎಲ್ಲರಿಗೂ ಸುರಕ್ಷತೆ ಮತ್ತು ಭದ್ರತೆ ಖಚಿತಪಡಿಸಿಕೊಳ್ಳಲು ಹಾಗೂ ಈ ಉತ್ಪನ್ನದ ಅಗತ್ಯವನ್ನು ಮನದಟ್ಟು ಮಾಡಿಕೊಡಲು ಕಿವಿ ಕೇಳಿಸದ ಮತ್ತು ಮಾತುಬಾರದವರ ನೇತೃತ್ವದಲ್ಲಿ ಈ ಪ್ರಚಾರ ಅಭಿಯಾನ ನಡೆಯಲಿದೆ.

ಆವಾಜ್ಉಠಾಣೆಕಾಪವರ್ - ಪ್ರಚಾರ ಅಭಿಯಾನಕ್ಕಾಗಿ, ದೇಶದಲ್ಲಿ ಕಿವಿಕೇಳಿಸದ ಸಮುದಾಯವು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸಲು ಪರಿಶ್ರಮ ಪಡುತ್ತಿರುವ ಸಂಸ್ಥೆಯಾಗಿರುವ ?ಇಂಡಿಯಾ ಸೈನಿಂಗ್ ಹ್ಯಾಂಡ್? ಜೊತೆಗೆ ಎವರೆಡಿ ಸಹಕರಿಸಲಿದೆ. ಮಹಿಳೆಯರ ಸುರಕ್ಷತೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವ ಈ ಪ್ರಚಾರ ಅಭಿಯಾನವು ಓಗಿಲ್ವಿ ಇಂಡಿಯಾ- ಸಿದ್ಧಪಡಿಸಿದ ಕಿವಿ ಕೇಳಿಸದ ಮತ್ತು ಮಾತು ಬಾರದ ಮಹಿಳೆಯರು ನಟಿಸಿರುವ ಪ್ರಭಾವಶಾಲಿ ಚಲನಚಿತ್ರವು ಮೌಖಿಕ ಸಂವಹನದ ಸಾಮರ್ಥ್ಯದ ಜೊತೆ ಸಂಪರ್ಕ ಹೊಂದಿದೆ. ಕಿವಿ ಕೇಳಿಸದ ಮತ್ತು ಮಾತುಬಾರದ ಮಹಿಳೆಯರು ವಿವಿಧ ಸ್ಥಳಗಳಲ್ಲಿ ಏಕಾಂಗಿಯಾಗಿ, ತಮ್ಮ ಆಘಾತಕಾರಿ ಅನುಭವಗಳನ್ನು ಸಾಂಕೇತಿಕ ಭಾಷೆಯಲ್ಲಿ ವಿವರಿಸುತ್ತಾರೆ. ಅವರು ಕೆಲವೊಮ್ಮೆ ಅಪಾಯಕ್ಕೆ ಸಿಲುಕಿದ ಅಥವಾ ಪೀಡನೆಗೆ ಒಳಗಾದ ಅನುಭವವನ್ನು ವಿವರಿಸುತ್ತಾರೆ. ಎವೆರೆಡಿ ಸೈರನ್ ಟಾರ್ಚ್- ಮಹಿಳೆಯರಿಗೆ ಧ್ವನಿ ಇಲ್ಲದೆಯೂ ಸದ್ದು ಮಾಡಲು ಅವಕಾಶ ಒದಗಿಸಲಿದೆ. ಪುಂಡರಿಂದ ನಿಂದನೆ ತಡೆಯಲು ಮತ್ತು ದಾರಿಹೋಕರನ್ನು ಎಚ್ಚರಿಸಲು ನಮ್ಮನ್ನು ಸಂರಕ್ಷಿಸಿ ಎನ್ನುವ ಸಂದೇಶದ 100-ಡೆಸಿಬಲ್ನಷ್ಟು ಸದ್ದನ್ನು ಅಲಾರಂ ಮೂಲಕ ಹೊರಡಿಸಲಿದೆ. ಅಬ್ ಆವಾಜ್ ಮೈ ಭಿ ಉಠಾವೋಂಗಿ ಎಂಬ ಸಂದೇಶದೊಂದಿಗೆ ನಾನು ನನ್ನ ಧ್ವನಿಯನ್ನು ಗಟ್ಟಿಯಾಗಿ ಹೊರಡಿಸಬಲ್ಲೆ ಎನ್ನುವ ಆತ್ಮವಿಶ್ವಾಸವನ್ನೂ ಇದು ಮಹಿಳೆಯರಲ್ಲಿ ತುಂಬಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಾಮಾಜಿಕ ಕಾರ್ಯಕರ್ತೆ ಮತ್ತು ದೇಶದ ಮೊದಲ ಮಹಿಳಾ ಐಪಿಎಸ್ ಅಧಿಕಾರಿ ಡಾ. ಕಿರಣ್ ಬೇಡಿ ಅವರು, ''ಮಹಿಳೆಯ ದೈಹಿಕ ಮತ್ತು ಆಂತರಿಕ ಸುರಕ್ಷತೆಯ ಭಾವನೆಯು ಅವಳನ್ನು ಸಶಕ್ತಗೊಳಿಸುತ್ತದೆ. ಇದು ಅವಳ ಮಾನಸಿಕ ಆರೋಗ್ಯಕ್ಕೆ ತುಂಬ ಅಗತ್ಯ. ಕೆಲವೊಮ್ಮೆ ಹಾಗೂ ಅನೇಕ ಸಂದರ್ಭಗಳಲ್ಲಿ ಮಹಿಳೆ ಸುರಕ್ಷಿತವಾಗಿರಲು ಬಾಹ್ಯ ಸಾಧನದ ಅಗತ್ಯವಿದೆ. ಹೊತ್ತಲ್ಲದ ಹೊತ್ತಿನಲ್ಲಿ ಹೊರಹೋಗುತ್ತಿರಲಿ ಅಥವಾ ತಮ್ಮ ಕನಸುಗಳನ್ನು ಪೂರೈಸಲು ದೂರದ ತಾಣಕ್ಕೆ ಪ್ರಯಾಣಿಸುತ್ತಿರಲಿ ಇದು ಅವರ ನೆರವಿಗೆ ಬರಲಿದೆ. ಎವರೆಡಿಯ ಈ ವಿಶಿಷ್ಟ ಸೈರನ್ ಟಾರ್ಚ್ ಮಹಿಳೆಯರಿಗೆ ಸುರಕ್ಷತೆಯ ಬಗ್ಗೆ ಹಿಂಜರಿಕೆಯಿಲ್ಲದೆ ಅಥವಾ ಆತಂಕವಿಲ್ಲದೆ ಆ ಹೆಚ್ಚುವರಿ ದೂರ ಕ್ರಮಿಸಲು ಭರವಸೆದಾಯಕ ಸುರಕ್ಷಿತ ಭಾವನೆ ನೀಡುವಲ್ಲಿ ಮಹತ್ವದ ಹೆಜ್ಜೆಯಾಗಿದೆ'' ಎಂದು ಹೇಳಿದ್ದಾರೆ.

ಎವೆರೆಡಿ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್ನ ಹಿರಿಯ ಉಪಾಧ್ಯಕ್ಷ ಮತ್ತು ಎಸ್ಬಿಯು ಮುಖ್ಯಸ್ಥ (ಬ್ಯಾಟರಿಗಳು ಮತ್ತು ಫ್ಲ್ಯಾಷ್ಲೈಟ್ಗಳು) ಅನಿರ್ಬನ್ ಬ್ಯಾನರ್ಜಿ ಅವರು ಮಾತನಾಡಿ, ಎವರೆಡಿಯು ಅನಂತಶಕ್ತಿಯ ದಣಿವರಿಯದ ಚಾಂಪಿಯನ್ ಆಗಿದೆ. ಈ ಚೈತನ್ಯವೇ ಸೈರನ್ ಟಾರ್ಚ್ ವಿನ್ಯಾಸಗೊಳಿಸಲು ನಮಗೆ ಸ್ಫೂರ್ತಿ ನೀಡಿದೆ. ಇದೊಂದು ಬರೀ ಕಾರ್ಯನಿರ್ವಹಣೆ ಮೀರಿದ ಪರಿವರ್ತಕ ಪರಿಹಾರವಾಗಿದೆ. ಭಾರತದಾದ್ಯಂತ ಮಹಿಳೆಯರಿಗೆ ಭರವಸೆ ಮತ್ತು ಸಬಲೀಕರಣವನ್ನು ನೀಡುತ್ತದೆ. ಮಹಿಳಾ ಸುರಕ್ಷತೆಯು ನಮ್ಮ ಆದ್ಯತೆಯಾಗಿದ್ದು, ಶ್ರೇಷ್ಠತೆ ಮತ್ತು ನಾವೀನ್ಯತೆಗೆ ಸಂಬಂಧಿಸಿದ ನಮ್ಮ ಬದ್ಧತೆಯು ಭಾರಿ ಬದಲಾವಣೆಗೆ ಕಾರಣವಾಗುವ ಸಾಧನ ತಯಾರಿಸುವುದಕ್ಕೆ ಸ್ಫೂರ್ತಿಯಾಗಿದೆ. ಧ್ವನಿ ಇರದಿದ್ದರೂ ಸಹ ಶಬ್ದ ಮಾಡಲು ಇದು ಮಹಿಳೆಯರಿಗೆ ಅವಕಾಶ ಒದಗಿಸುತ್ತದೆ. ಮಹಿಳೆಯರ ಅಸಹಾಯಕತೆಯ ದುರುಪಯೋಗ ತಡೆಯಲು ಮತ್ತು ದಾರಿಹೋಕರನ್ನು ಎಚ್ಚರಿಸಲು ಇದು 100-ಡೆಸಿಬಲ್ನಷ್ಟು ಸದ್ದು ಮಾಡಿ ನನ್ನನ್ನು ರಕ್ಷಿಸಿ ಎನ್ನುವ ಸಂದೇಶದ ಅಲಾರಂ ಮೊಳಗಿಸುತ್ತದೆ. ಎಂದು ಹೇಳಿದ್ದಾರೆ.

ಧ್ವನಿ ಇಲ್ಲದವರಿಗೆ ಧ್ವನಿ ನೀಡುವುದು ಸುಲಭದ ಕೆಲಸವಲ್ಲ. ಆದರೆ ಸುಜೋಯ್ ಮತ್ತು ಅವರ ತಂಡವು ಪ್ರಚಾರಕ್ಕೆ ಮಾತುಬಾರದ ನಟರನ್ನು ಬಳಸಿಕೊಳ್ಳುವ ಆಲೋಚನೆಯೊಂದಿಗೆ ಬಂದಾಗ, ನಮ್ಮ ಮುಂದಿನ ಹಾದಿಯು ಸಾಕಷ್ಟು ಸರಳವಾಗಿತ್ತು. ತೆರೆಯ ಮೇಲಿನ ನಟರ ಅನುದ್ದೇಶದ ಮೌನವು ಮಹಿಳೆಯರು ದಿನನಿತ್ಯ ಎದುರಿಸುತ್ತಿರುವ ಪರಿಸ್ಥಿತಿಗೆ ಕನ್ನಡಿ ಹಿಡಿಯುತ್ತದೆ. ಅವರ ಮೂಕ ಸನ್ನೆಗಳ ಮೂಲಕ, ಚಲನಚಿತ್ರದಲ್ಲಿನ ಪಾತ್ರಗಳು ನಾಚಿಕೆ, ಅವಮಾನ ಮತ್ತು ತೀವ್ರ ಸ್ವರೂಪದ ಹಿಂಸೆಯನ್ನು ಯಾವುದೇ ಮಾತಿಲ್ಲದೆ ಅನುಭವಿಸುವ ಮಹಿಳೆಯರಿಗಾಗಿ ಮಾತನಾಡುತ್ತವೆ. ಈಗ ಧ್ವನಿಯೇ ಇಲ್ಲದ ಮಹಿಳೆಯರೂ ಈ ಸೈರನ್ ಟಾರ್ಚ್ ನೆರವಿನಿಂದ ಇತರರ ಗಮನ ಸೆಳೆಯುವ ರೀತಿಯಲ್ಲಿ ಸದ್ದು ಮಾಡಲು ಸಾಧ್ಯ'' ಎಂದು ಓಗಿಲ್ವಿ ಇಂಡಿಯಾದ ಮುಖ್ಯ ಸೃಜನಾತ್ಮಕ ಅಧಿಕಾರಿ ಸುಕೇಶ್ ನಾಯಕ್ ಅವರು ಹೇಳಿದ್ದಾರೆ.

ಈ ಸೈರನ್ ಟಾರ್ಚ್ - ಮಾರುಕಟ್ಟೆಯಲ್ಲಿ ಸಂಚಲನ ಸೃಷ್ಟಿಸಲಿದ್ದು, ಇದರ ಬೆಲೆ ? 225 ಇದೆ. ಅಪಾಯಕಾರಿ ಸಂದರ್ಭಗಳಲ್ಲಿ ಮಹಿಳೆಯರು ಮತ್ತು ಪುರುಷರಿಗೂ ಸುಲಭವಾಗಿ ಬಳಸಬಹುದಾದ ಮತ್ತು ಅಗತ್ಯವಾದ ಸಾಧನವಾಗಿದೆ.

## ಮೆಂತೆ ಕೂದಲಿನ ಬೆಳವಣಿಗೆಗೆ ಸಹಕಾರಿ

### ಬ್ಯೂಟಿ ಟಿಪ್ಸ್



ಅಡುಗೆ ಮನೆಯ ಘಮ ಹೆಚ್ಚಿಸುವ ಈ ಮೆಂತೆಯು ಹಲವು ರೀತಿಯ ಔಷಧೀಯ ಗುಣಗಳನ್ನು ಹೊಂದಿದೆ. ಮಧುಮೇಹಿಗಳಿಗೆ, ತೂಕ ಇಳಿಸುವವರಿಗೆ ಇದು ನೆಚ್ಚಿನ ಸಂಗಾತಿ. ಇವೆಲ್ಲವುಗಳ ಜೊತೆಗೆ ಕೂದಲಿನ ಆರೈಕೆಯಲ್ಲಿ ಮಹತ್ವದ ಸ್ಥಾನ ಪಡೆದಿದೆ. ಈ ಬೀಜಗಳು ತಲೆಯ ಚರ್ಮಕ್ಕೆ ರಕ್ತ ಸಂಚಾರವನ್ನು ಹೆಚ್ಚಿಸಿ, ಕೂದಲಿನ ಬುಡಕ್ಕೆ ಆಮ್ಲಜನಕದ ಸರಬರಾಜನ್ನು ಅಧಿಕಗೊಳಿಸುತ್ತವೆ. ಇದರಿಂದ ಕೂದಲಿನ ಬೆಳವಣಿಗೆಗೆ ಸಹಾಯವಾಗುತ್ತದೆ. ಮೆಂತೆಯಲ್ಲಿ ನಾರು ಮತ್ತು ಪ್ರೊಟೀನ್ ಅಂಶ ಅಧಿಕವಾಗಿದೆ. ಇವುಗಳಿಂದ ಕೂದಲು ಸದೃಢವಾಗಿ ತುಂಡಾಗುವುದು ನಿಲ್ಲುತ್ತದೆ. ನೂರು ಗ್ರಾಂ ಮೆಂತೆ ಬೀಜಗಳಲ್ಲಿ ಸುಮಾರು 23 ಗ್ರಾಂ ಪ್ರೊಟೀನ್ ದೊರೆಯುತ್ತದೆ. ಇದಲ್ಲದೆ, ಮೆಂತೆಯಲ್ಲಿರುವ ಲೆಸಿಥಿನ್ ಎಂಬ ಅಂಶವು ಕೂದಲಿನ ಬಲವರ್ಧನೆಗೆ ಸಹಾಯಕ. ಮಾತ್ರವಲ್ಲ, ತಲೆಯ ಚರ್ಮವು ಉತ್ಪಾದಿಸುವ ತೈಲದಂಶವನ್ನು ಕಡಿಮೆ ಮಾಡಿ, ಪಿಎಚ್ ಸರಿದೂಗಿಸಲು ಮಾಡಲು ಇದರಿಂದ ಸಾಧ್ಯ. ಹಾಗಾಗಿ ತಲೆಹೊಟ್ಟನ್ನು ಕೂದಲುದುರುವುದನ್ನು ಕಡಿಮೆ ಮಾಡುತ್ತದೆ, ಬೆಳವಣಿಗೆಗೆ ಪ್ರೋತ್ಸಾಹ ನೀಡುತ್ತದೆ. ಹೆಚ್ಚಿನವರು ಬಳಸುವ ವಿಧಾನವೆಂದರೆ ಮೆಂತೆಯ ಪೇಸ್ಟ್ ಕೂದಲಿಗೆ ಹಚ್ಚುವುದು. ರಾತ್ರಿ ಮಲಗುವಾಗ ಎರಡು ದೊಡ್ಡ ಚಮಚ ಮೆಂತೆಯನ್ನು ನೀರಿಗೆ ಹಾಕಿ. ಬೆಳಗಿನವರೆಗೆ ಅದು ಚೆನ್ನಾಗಿ ನೆನೆದು, ಉಬ್ಬಿರುತ್ತದೆ. ಅದನ್ನು ಮೊಸರಿನೊಂದಿಗೆ ರುಬ್ಬಿ ಕೂದಲಿಗ ಬುಡ ಸೇರಿದಂತೆ ಎಲ್ಲೆಡೆ ಲೇಪಿಸಿ. ಅರ್ಧ ತಾಸಿನ ನಂತರ ಉಗುರು ಬಿಸಿಯಾದ ನೀರಿನಲ್ಲಿ ಚೆನ್ನಾಗಿ ತೊಳೆಯಿರಿ. ಇದರಿಂದ ಒಳ್ಳೆಯ ಕಂಡೀಶನರ್ ದೊರೆತು, ಹೊಟ್ಟು ತೊಲಗಿ, ಕೂದಲು ನಳನಳಿಸುತ್ತದೆ. ಅರ್ಧ ಕಪ್ ತೆಂಗಿನ ಎಣ್ಣೆಗೆ 2 ದೊಡ್ಡ ಚಮಚ ಮೆಂತೆಯ ಬೀಜಗಳನ್ನು ಹಾಕಿ, ಕುದಿಸಿ. ಈ ಎಣ್ಣೆ ಆರಿ ತಣ್ಣಗಾದ ಮೇಲೆ ಗಾಜಿನ ಬಾಟಲಿಗೆ ತುಂಬಿಸಿಡಿ. ಈ ಎಣ್ಣೆಯನ್ನು ರಾತ್ರಿ ಮಲಗುವ ಒಂದು ತಾಸಿ ಮೊದಲು ತಲೆಗೆ ಹಾಕಿ ಲಘುವಾಗಿ ಮಸಾಜ್ ಮಾಡಿ. ಬೆಳಗ್ಗೆ ತಲೆಸ್ನಾನ ಮಾಡಿ. ಇದರಿಂದ ಇಡೀ ರಾತ್ರಿ ಈ ಎಣ್ಣೆಯಲ್ಲಿ ನೆನೆದ ತಲೆಯ ಚರ್ಮ ಮತ್ತು ಕೂದಲ ಬುಡಗಳು ಸೊಂಪಾಗಿ ಸತ್ವಗಳನ್ನು ಹೀರಿಕೊಳ್ಳುತ್ತವೆ. 2 ಚಮಚ ಮೆಂತೆಯನ್ನು ದೊಡ್ಡ ಗ್ಲಾಸ್ ನೀರಿಗೆ ಸೇರಿಸಿ ಚೆನ್ನಾಗಿ ಕುದಿಸಿ. ನೀರು ಮುಕ್ಕಾಲು ಗ್ಲಾಸಿನಷ್ಟು ಆಗುವವರೆಗೆ ಕುದಿಸಿ. ಇದು ಬೆಚ್ಚಗಿರುವಾಗಲೇ ತಲೆಯೆಲ್ಲ ನೆನೆಯುವಂತೆ ಹಚ್ಚಿಕೊಳ್ಳಿ. ಅರ್ಧ ತಾಸಿನ ನಂತರ ತಲೆಸ್ನಾನ ಮಾಡಿ. ಇದು ಸಹ ಕೂದಲಿಗೆ ಬೇಕಾದ ಪೋಷಕಾಂಶಗಳನ್ನು ನೀಡಿ, ಹೊಳಪು ಹೆಚ್ಚಿಸುತ್ತದೆ. ಕೂದಲು ಉದುರುವುದನ್ನು ತಡೆ, ಬೆಳವಣಿಗೆಗೆ ನೆರವಾಗುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಕೆಲಸ ಕಾರ್ಯಗಳಲ್ಲಿ ವಿಘ್ನ, ಪರರಿಂದ ಸಹಾಯ, ಕೈ ಕಾಲು ನೋವು, ವಾಗ್ವಾದ, ಸಾಲಬಾಧೆ.

**ವೃಷಭ:** ಆಪ್ತರಿಂದ ಸಹಾಯ, ಮನಸ್ಸಿಗೆ ಸಂಕಟ, ಸರ್ಕಾರಿ ಕೆಲಸಗಳಲ್ಲಿ ವಿಳಂಬ, ಶ್ರಮಕ್ಕೆ ತಕ್ಕ ವರಮಾನ.

**ಮಿಥುನ:** ಬೇಡದ ವಿಷಯಗಳಲ್ಲಿ ಆಸಕ್ತಿ, ಶತ್ರು ಭಾದೆ, ವಾಹನ ಅಪಘಾತ, ಇತರರ ಭಾವನೆಗೆ ಸ್ಪಂದಿಸುವಿರಿ.

**ಕಟಕ:** ಇಲ್ಲಸಲ್ಲದ ತಕರಾರು, ಮಾನಹಾನಿ, ಸ್ತ್ರೀಯರಿಗೆ ತೊಂದರೆ, ಮನಸ್ಸಿನ ಮೇಲೆ ದುಷ್ಟ ಪರಿಣಾಮ.

**ಸಿಂಹ:** ಯತ್ನ ಕಾರ್ಯಗಳಲ್ಲಿ ಜಯ, ಉದ್ಯೋಗದಲ್ಲಿ ಬಡ್ತಿ, ಮನ ಶಾಂತಿ, ಸುಖ ಭೋಜನ, ಬಂಧುಗಳಿಂದ ಹಿತವಚನ.

**ಕನ್ಯಾ:** ವಾದ ವಿವಾದ, ಹಿರಿಯರ ನೆರವು, ಧನ ಲಾಭ, ದೈವಿಕ ಚಿಂತನೆ, ಸುಖ ಭೋಜನ, ರಿಯಲ್ ಎಸ್ಟೇಟ್‌ನಿಂದ ಲಾಭ.

**ತುಲಾ:** ಚೋರ ಭಯ, ಎಲ್ಲಿ ಹೋದರು ಅಶಾಂತಿ, ಪತಿ ಪತ್ನಿಯರಲ್ಲಿ ಕಲಹ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ.

**ವೃಶ್ಚಿಕ:** ಪರರ ತಪ್ಪಿನಿಂದ ಗೌರವಕ್ಕೆ ಧಕ್ಕೆ, ಅನಾರೋಗ್ಯ, ಅಧಿಕ ಸಮಸ್ಯೆ, ಮಾತಾಪಿತರ ಆಶೀರ್ವಾದ

**ಧನಸ್ಸು:** ಖರ್ಚಿಗೆ ನೂರಾರು ದಾರಿ, ವಿರೋಧಿಗಳಿಂದ ಕಿರುಕುಳ, ಅನ್ಯರ ಮಾತಿನಿಂದ ತೊಂದರೆ, ಕೋಪ ಜಾಸ್ತಿ.

**ಮಕರ:** ಅಭಿವೃದ್ಧಿ ಕುಂಠಿತ, ಅತಿಯಾದ ಪ್ರಯಾಣ, ವಿವಾಹಕ್ಕೆ ಅಡಚಣೆ, ಸಾಲ ಮಾಡುವ ಸಾಧ್ಯತೆ, ಸಾಧಾರಣ ಫಲ.

**ಕುಂಭ:** ಪ್ರಯತ್ನದಿಂದ ಕಾರ್ಯ ಸಫಲ, ಪುಣ್ಯಕ್ಷೇತ್ರ ದರ್ಶನ,ಸುಖ ಭೋಜನ, ನಿವೇಶನ ಪ್ರಾಪ್ತಿ, ದೇವತಾ ಕಾರ್ಯಗಳಲ್ಲಿ ಒಲವು.

**ಮೀನ:** ದ್ರವ್ಯ ಲಾಭ, ಸ್ನೇಹಿತರಿಂದ ಸಕಾಲದಲ್ಲಿ ನೆರವು, ಕುಟುಂಬ ಸೌಖ್ಯ, ವಿದೇಶ ಪ್ರಯಾಣ, ಆರೋಗ್ಯದ ಕಾಳಜಿ.

## ಅಂತರರಾಷ್ಟ್ರೀಯ ನ್ಯಾಯ ದಿನ

ಅಂತರರಾಷ್ಟ್ರೀಯ ನ್ಯಾಯದ ವ್ಯವಸ್ಥೆಯನ್ನು ಗುರುತಿಸುವ ಪ್ರಯತ್ನದ ಭಾಗವಾಗಿ ಪ್ರತಿ ವರ್ಷ ಜುಲೈ 17 ರಂದು ನಡೆಸಲಾಗುತ್ತದೆ. ಈ ಆಚರಣೆಗಳು ಅಂತರಾಷ್ಟ್ರೀಯ ನ್ಯಾಯಮಂಡಳಿಗಳು ಮತ್ತು ನ್ಯಾಯಾಲಯಗಳು ಯುದ್ಧ ಅಪರಾಧಗಳು ಮತ್ತು ಮಾನವೀಯತೆಯ ವಿರುದ್ಧದ ಅಪರಾಧಗಳ ಬಲಿಪಶುಗಳಿಗೆ ನ್ಯಾಯವನ್ನು ಹೇಗೆ ತಂದಿವೆ ಮತ್ತು ಮುಂದುವರಿಸಿವೆ ಎಂಬುದನ್ನು ಎತ್ತಿ ತೋರಿಸುತ್ತದೆ. ಇದು ರೋಮ್ ಶಾಸನವನ್ನು ಜಾಗತಿಕವಾಗಿ ಅಳವಡಿಸಿಕೊಂಡ ದಿನವನ್ನು ಸ್ಮರಿಸುತ್ತದೆ ಮತ್ತು ಅಂತರಾಷ್ಟ್ರೀಯ ಕ್ರಿಮಿನಲ್ ಕೋರ್ಟ್ನ ಸದಸ್ಯ ರಾಷ್ಟ್ರಗಳು ಅವರ ನಿರೀಕ್ಷೆಗಳಿಗೆ ತಕ್ಕಂತೆ ಜೀವಿಸುವುದನ್ನು ಖಚಿತಪಡಿಸುತ್ತದೆ.

ಶತಮಾನಗಳಿಂದ, ಜಗತ್ತು ಹೊಸ ಗಡಿಗಳು, ಹೊಸ ಗಡಿಗಳು ಮತ್ತು ಹೊಸ ಸವಾಲುಗಳನ್ನು ಕಂಡಿದೆ. ಮೈತ್ರಿ ಮಾಡಿಕೊಂಡರು ಮತ್ತು ಮುರಿದರು. ಯುದ್ಧಗಳು ಭುಗಿಲೆದ್ದವು. ಜನರು ಸಹ ಪುರುಷರು, ಮಹಿಳೆಯರು ಮತ್ತು ಮಕ್ಕಳ ವಿರುದ್ಧ ಹೇಳಲಾಗದ ಕೃತ್ಯಗಳನ್ನು ಎಸಗಿದರು. ಅಂತರರಾಷ್ಟ್ರೀಯ ನ್ಯಾಯದ ಅಗತ್ಯವನ್ನು ಜಗತ್ತು ಭಾವಿಸಿದೆ.

ಈ ಅಗತ್ಯದಿಂದ ನ್ಯೂರೆಂಬರ್ಗ್ ಪ್ರಯೋಗಗಳು ಹುಟ್ಟಿಕೊಂಡವು, ಇದು ಶಾಶ್ವತ ಅಂತರಾಷ್ಟ್ರೀಯ ನ್ಯಾಯಾಲಯವನ್ನು ಸ್ಥಾಪಿಸುವಲ್ಲಿ ಒಂದು ಮೈಲಿಗಲ್ಲು ಎಂದು ಹಲವರು ಪರಿಗಣಿಸುತ್ತಾರೆ. ಎರಡನೆಯ ಮಹಾಯುದ್ಧದ ನಂತರ ಜರ್ಮನಿಯ ನ್ಯೂರೆಂಬರ್ಗ್ನಲ್ಲಿ ನಾಜಿ ಯುದ್ಧ ಅಪರಾಧಿಗಳನ್ನು ನ್ಯಾಯಕ್ಕೆ ತರಲು 13 ಪ್ರಯೋಗಗಳ ಸರಣಿಯನ್ನು ನಡೆಸಲಾಯಿತು. ಪ್ರತಿವಾದಿಗಳು - ಅವರಲ್ಲಿ ನಾಜಿ ಪಕ್ಷದ ಅಧಿಕಾರಿಗಳು ಮತ್ತು ಉನ್ನತ ಶ್ರೇಣಿಯ ಮಿಲಿಟರಿ ಅಧಿಕಾರಿಗಳು, ಜರ್ಮನ್ ಕೈಗಾರಿಕೋದ್ಯಮಿಗಳು, ವಕೀಲರು ಮತ್ತು ವೈದ್ಯರು - ಶಾಂತಿಯ ವಿರುದ್ಧದ ಅಪರಾಧಗಳು ಮತ್ತು ಮಾನವೀಯತೆಯ ವಿರುದ್ಧದ ಅಪರಾಧಗಳ ಆರೋಪದ ಮೇಲೆ ದೋಷಾರೋಪಣೆ ಮಾಡಲಾಗಿತ್ತು. ಮಾನವೀಯತೆಯ ವಿರುದ್ಧದ ಅಪರಾಧಗಳಿಗಾಗಿ ಯಾರಾದರೂ ಮೊಟ್ಟಮೊದಲ ಬಾರಿಗೆ ಮೊಕದ್ದಮೆ ಹೂಡಿದಾಗ, ನ್ಯೂರೆಂಬರ್ಗ್ ಪ್ರಯೋಗಗಳು ಆ ಸಮಯದಲ್ಲಿ ವಿವಾದಾಸ್ಪದವಾಗಿದ್ದವು. ಅದೇ ಸಮಯದಲ್ಲಿ ಮತ್ತೊಂದು ಹೆಗ್ಗುರುತು ವಿಚಾರಣೆ - ಟೋಕಿಯೋ ಟ್ರಯಲ್ ಅಥವಾ ಟೋಕಿಯೋ ವಾರ್ ಕ್ರೈಮ್ಸ್ ಟ್ರಿಬ್ಯೂನಲ್ ಎಂದು ಕರೆಯಲ್ಪಡುತ್ತದೆ ಮತ್ತು ಔಪಚಾರಿಕವಾಗಿ, ದೂರದ ಪೂರ್ವದ ಅಂತರಾಷ್ಟ್ರೀಯ ಮಿಲಿಟರಿ ನ್ಯಾಯಮಂಡಳಿಯಾಗಿ - ಯುದ್ಧವನ್ನು ಪ್ರಾರಂಭಿಸಲು ಮತ್ತು ಹೂಡಲು ಜಂಟಿ ಪಿತೂರಿಗಾಗಿ ಜಪಾನ್ ಸಾಮ್ರಾಜ್ಯದ ನಾಯಕರನ್ನು ಪ್ರಯತ್ನಿಸಿದರು ಮತ್ತು ಶಿಕ್ಷೆಗೆ ಗುರಿಪಡಿಸಿದರು. ಜುಲೈ 17, 1998 ರಂದು ವಿಶ್ವಸಂಸ್ಥೆಯ ಮುಂದೆ ಇಟಲಿಯ ರೋಮ್ನಲ್ಲಿ ನಡೆದ ರಾಜತಾಂತ್ರಿಕ ಸಮ್ಮೇಳನದ ಮೊದಲು ಅಂತರರಾಷ್ಟ್ರೀಯ ಮಟ್ಟದಲ್ಲಿ ಗಂಭೀರ ಅಪರಾಧಗಳ ಆರೋಪಿಗಳನ್ನು ವಿಚಾರಣೆಗೆ ಒಳಪಡಿಸುವ ಒಪ್ಪಂದವನ್ನು ಪ್ರಸ್ತಾಪಿಸಲಾಯಿತು. 120 ರಾಜ್ಯಗಳಿಂದ ರೋಮ್ ಶಾಸನವಾಗಿ ಅಂಗೀಕರಿಸಲ್ಪಟ್ಟಿದೆ, ಈ ಒಪ್ಪಂದವು 2002 ರಲ್ಲಿ ಇಂಟರ್ನ್ಯಾಷನಲ್ ಕ್ರಿಮಿನಲ್ ಕೋರ್ಟ್ ಸ್ಥಾಪನೆಗೆ ಕಾರಣವಾಯಿತು.

# ತಮಿಳುನಾಡಿನಲ್ಲಿ ವಿದ್ಯುತ್ ದರ ಏರಿಕೆ

**ತಮಿಳುನಾಡು:** ತಮಿಳುನಾಡಿನಲ್ಲಿ ವಿದ್ಯುತ್ ದರ ಹೆಚ್ಚಳ ಮಾಡಲಾಗಿದ್ದು, ಜುಲೈ 1ರಿಂದ ಅನ್ವಯವಾಗುವಂತೆ ಏರಿಕೆ ಮಾಡಲಾಗಿದೆ.ತಮಿಳುನಾಡಿನಾದ್ಯಂತ ಮನೆ ಮತ್ತು ವಾಣಿಜ್ಯ ಬಳಕೆಗೆ ವಿದ್ಯುತ್ ಶುಲ್ಕವನ್ನು ಭಾರೀ ಪ್ರಮಾಣದಲ್ಲಿ ಹೆಚ್ಚಿಸಲಾಗಿದೆ ಎಂದು ವಿದ್ಯುತ್ ನಿಯಂತ್ರಣ ಪ್ರಾಧಿಕಾರ ಮಾಹಿತಿ ನೀಡಿದೆ. ಯಾವ ಘಟಕಕ್ಕೆ ಎಷ್ಟು ವಿದ್ಯುತ್ ದರವನ್ನು ಹೆಚ್ಚಿಸಲಾಗಿದೆ ವಿವರಗಳು ಇಲ್ಲಿದೆ ತಮಿಳುನಾಡಿನಲ್ಲಿ ಏಕಾಏಕಿ ವಿದ್ಯುತ್ ದರ ಏರಿಕೆ ಮಾಡಲಾಗಿದೆ. ಈ ಸಂಬಂಧ ವಿದ್ಯುತ್ ನಿಯಂತ್ರಣ ಆಯೋಗ ಅಧಿಸೂಚನೆ ಹೊರಡಿಸಿದೆ. ಅದರಂತೆ ವಿದ್ಯುತ್ ಬಿಲ್ ಶೇ.4.83ಕ್ಕೆ ಏರಿಕೆಯಾಗಿದೆ. ಅದರಂತೆ 400 ಯೂನಿಟ್‌ವರೆಗಿನ ಗೃಹ ಬಳಕೆಯ ವಿದ್ಯುತ್ ಶುಲ್ಕವನ್ನು ಪ್ರತಿ ಯೂನಿಟ್‌ಗೆ 20 ಸೆಂಟ್‌ಗಳಷ್ಟು ಹೆಚ್ಚಿಸಲಾಗಿದೆ. ಅಂದರೆ ಇಲ್ಲಿಯವರೆಗೆ 400 ಯೂನಿಟ್‌ವರೆಗಿನ ವಿದ್ಯುತ್‌ನ ಗ್ರಾಹಕರಿಗೆ ಪ್ರತಿ ಯೂನಿಟ್‌ಗೆ 4.60 ರೂ. ಪ್ರತಿ ಯೂನಿಟ್‌ಗೆ ಹೆಚ್ಚುವರಿ 20 ಸೆಂಟ್‌ಗಳನ್ನು ಈಗ ರೂ.4.80 ಕ್ಕೆ ವಿಧಿಸಲಾಗುತ್ತದೆ. ಅದೇ ರೀತಿ 401 ? 500 ಯೂನಿಟ್ ವಿದ್ಯುತ್ ಬಿಲ್ ಪ್ರತಿ ಯೂನಿಟ್?ಗೆ 6.15 ರೂ. ಈಗ 6.45 ರೂ.ಗೆ ಏರಿಸಲಾಗಿದೆ. 501 ರಿಂದ 600 ಯೂನಿಟ್‌ಗಳ ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 8.18 ರೂ. ರಿಂದ 8.55 ರೂ.ಗೆ ಹೆಚ್ಚಿಸಲಾಗಿದೆ. ಅಲ್ಲದೆ, 601–800 ಯೂನಿಟ್‌ಗಳ ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 9.20 ರೂ. ರಿಂದ 9.65 ರೂ.ಗೆ ಹೆಚ್ಚಿಸಲಾಗಿದೆ. 801 ? 1000 ಯೂನಿಟ್‌ಗಳ ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 10.20 ರೂ.ನಿಂದ 10.70 ರೂ.ಗೆ ಹೆಚ್ಚಿಸಲಾಗಿದೆ. 1,000 ಯೂನಿಟ್



ಗಿಂತ ಹೆಚ್ಚಿನ ಬಳಕೆಗೆ ಪ್ರತಿ ಯೂನಿಟ್‌ಗೆ 11.80 ರೂ. ಶುಲ್ಕ ವಿಧಿಸಲಾಗುತ್ತದೆ.ಈ ಏರಿಕೆ ಮಾಡಿರುವ ವಿದ್ಯುತ್ ದರವನ್ನು ಜುಲೈ 1ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿದೆ ಎಂದು ವಿದ್ಯುತ್ ನಿಯಂತ್ರಣ ಆಯೋಗ ಮಾಹಿತಿ ನೀಡಿದೆ. ಈ ಮೂಲಕ ಗೃಹ ಬಳಕೆ, ಕೈಮಗ್ಗ ಮತ್ತು ಫ್ಲ್ಯಾಟ್‌ಗಳು, ಪೂಜಾ ಸ್ಥಳಗಳು, ಸಣ್ಣ ಮತ್ತು ಅತಿಸಣ್ಣ ಉದ್ಯಮಗಳು, ಕೈಗಾರಿಕೆಗಳು, ಗ್ರಾಮ ಪಂಚಾಯಿತಿಗಳ ಐಟಿ ಕಂಪನಿಗಳ ವಿದ್ಯುತ್ ದರವನ್ನು ಹೆಚ್ಚಿಸಲಾಗಿದೆ. ಅದೇ ರೀತಿ ವಾಣಿಜ್ಯ ಬಳಕೆಯ ವಿದ್ಯುತ್ ಶುಲ್ಕವನ್ನೂ ಹೆಚ್ಚಿಸಲಾಗಿದೆ. ವಾಣಿಜ್ಯ ಬಳಕೆಗಾಗಿ, 50 ಕಿಲೋವ್ಯಾಟ್‌ಗಿಂತ ಹೆಚ್ಚಿನ ಬಳಕೆದಾರರಿಗೆ ವಿದ್ಯುತ್ ದರವನ್ನು ಹೆಚ್ಚಿಸಲಾಗಿದೆ. ಅದರಂತೆ ಒಂದು ಕಿಲೋವ್ಯಾಟ್ ವಿದ್ಯುತ್‌ಗೆ 307 ರೂ. ಇದ್ದಾಗ 322 ರೂ. ವಿಧಿಸಲಾಗುತ್ತದೆ. 112 ಕಿಲೋವ್ಯಾಟ್‌ಗಿಂತ ಹೆಚ್ಚಿನ ವಿದ್ಯುತ್‌ಗೆ 562 ರೂ., ಈಗ 589 ರೂ. ಇದರಿಂದಾಗಿ 112 ಕಿಲೋವ್ಯಾಟ್ ಗಿಂತ ಹೆಚ್ಚು ವಿದ್ಯುತ್ ಬಳಸುವವರಿಗೆ ಗರಿಷ್ಠ 27 ರೂ.ನಷ್ಟು ವಿದ್ಯುತ್ ದರ ಹೆಚ್ಚಳ ಮಾಡಲಾಗಿದೆ.

# ಮಾಧ್ಯಮಗಳು ನಾನು ಅಪರಾಧಿ ಎಂದು ಸಾಬೀತು ಪಡಿಸುವುದು ತಪ್ಪು': ಐಎಎಸ್ ಅಧಿಕಾರಿ ಪೂಜಾ

**ಮುಂಬೈ:** ಭಾರತೀಯ ಆಡಳಿತ ಸೇವೆಯಲ್ಲಿ ಸ್ಥಾನ ಪಡೆಯಲು ಅಂಗವಿಕಲತೆ ಮತ್ತು ಇತರೆ ಹಿಂದುಳಿದ ವರ್ಗಗಳ ಕೋಟಾವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸಮಿತಿ ವರದಿ ಸಲ್ಲಿಸಿದ ನಂತರ ಸತ್ಯ ಮೇಲುಗೈ ಸಾಧಿಸುತ್ತದೆ ಎಂದು ವಿವಾದಿತ ಪ್ರೊಬೇಷನರಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಅವರು ಸೋಮವಾರ ಹೇಳಿದ್ದಾರೆ.



34 ವರ್ಷದ ಪೂಜಾ ಖೇಡ್ಕರ್ ಅವರು ಐಎಎಸ್ ಪರೀಕ್ಷೆಯಲ್ಲಿ ಪಾಸ್ ಆಗಲು ನಕಲಿ ಅಂಗವೈಕಲ್ಯ ಮತ್ತು ಇತರೆ ಹಿಂದುಳಿದ ವರ್ಗದ(ಒಬಿಸಿ) ಪ್ರಮಾಣಪತ್ರಗಳನ್ನು ಸಲ್ಲಿಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿ ಬಂದಿದೆ.

ನಾನು ಸಮಿತಿಯ ಮುಂದೆ ಸಾಕ್ಷಿ ಹೇಳುತ್ತೇನೆ. ಸಮಿತಿ ತೆಗೆದುಕೊಳ್ಳುವ ಯಾವುದೇ ನಿರ್ಧಾರವು ಎಲ್ಲರಿಗೂ ಸ್ವೀಕಾರಾರ್ಹವಾಗಿರಬೇಕು ಎಂದು ನಾನು ಭಾವಿಸುತ್ತೇನೆ ಎಂದು ಖೇಡ್ಕರ್ ವಾಶಿಮ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಇಲ್ಲಿ ಪ್ರೊಬೇಷನರಿ ಅಧಿಕಾರಿಯಾಗಿ ನನ್ನ ಕೆಲಸವೆಂದರೆ ಕೆಲಸ ಮಾಡುವುದು ಮತ್ತು ಕಲಿಯುವುದು ಮತ್ತು ಅದನ್ನೇ ನಾನು ಮಾಡುತ್ತಿದ್ದೇನೆ. ನಾನು ಅದರ ಬಗ್ಗೆ ಯಾವುದೇ ಕಾಮೆಂಟ್ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.

'ಮಾಧ್ಯಮಗಳು ನಾನು ಅಪರಾಧಿ ಎಂದು ಸಾಬೀತು ಪಡಿಸುವುದು ತಪ್ಪು. ಸರ್ಕಾರದ ತಜ್ಞರು(ಸಮಿತಿ) ಅದನ್ನು ನಿರ್ಧರಿಸುತ್ತಾರೆ. ನಾನು ಅಥವಾ ನೀವು (ಮಾಧ್ಯಮ) ಅಥವಾ ಸಾರ್ವಜನಿಕರು ನಿರ್ಧರಿಸಲು ಸಾಧ್ಯವಿಲ್ಲ ಎಂದು ಖೇಡ್ಕರ್ ಹೇಳಿದ್ದಾರೆ. ನಿಮ್ಮನ್ನು ಟಾರ್ಗೆಟ್ ಮಾಡಲಾಗುತ್ತಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಖೇಡ್ಕರ್, ಏನು ನಡೆಯುತ್ತಿದೆ ಎಂಬುದು ಎಲ್ಲರಿಗೂ ತಿಳಿದಿದೆ. ಭಾರತೀಯ ಸಂವಿಧಾನವು ಅಪರಾಧ ಸಾಬೀತಾಗುವವರೆಗೂ ನೀವು ನಿರಪರಾಧಿ ಎಂದು ಹೇಳುತ್ತದೆ. ಆದ್ದರಿಂದ ಮಾಧ್ಯಮ ವಿಚಾರಣೆಯಿಂದ ನನ್ನನ್ನು ತಪ್ಪಿತಸ್ಥ ಎಂದು ಸಾಬೀತುಪಡಿಸುವುದು ಪ್ರತಿಯೊಬ್ಬರ ತಪ್ಪು ಎಂದಿದ್ದಾರೆ.

# ಟ್ರಂಪ್ ಮೇಲಿನ ಗುಂಡಿನ ದಾಳಿ ಬಗ್ಗೆ ಸ್ವತಂತ್ರ ತನಿಖೆಗೆ ಸಮ್ಮತಿ

**ವಾಷಿಂಗ್ಟನ್:** ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲೆ ನಡೆದ ಗುಂಡಿನ ದಾಳಿಯ ಬಗ್ಗೆ ಸ್ವತಂತ್ರ ತನಿಖೆ ನಡೆಸುವುದಕ್ಕೆ ಅಮೆರಿಕದ ಸೀಕ್ರೆಟ್ ಸರ್ವಿಸ್ ಸಮ್ಮತಿಸಿದ್ದು ತನಿಖೆಗೆ ಸಂಪೂರ್ಣ ಸಹಕಾರ ನೀಡುವುದಾಗಿ ಹೇಳಿದೆ. ಚುನಾವಣಾ ರ್ಯಾಲಿಯ ಸಂದರ್ಭ ಟ್ರಂಪ್ ಭದ್ರತೆಯ ಹೊಣೆ ವಹಿಸಿದ್ದ ಸೀಕ್ರೆಟ್ ಸರ್ವಿಸ್(ರಹಸ್ಯ ಗುಪ್ತಚರ ಸೇವೆ) ಏಜೆಂಟರು ಕರ್ತವ್ಯ ಲೋಪ ಎಸಗಿದ್ದಾರೆ ಎಂದು ವ್ಯಾಪಕ ಟೀಕೆ, ಖಂಡನೆ ವ್ಯಕ್ತವಾಗಿದ್ದು ಕರ್ತವ್ಯದ ಕಡೆ ಗಮನ ನೀಡದ ಸೀಕ್ರೆಟ್ ಸರ್ವಿಸ್ ಮುಖ್ಯಸ್ಥೆ ಕಿಂಬರ್ಲಿ ಚಿಯಾಟಲ್ ತಕ್ಷಣ ರಾಜೀನಾಮೆ ನೀಡಬೇಕೆಂಬ ಆಗ್ರಹ ಹೆಚ್ಚಿದೆ. ಏನು ನಡೆದಿದೆ, ಹೇಗೆ ನಡೆದಿದೆ ಮತ್ತು ಇಂತಹ ಘಟನೆಗಳು ಮುಂದೆಂದೂ ನಡೆಯದಂತೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಫೆಡರಲ್, ರಾಜ್ಯ ಅಥವಾ ಸ್ಥಳೀಯ ಏಜೆನ್ಸಿಗಳು ನಡೆಸುವ ತನಿಖೆಗೆ ಸೀಕ್ರೆಟ್ ಸರ್ವಿಸ್ ಸಹಕರಿಸುತ್ತದೆ. ಅಧ್ಯಕ್ಷ ಜೋ ಬೈಡನ್ ಘೋಷಿಸಿದ ಸ್ವತಂತ್ರ ಪರಿಶೀಲನೆಯ ಮಹತ್ವವನ್ನು ನಾವು ತಿಳಿದಿದ್ದೇವೆ ಮತ್ತು ಇದರಲ್ಲಿ ಪೂರ್ಣ ರೀತಿಯಲ್ಲಿ ತೊಡಗಿಸಿಕೊಳ್ಳಲಿದ್ದೇವೆ' ಎಂದು ಸೀಕ್ರೆಟ್ ಸರ್ವಿಸ್ ಮುಖ್ಯಸ್ಥೆ ಕಿಂಬರ್ಲಿ ಚಿಯಾಟಲ್ ಹೇಳಿದ್ದಾರೆ.



# ತಮಿಳುನಾಡು ಸರ್ವಪಕ್ಷ ಸಭೆ ಕರ್ನಾಟಕದ ವಿರುದ್ಧ ಆಕ್ರೋಶ

**ತಮಿಳುನಾಡು:** ತಮಿಳುನಾಡಿಗೆ ಕಾವೇರಿ ನೀರಿನ ಪ್ರಮಾಣ ಕಡಿಮೆ ಮಾಡಿರುವ ಕರ್ನಾಟಕ ಸರ್ಕಾರದ ನಿಲುವನ್ನು ತಮಿಳುನಾಡು ಸರ್ಕಾರ ಖಂಡಿಸಿದ್ದು, ಸರಿಯಾದ ಪ್ರಮಾಣದಲ್ಲಿ ನೀರು ಬಿಡುವಂತೆ ಕರ್ನಾಟಕ ಸರ್ಕಾರಕ್ಕೆ ಸಿಡಬ್ಲ್ಯುಆರ್‌ಸಿ ಆದೇಶ ನೀಡುವಂತೆ ಒತ್ತಾಯಿಸುತ್ತೇವೆ ಎಂದು ಸಿಎಂ ಸ್ಟಾಲಿನ್ ಹೇಳಿದ್ದಾರೆ.



ಕಾವೇರಿ ನೀರು ವಿಚಾರವಾಗಿ ಇಂದು ಸರ್ವ ಪಕ್ಷ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನೈರುತ್ಯ ಮುಂಗಾರು ಹಾಗೂ ಕರ್ನಾಟಕದ ಅಣೆಕಟ್ಟುಗಳಲ್ಲಿ ಒಳಹರಿವು ಹೆಚ್ಚಳ ಪರಿಗಣಿಸಿ ಈ ಮಾಸಾಂತ್ಯದವರೆಗೂ ಪ್ರತಿದಿನ ಒಂದು ಟಿಎಂಸಿ ಅಡಿ ಬಿಡುಗಡೆ ಮಾಡಲು ಕಾವೇರಿ ನೀರು ನಿಯಂತ್ರಣ ಸಮಿತಿ ನಿರ್ದೇಶನ ನೀಡಿದೆ. ಆದರೆ ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ ಎಂದು ಕರ್ನಾಟಕ ಸರ್ಕಾರ ಹೇಳಿರುವುದು ಆಘಾತಕಾರಿಯಾಗಿದೆ. ಈ ನಿರ್ದೇಶನವನ್ನು ಕೂಡಲೇ ಜಾರಿಗೊಳಿಸುವಂತೆ ಕೋರಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಪತ್ರ ಬರೆಯಲಾಗಿದೆ. ಸಮಿತಿ ಆದೇಶವನ್ನು ಕರ್ನಾಟಕ ಪಾಲಿಸದಿರುವುದು ಸುಪ್ರೀಂ ಕೋರ್ಟ್ ತೀರ್ಪಿನ ಉಲ್ಲಂಘನೆಯಾಗಿದೆ. ಆ ಕಾರಣಕ್ಕೆ ತಮಿಳುನಾಡಿಗೆ ಕಾವೇರಿ ನೀರು ಬಿಡುವಂತೆ ಕರ್ನಾಟಕ ಸರ್ಕಾರಕ್ಕೆ ಸಿಡಬ್ಲ್ಯುಆರ್‌ಸಿ ಆದೇಶ ನೀಡುವಂತೆ ಒತ್ತಾಯಿಸುತ್ತೇವೆ ಎಂದು ಸಿಎಂ ಸ್ಟಾಲಿನ್ ಹೇಳಿದರು.

# ನಾಗಾಲ್ಯಾಂಡ್‌ನ ಸಮಗ್ರ ಆರ್ಥಿಕ ಅಭಿವೃದ್ಧಿಗೆ ಇಝು ಝುಂಕಿ ನದಿ ಬಳಕೆ: ಸೋನೋವಾಲ್

**ದಿಮಾಪುರ:** ನಾಗಾಲ್ಯಾಂಡ್‌ನ ಜಲಮಾರ್ಗ ಸಾಮರ್ಥ್ಯವನ್ನು ಸದೃಢಗೊಳಿಸುವ ಗುರಿಯನ್ನು ಹೊಂದಿರುವ ಪ್ರಮುಖ ಉಪಕ್ರಮಗಳನ್ನು ಕೇಂದ್ರ ಬಂದರುಗಳು, ಶಿಪ್ಪಿಂಗ್ ಮತ್ತು ಜಲಮಾರ್ಗಗಳ ಖಾತೆ ಸಚಿವ ಸರ್ಬಾನಂದ ಸೋನೊವಾಲ್ ಅವರು ಪಾಲುದಾರರ ಸಮಾವೇಶದಲ್ಲಿ ಘೋಷಿಸಿದರು.




ನಾಗಾಲ್ಯಾಂಡ್‌ನ ಮುಖ್ಯಮಂತ್ರಿ ನೇಫಿಯು ರಿಯೊ ಅವರು ಸರ್ಬಾನಂದ ಸೋನೊವಾಲ್ ಅವರೊಂದಿಗೆ ಸೇರಿ ಟಿಝು ಝುಂಕಿ (ರಾಷ್ಟ್ರೀಯ ಜಲಮಾರ್ಗಗಳು 101) ಅಭಿವೃದ್ಧಿಯನ್ನು ಭಾರತದ ಒಳನಾಡು ಜಲಮಾರ್ಗಗಳ ಪ್ರಾಧಿಕಾರ ಮತ್ತು ನಾಗಾಲ್ಯಾಂಡ್ ಸರ್ಕಾರದ ಸಾರಿಗೆ ಇಲಾಖೆ ಎರಡೂ ನ್ಯಾವಿಗೇಷನ್ ಕಾರ್ಯಸಾಧ್ಯತೆಗಾಗಿ ಅಧ್ಯಯನ ಮಾಡಲು ಒಟ್ಟಾಗಿ ಕೆಲಸ ಮಾಡುವುದಾಗಿ ಘೋಷಿಸಿದರು.

ರಿಯೊ ಮತ್ತು ಸೊನೊವಾಲ್ ಸಮುದಾಯದ ಜೆಟ್ಟಿಗಳೊಂದಿಗೆ ಡೊಯಾಂಗ್ ನದಿಯ ಸರೋವರದ ಅಪಾರ ಪ್ರವಾಸೋದ್ಯಮ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸಲು ಉಪಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಘೋಷಿಸಿದರು ಮತ್ತು ರೋ ಪ್ಯಾಕ್ಸ್ ದೋಣಿಗಳ ಅಧ್ಯಯನದ ಕಾರ್ಯಸಾಧ್ಯತೆಯನ್ನು ಸಹ ಪ್ರಕಟಿಸಿದರು. ಇದು ರಾಜ್ಯದ ಪ್ರವಾಸೋದ್ಯಮ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ಬಣ್ಣಿಸಿದರು. ಭಾರತ ಸರ್ಕಾರದ ಬಂದರುಗಳು, ಶಿಪ್ಪಿಂಗ್ ಮತ್ತು ಜಲಮಾರ್ಗಗಳ ಸಚಿವಾಲಯದ ನೋಡಲ್ ಏಜೆನ್ಸಿಯಾದ ಭಾರತದ ಒಳನಾಡಿನ ಜಲಮಾರ್ಗಗಳ ಪ್ರಾಧಿಕಾರ ಆಯೋಜಿಸಿದ ಮಧ್ಯಸ್ಥಗಾರರ ಸಮ್ಮೇಳನದ ಸಂವಾದಾತ್ಮಕ ಅಧಿವೇಶನದಲ್ಲಿ ಈ ಬೆಳವಣಿಗೆಗಳನ್ನು ಘೋಷಿಸಲಾಗಿದೆ. ಉಪಮುಖ್ಯಮಂತ್ರಿ, ಯಾಂತುಂಗೋ ಪ್ಯಾಟನ್; ನಾಗಾಲ್ಯಾಂಡ್ನ ಪ್ರವಾಸೋದ್ಯಮ ಸಚಿವ ತೆಮ್ಜೆನ್ ಇಮ್ನಾ, ಸಂಸದ ಎಸ್‌ಎಸ್ ಜಮೀರ್ ಮತ್ತಿತರರು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಜಲಮಾರ್ಗಗಳು ಅತ್ಯಂತ ಆರ್ಥಿಕ, ಸುಸ್ಥಿರ ಮತ್ತು ಪರಿಣಾಮಕಾರಿ ಸಾರಿಗೆ ವಿಧಾನವಾಗಿದೆ. ನಮ್ಮ ಪ್ರಧಾನಿ ನರೇಂದ್ರ ಮೋದಿ ಜೀ ಅವರು ಯಾವಾಗಲೂ ದೇಶದಲ್ಲಿ ದಕ್ಷ ಮತ್ತು ಪರಿಣಾಮಕಾರಿ ಸಾರಿಗೆ ವಿಧಾನವನ್ನು ಅಭಿವೃದ್ಧಿಪಡಿಸಲು ಕಾರ್ಯಸಾಧ್ಯವಾದ ಪರ್ಯಾಯವಾಗಿ ದೇಶದ ಒಳನಾಡಿನ ಜಲಮಾರ್ಗಗಳಿಗೆ ಆದ್ಯತೆ ನೀಡಿದ್ದಾರೆ. ಈಶಾನ್ಯದ ಜಲಮಾರ್ಗಗಳ ಸಂಕೀರ್ಣ ಮತ್ತು ಕ್ರಿಯಾತ್ಮಕ ಮಿಶ್ರಣವು ರಾಷ್ಟ್ರ ನಿರ್ಮಾಣದ ಆವೇಗವನ್ನು ನಿರ್ಮಿಸಲು ನಮಗೆ ಅತ್ಯುತ್ತಮ ಅವಕಾಶವನ್ನು ಒದಗಿಸುತ್ತದೆ. ನಾವು ದೃಢವಾಗಿ ಬದ್ಧರಾಗಿರುತ್ತೇವೆ ಮತ್ತು ಪ್ರದೇಶದ ಜಲಮಾರ್ಗಗಳ ಅಭಿವೃದ್ಧಿಗೆ ಪ್ರಚೋದನೆಯನ್ನು ಒದಗಿಸುವ ಹಾದಿಯಲ್ಲಿದ್ದೇವೆ ಎಂದು ಸೋನೆವಾಲ್ ಘೋಷಿಸಿದರು.

# ಉಕ್ರೇನ್ ಶೃಂಗಸಭೆಯಲ್ಲಿ ರಶ್ಯವೂ ಭಾಗಿಯಾಗಲಿ: ಝೆಲೆನ್ಸ್ಕಿ

**ಉಕ್ರೇನ್:** ಉಕ್ರೇನ್ ಯುದ್ಧವನ್ನು ಅಂತ್ಯಗೊಳಿಸುವ ಉದ್ದೇಶದಿಂದ ನಡೆಯುವ ಉಕ್ರೇನ್ ಶೃಂಗಸಭೆಯ ಎರಡನೇ ಸುತ್ತಿನ ಮಾತುಕತೆಯಲ್ಲಿ ರಶ್ಯವೂ ಪಾಲ್ಗೊಳ್ಳಬೇಕು ಎಂದು ಉಕ್ರೇನ್ ಅಧ್ಯಕ್ಷ ವೊಲೊದಿಮಿರ್ ಝೆಲೆನ್ಸ್ಕಿ ತಿಳಿಸಿದ್ದಾರೆ.



ಜೂನ್ 15ರಂದು ಸ್ವಿಝರ್ಲ್ಯಾಂಡ್‌ನಲ್ಲಿ ನಡೆದಿದ್ದ ಉಕ್ರೇನ್ ಶೃಂಗಸಭೆಯ ಪ್ರಥಮ ಹಂತದ ಸಭೆಗೆ ರಶ್ಯವನ್ನು ಆಹ್ವಾನಿಸಿರಲಿಲ್ಲ. ಸಭೆಯಲ್ಲಿ ಪಾಲ್ಗೊಂಡಿದ್ದ 90ಕ್ಕೂ ಅಧಿಕ ರಾಷ್ಟ್ರಗಳ ಪ್ರತಿನಿಧಿಗಳು ಉಕ್ರೇನ್‌ನಲ್ಲಿ ಶಾಶ್ವತ ಶಾಂತಿ ಸ್ಥಾಪಿಸುವ ಪ್ರಯತ್ನಕ್ಕೆ ಬೆಂಬಲ ಸೂಚಿಸಿದ್ದರು. ಆದರೆ ರಶ್ಯವನ್ನು ಒಳಗೊಂಡಿರದ, ಸಂಘರ್ಷವನ್ನು ಕೊನೆಗೊಳಿಸುವ ಯಾವುದೇ ಚರ್ಚೆಗಳು 'ಅಸಂಬದ್ಧ' ಎಂದು ರಶ್ಯ ಟೀಕಿಸಿತ್ತು. 'ಎರಡನೇ ಶೃಂಗಸಭೆಯಲ್ಲಿ ರಶ್ಯದ ಪ್ರತಿನಿಧಿಗಳು ಪಾಲ್ಗೊಳ್ಳಬೇಕು ಎಂದು ಬಯಸುವುದಾಗಿ ಕೀವ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಝೆಲೆನ್ಸ್ಕಿ ಹೇಳಿದ್ದಾರೆ. ಶೃಂಗಸಭೆಗೂ ಮುನ್ನ ಇಂಧನ ಭದ್ರತೆ ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಪ್ರತ್ಯೇಕ ಸಭೆ ಖತರ್‌ನಲ್ಲಿ ಮತ್ತು ಆಹಾರ ಭದ್ರತೆ ಕುರಿತ ಸಭೆ ಈಜಿಪ್ಟ್‌ನಲ್ಲಿ ನಡೆಯಲಿದೆ ಎಂದು ಝುಲೆನ್ ಸ್ಕಿ ಮಾಹಿತಿ ನೀಡಿದ್ದಾರೆ.

# ಫಿಲಿಪ್ಪೈನ್ಸ್‌ನಲ್ಲಿ ಭೀಕರ ಮಳೆಗೆ ಭೂಕುಸಿತ

**ದಕ್ಷಿಣಫಿಲಿಪ್ಪೈನ್ಸ್:** ದಕ್ಷಿಣಫಿಲಿಪ್ಪೈನ್ಸ್‌ನ ಜಂಬೊಂಗಾ ನಗರದಲ್ಲಿ ಭಾರಿ ಮಳೆಯಿಂದಾಗಿ ಉಂಟಾದ ಭೂಕುಸಿತ ಮತ್ತು ಪ್ರವಾಹದಲ್ಲಿ ಕನಿಷ್ಠ ಐದು ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ವಿಪತ್ತು ತಡೆಗಟ್ಟುವಸಂಸ್ಥೆಯ ವಕ್ತಾರರು ಮಾಹಿತಿ ನೀಡಿದ್ದಾರೆ.

ನಗರ ವಿಪತ್ತು ಅಪಾಯ ಕಡಿತ ಮತ್ತು ನಿರ್ವಹಣಾ ಕಚೇರಿಯ ಎಲ್ಮೀರ್ ಅಪೊಲಿನಾರಿಯೊ ಅವರು ಭೂಕುಸಿತದಿಂದ ನಾಲ್ವರು ಮತ್ತು ಒಬ್ಬರು ಮುಳುಗಿ ಸಾವನ್ನಪ್ಪಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

29 ವರ್ಷದ ತಾಯಿ ಮತ್ತು ಆಕೆಯ ಆರು ವರ್ಷದ ಮಗ, 47 ವರ್ಷದ ತಂದೆ ಮತ್ತು ಅವರ 10 ವರ್ಷದ ಮಗ ಸೇರಿದಂತೆ ಐದು ಮೃತಪಟ್ಟಿದ್ದಾರೆ.

ಶುಕ್ರವಾರ ರಾತ್ರಿ ಸುರಿದ ಭಾರಿ ಮಳೆಯಿಂದಾಗಿ ನಗರದಲ್ಲಿ ಎರಡು ಭೂಕುಸಿತ ಮತ್ತು ಭಾರಿ ಪ್ರವಾಹ ಉಂಟಾಗಿದ್ದು, ಕನಿಷ್ಠ 4,000 ಕುಟುಂಬಗಳ ಮೇಲೆ ಪರಿಣಾಮ ಬೀರಿದೆ ಎಂದು ಅಪೊಲಿನಾರಿಯೊ ಹೇಳಿದರು. ವಾರಾಂತ್ಯದಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ ಬಳಲುತ್ತಿರುವ ಮಿಂಡಾನಾವೊದ ಐದು ಪ್ರದೇಶಗಳಲ್ಲಿ ಜಂಬೊಂಗಾ ನಗರವೂ ಒಂದಾಗಿದೆ, ಇದು 60,000 ಕ್ಕೂ ಹೆಚ್ಚು ಕುಟುಂಬಗಳ ಮೇಲೆ ತೀವ್ರ ಪರಿಣಾಮ ಉಂಟು ಮಾಡಿದೆ.

# ಬಿಜೆಪಿಯ ತಪ್ಪು ನೀತಿಗಳಿಂದ ಉಗ್ರರ ಉಪಟಳ ಹೆಚ್ಚಳ

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಮತ್ತೊಂದು ಭಯೋತ್ಪಾದಕರ ಎನ್ಕೌಂಟರ್‌ನಲ್ಲಿ ನಮ್ಮ ಯೋಧರು ಪ್ರಾಣ ಕಳೆದುಕೊಂಡಿದ್ದು, ಅವರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತೇನೆ ಮತ್ತು ದುಃಖತಪ್ತ ಕುಟುಂಬಗಳಿಗೆ ತೀವ್ರ ಸಂತಾಪವನ್ನು ವ್ಯಕ್ತಪಡಿಸುತ್ತೇನೆ ಎಂದು ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಹೇಳಿದ್ದಾರೆ. ಈ ನಿರಂತರ ಭಯೋತ್ಪಾದಕ ದಾಳಿಗಳು ಜಮ್ಮು ಮತ್ತು ಕಾಶ್ಮೀರದಲ್ಲಿನ ಪ್ರಸ್ತುತ ಪರಿಸ್ಥಿತಿ ಹೇಗಿದೆ ಎಂಬುದನ್ನು ತೋರಿಸುತ್ತಿದೆ. ಬಿಜೆಪಿಯ ತಪ್ಪು ನೀತಿಗಳೇ ಇಂಥದ್ದಕ್ಕೆಲ್ಲ ಹೊಣೆಯಾಗಿದೆ. ಇದರಿಂದ ದೇಶಭಕ್ತ ಯೋಧರು ಬಲಿಯಾಗುವ ಜೊತೆಗೆ ಅವರ ಕುಟುಂಬಗಳು ತೀವ್ರತರ ದುಃಖಕ್ಕೆ ಒಳಗಾಗಬೇಕಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪದೇ ಪದೆ ಭದ್ರತಾ ಲೋಪಗಳಿಗೆ ಅವಕಾಶವಾಗದಂತೆ ಕ್ರಮ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಈ ಮೂಲಕ ದೇಶಭಕ್ತ ಯೋಧರ ಸಾವಿಗೆ ಕಡಿವಾಣ ಹಾಕಿ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.



# ಮೇಡ್ ಇನ್ ಬಿಹಾರ್' ಶೂನಲ್ಲಿ ರಷ್ಯಾ ಸೈನಿಕರ ಫೈಟ್

**ರಷ್ಯಾ:** ರಷ್ಯಾದ ಸೈನ್ಯವು 'ಮೇಡ್ ಇನ್ ಬಿಹಾರ' ಶೂಗಳಿಂದ ಪ್ರಭಾವಿತವಾಗಿದೆ. ಉಕ್ರೇನ್ ಯುದ್ಧದಲ್ಲಿ ತೊಡಗಿರುವ ರಷ್ಯಾದ ಸೇನೆಯು ಹಾಜಿಪುರದಲ್ಲಿ ತಯಾರಾದ ಈ ಶೂಗಳನ್ನು ತನ್ನ ಕಾರ್ಯಾಚರಣೆಗೆ ಬಳಸುತ್ತಿದೆ. ಬಿಹಾರದ ಹಾಜಿಪುರ ನಗರ ರಷ್ಯಾ ಸೇನೆಗೆ ಪಾದರಕ್ಷೆಗಳನ್ನು ತಯಾರಿಸುವ ಮೂಲಕ ತನ್ನದೇ ಆದ ಛಾಪು ಮೂಡಿಸುತ್ತಿದೆ. ಹಾಜಿಪುರ ಮೂಲದ ಕಂಪನಿ ಕಾಂಪಿಟೆನ್ಸ್ ಎಕ್ಸ್‌ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ ರಷ್ಯಾಕ್ಕೆ ಸುರಕ್ಷತಾ ಬೂಟುಗಳನ್ನು ಮತ್ತು ಯುರೋಪಿಯನ್ ಮಾರುಕಟ್ಟೆಗಳಿಗೆ ಡಿಸೈನರ್ ಶೂಗಳನ್ನು ಮಾರಾಟ ಮಾಡುತ್ತಿದೆ, ಪ್ರಸ್ತುತ ಅವರು ರಷ್ಯಾದ ಸೈನ್ಯಕ್ಕೆ ಶೂಗಳನ್ನು ಪೂರೈಸುತ್ತಿದ್ದಾರೆ. 2018 ರಲ್ಲಿ ಹಾಜಿಪುರ ಘಟಕವನ್ನು ಪ್ರಾರಂಭಿಸಲಾಗಿದೆ. ಸ್ಥಳೀಯ ಉದ್ಯೋಗವನ್ನು ಸೃಷ್ಟಿಸುವುದು ಇದರ ಮುಖ್ಯ ಉದ್ದೇಶವಾಗಿತ್ತು ಎಂದು ಕಾಂಪಿಟೆನ್ಸ್ ಎಕ್ಸ್‌ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್‌ನ ಜನರಲ್ ಮ್ಯಾನೇಜರ್ ಶಿವ ಕುಮಾರ್ ರಾಯ್ ಹೇಳಿದ್ದಾರೆ. ಹಾಜಿಪುರದಲ್ಲಿ ರಷ್ಯಾಕ್ಕೆ ರಫ್ತು ಮಾಡಲು ಸುರಕ್ಷತಾ ಬೂಟುಗಳನ್ನು ತಯಾರಿಸಲಾಗುತ್ತದೆ. ಸಂಪೂರ್ಣ ರಫ್ತು ರಷ್ಯಾಕ್ಕೆ ಮಾತ್ರ ಸೀಮಿತವಾಗಿದೆ.



# ಗೆಳೆಯನ ತಾಯಿಯ ಮೇಲೆ ಯುವಕನಿಂದ ಅತ್ಯಾಚಾರ; ಹೇಯ ಕೃತ್ಯ ಬಯಲು

**ನವದೆಹಲಿ:** ಭೋಪಾಲ್‌ನಲ್ಲಿ 43 ವರ್ಷದ ಮಹಿಳೆಯೊಬ್ಬಳ ಮೇಲೆ ಆಕೆಯ ಮಗನ ಸ್ನೇಹಿತ ಅತ್ಯಾಚಾರವೆಸಗಿರುವ ಆಘಾತಕಾರಿ ಘಟನೆ ಮಧ್ಯಪ್ರದೇಶದಲ್ಲಿ ಬೆಳಕಿಗೆ ಬಂದಿದೆ. ಭೂಪಾಲ್‌ನ ಅವಧಪುರಿಯಲ್ಲಿ ಈ ಆಘಾತಕಾರಿ ಘಟನೆ ನಡೆದಿದ್ದು, ತನ್ನ ಗೆಳೆಯನ ತಾಯಿಯ ಮೇಲೆಯೇ ಯುವಕನೊಬ್ಬ ಅತ್ಯಾಚಾರವೆಸಗಿದ್ದಾನೆ. ಅತ್ಯಾಚಾರವನ್ನು ಆಕೆ ವಿರೋಧಿಸಿದ್ದಕ್ಕಾಗಿ ಆಕೆಯ ಮಗನನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಾನೆ. ಆಕೆಯನ್ನು ಬ್ಲ್ಯಾಕ್‌ಮೇಲ್ ಮಾಡಿ ಅತ್ಯಾಚಾರವೆಸಗಿದ್ದಾನೆ ಎಂದು ಆರೋಪಿಸಲಾಗಿದೆ.



ಆರೋಪಿಯು ಮಹಿಳೆಯ ಮೇಲೆ ದೌರ್ಜನ್ಯವೆಸಗಿದ್ದಾನೆ. ಅತ್ಯಾಚಾರದ ವಿಷಯವನ್ನು ಯಾರಿಗಾದರೂ ಹೇಳಿದರೆ ಆಕೆಯ ಮಗನನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿದ್ದಾನೆ. ಇದಾದ ಬಳಿಕ ಆರೋಪಿ ಆ ಮಹಿಳೆಯ ಮೇಲೆ ಅತ್ಯಾಚಾರ ಎಸಗಿ ಸ್ಥಳದಿಂದ ಪರಾರಿಯಾಗಿದ್ದಾನೆ. ಮರುದಿನ ಮಹಿಳೆ ಪೊಲೀಸರಿಗೆ ದೂರು ನೀಡಿ ಆರೋಪಿಗಳ ವಿರುದ್ಧ ಕೇಸ್ ದಾಖಲಿಸಿದ್ದಾರೆ.

ಅತ್ಯಾಚಾರಕ್ಕೊಳಗಾದ ಮಹಿಳೆಯ ಮಗನ ಸ್ನೇಹಿತನಾಗಿರುವ ಆರೋಪಿಯು ಅತ್ಯಾಚಾರದ ಪ್ರಯತ್ನವನ್ನು ವಿರೋಧಿಸಿದರೆ ತನ್ನ ಮಗನನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿ ನಂತರ ಆಕೆಯ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ಪೊಲೀಸ್ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಈ ಅತ್ಯಾಚಾರ ಘಟನೆಯು ಜುಲೈ 12ರಂದು ಭೋಪಾಲ್‌ನ ಅವಧಪುರಿ ಪ್ರದೇಶದಲ್ಲಿ ಸಂಭವಿಸಿದೆ. ಟೈಮ್ಸ್ ಆಫ್ ಇಂಡಿಯಾದ ವರದಿ ಪ್ರಕಾರ, ಆರೋಪಿ ಮತ್ತು ಅತ್ಯಾಚಾರಕ್ಕೊಳಗಾದ ಮಹಿಳೆ ಒಂದೇ ಪ್ರದೇಶದಲ್ಲಿ ವಾಸಿಸುತ್ತಿದ್ದರು. ಶುಕ್ರವಾರ ರಾತ್ರಿ ಆಕೆಯ ಮಗ ಮತ್ತು ಆರೋಪಿ ಹೊರಗೆ ಹೋಗಿದ್ದ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂದು ಸಂತ್ರಸ್ತೆ ದೂರಿನಲ್ಲಿ ತಿಳಿಸಿದ್ದಾರೆ. ಮಧ್ಯರಾತ್ರಿ, ಆರೋಪಿಯು ಗೆಳೆಯನೊಂದಿಗೆ ಮನೆಗೆ ಬಂದು ಮನೆ ಬಾಗಿಲು ತಟ್ಟಿದ್ದಾನೆ. ಆಕೆಯ ಮಗ ಕಂಠಪೂರ್ತಿ ಕುಡಿದಿದ್ದರಿಂದ ಮೈಮೇಲೆ ಪ್ರಜ್ಞೆ ಇರಲಿಲ್ಲ. ಆಗ ಆತನ ತಾಯಿಯ ಮೇಲೆ ಆಕೆಯ ಮಗನ ಸ್ನೇಹಿತ ಅತ್ಯಾಚಾರ ನಡೆಸಿದ್ದಾನೆ. ಈ ಘಟನೆ ಕುರಿತು ಪೊಲೀಸರು ತನಿಖೆ ಆರಂಭಿಸಿದ್ದು, ಆರೋಪಿ ಇನ್ನೂ ತಲೆಮರೆಸಿಕೊಂಡಿದ್ದಾನೆ.

# ಸಂಭ್ರಮಾಚರಣೆಗೆ ಇಲ್ಲಿಗೇ ಬನ್ನಿ: ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾಗೆ ಮಾಲ್ಡೀವ್ಸ್ ಆಹ್ವಾನ

**ನವದೆಹಲಿ:** ಇತ್ತೀಚೆಗೆ ಮುಕ್ತಾಯವಾದ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಜಯಭೇರಿ ಭಾರಿಸಿ ವಿಶ್ವಕಪ್ ಗೆದ್ದಿರುವ ಭಾರತ ತಂಡವನ್ನು ಸಂಭ್ರಮಾಚರಣೆಗೆ ಆಗಮಿಸುವಂತೆ ಮಾಲ್ಡೀವ್ಸ್ ಆಹ್ವಾನಿಸಿದೆ.

ಮಾಲ್ಡೀವ್ಸ್ ಪ್ರವಾಸೋಧ್ಯಮ ಇಲಾಖೆ ಭಾರತ ಕ್ರಿಕೆಟ್ ತಂಡಕ್ಕೆ ಈ ಆಹ್ವಾನ ನೀಡಿದ್ದು, 'ಭಾರತೀಯ ಕ್ರಿಕೆಟ್ ತಂಡವನ್ನು ಸ್ವಾಗತಿಸಲು ಮತ್ತು ಅವರ ವಿಜಯದ ಸಂತೋಷದಲ್ಲಿ ಪಾಲ್ಗೊಳ್ಳಲು ಮಾಲ್ಡೀವ್ಸ್‌ಗೆ ಅಪಾರ ಗೌರವವಾಗಿದೆ ಎಂದು ಹೇಳಿದೆ.

ಜೂನ್ 29 ರಂದು ನಡೆದ ಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಏಳು ರನ್‌ಗಳಿಂದ ಸೋಲಿಸಿದ ನಂತರ ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ ಬಾರ್ಬಡೋಸ್‌ನಲ್ಲಿ ಟಿ20 ಟ್ರೋಫಿಯನ್ನು ಗೆದ್ದುಕೊಂಡಿತು.

ಇದರ ಬೆನ್ನಲ್ಲೇ ಮಾಲ್ಡೀವ್ಸ್ ಮಾರ್ಕೆಟಿಂಗ್ ಮತ್ತು ಪಬ್ಲಿಕ್ ರಿಲೇಷನ್ಸ್ ಕಾರ್ಪೊರೇಷನ್ ಮಾಲ್ಡೀವ್ಸ್ ಅಸೋಸಿಯೇಷನ್ ಆಫ್ ಟೂರಿಸಂ ಇಂಡಸ್ಟ್ರಿ ಸಹಯೋಗದೊಂದಿಗೆ ಜಂಟಿಯಾಗಿ ಭಾರತೀಯ ರಾಷ್ಟ್ರೀಯ ಕ್ರಿಕೆಟ್ ತಂಡಕ್ಕೆ ವಿಶೇಷ ಮತ್ತು ಮುಕ್ತ ಆಹ್ವಾನವನ್ನು ನೀಡಿದ್ದೇವೆ ಎಂದು ಎರಡು ಸಂಸ್ಥೆಗಳು ಜಂಟಿ ಹೇಳಿಕೆಯಲ್ಲಿ ತಿಳಿಸಿವೆ.

ಎಂಎಂಪಿಆರ್‌ಸಿಯ ಸಿಇಒ ಮತ್ತು ವ್ಯವಸ್ಥಾಪಕ ನಿರ್ದೇಶಕ ಇಬ್ರಾಹಿಂ ಶಿಯುರಿ ಮತ್ತು ಒಂಖಿಖಯ ಪ್ರಧಾನ ಕಾರ್ಯದರ್ಶಿ ಅಹ್ಮದ್ ನಜೀರ್ ಅವರು ಕಳೆದ ವಾರ ಗುರುವಾರ ಭಾರತಕ್ಕೆ ಮರಳಿದ ತಂಡವನ್ನು ಆತಿಥ್ಯ ವಹಿಸಲು ಎದುರು ನೋಡುತ್ತಿರುವುದಾಗಿ ಹೇಳಿದ್ದಾರೆ.

ಈ ಹಿಂದೆ ಭಾರತೀಯ ಸೇನೆ ವಿರುದ್ಧ ಕಿಡಿಕಾರಿದ್ದ ಮಾಲ್ಡೀವ್ಸ್ ಅಧ್ಯಕ್ಷ ಮುಯಿಝು ಸರ್ಕಾರ ಭಾರತ ಸರ್ಕಾರದ ವಿರುದ್ಧ ತೊಡೆ ತಟ್ಟಿ ನಿಂತಿತ್ತು. ಗೋ ಬ್ಯಾಕ್ ಇಂಡಿಯಾ ಅಭಿಯಾನದ ಮೂಲಕ ಭಾರತವನ್ನು ಎದುರುಹಾಕಿಕೊಂಡಿತ್ತು. ಮಾಲ್ಡೀವ್ಸ್ ರಾಜಕಾರಣಿಗಳು ಭಾರತದ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದರು.

ಇದರ ಬೆನ್ನಲ್ಲೇ ಭಾರತದಲ್ಲಿ ಬಾಯ್ಕಾಟ್ ಮಾಲ್ಡೀವ್ಸ್ ಅಭಿಯಾನ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿತ್ತು. ಮಾಲ್ಡೀವ್ಸ್ ಪ್ರವಾಸೋಧ್ಯಮದ ಪ್ರಮುಖ ಗ್ರಾಹಕರಾಗಿದ್ದ ಭಾರತೀಯರ ಪ್ರವಾಸಿಗರ ಸಂಖ್ಯೆ ಶೇ.46ರಷ್ಟು ಕುಸಿತಗೊಂಡು ಮಾಲ್ಡೀವ್ಸ್ ಆದಾಯಕ್ಕೆ ಕೊಡಲಿಪೆಟ್ಟು ಬಿದ್ದಿತು. ಇದರ ಬೆನ್ನಲ್ಲೇ ಅಧ್ಯಕ್ಷ ಮುಯಿಝು ವಿರುದ್ಧ ವ್ಯಾಪಕ ಆಕ್ರೋಶ ವ್ಯಕ್ತವಾಗಿತ್ತು. ಇದೀಗ ಹಳಿ ತಪ್ಪಿರುವ ಮಾಲ್ಡೀವ್ಸ್ ಪ್ರವಾಸೋಧ್ಯಮದವನ್ನು ಮತ್ತೆ ಹಳೆಯ ಟ್ರ್ಯಾಕ್‌ಗೆ ತರಲು ಅಲ್ಲಿನ ಸರ್ಕಾರ ಹೆಣಗಾಡುತ್ತಿದೆ. ಅಲ್ಲದೆ ಭಾರತೀಯ ಮನವೊಲಿಕೆಗೆ ಹರಸಾಹಸ ಪಡುತ್ತಿದೆ.

# ಟ್ರಂಪ್ ಹತ್ಯೆ ಪ್ರಯತ್ನ; ಹೆಂಡತಿ, ಮಕ್ಕಳನ್ನು ಕಾಪಾಡಲು ಗುಂಡಿಗೆ ಎದೆಯೊಡ್ಡಿದ ಅಪ್ಪ

**ವಾಷಿಂಗ್ಟನ್:** ಅಮೆರಿಕಾ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪೆನ್ಸಿಲ್ವೇನಿಯಾ ರ್ಯಾಲಿಯಲ್ಲಿ ಭಾಷಣ ಮಾಡುವಾಗ ಅವರನ್ನು ಕೊಲೆ ಮಾಡಲೆಂದು ಶೂಟರ್ ಒಬ್ಬ ಗುಂಡು ಹಾರಿಸಿದ್ದ. ಆ ಗುಂಡು ಕೊಂಚ ಗುರಿ ತಪ್ಪಿ ಟ್ರಂಪ್ ಕಿವಿಯನ್ನು ಸೀಳಿದ್ದರಿಂದ ಕೂದಲೆಳೆ ಅಂತರದಲ್ಲಿ ಅವರು ಪ್ರಾಣಾಪಾಯದಿಂದ ಪಾರಾಗಿದ್ದರು. ಈ ವೇಳೆ ಅಗ್ನಿಶಾಮಕದಳದ ಸಿಬ್ಬಂದಿಯೊಬ್ಬರಿಗೆ ಗುಂಡು ತಾಗಿ ಅವರು ಮೃತಪಟ್ಟೊದ್ದರು. ಆ ವ್ಯಕ್ತಿ ತನ್ನ ಹೆಂಡತಿ ಮತ್ತು ಹೆಣ್ಣುಮಕ್ಕಳನ್ನು ಗುಂಡಿನಿಂದ ರಕ್ಷಿಸುವಾಗ ಪ್ರಾಣ ಕಳೆದುಕೊಂಡಿದ್ದಾರೆ.

ಪೆನ್ಸಿಲ್ವೇನಿಯಾ ರ್ಯಾಲಿಯಲ್ಲಿ ಡೊನಾಲ್ಡ್ ಟ್ರಂಪ್ ಅವರನ್ನು ಗುರಿಯಾಗಿಸಿಕೊಂಡು ನಡೆದ ಗುಂಡಿನ ದಾಳಿಯಲ್ಲಿ ಸಾವನ್ನಪ್ಪಿದ ಪ್ರೇಕ್ಷಕನನ್ನು 50 ವರ್ಷ ವಯಸ್ಸಿನ ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಎರಡು ಹೆಣ್ಣುಮಕ್ಕಳ ತಂದೆ ಕೋರೆ ಕಾಂಪರೇಟೋರ್ ಎಂದು ಗುರುತಿಸಲಾಗಿದೆ. ಅವರು ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಟ್ರಂಪ್ ಅವರ ಬೆಂಬಲಿಗರಾಗಿದ್ದರು. ತಮ್ಮ ಕುಟುಂಬದೊಂದಿಗೆ ಟ್ರಂಪ್ ಭಾಷಣ ಕೇಳಲು ಬಂದಿದ್ದ ಅವರಿಗೆ ಗುಂಡು ತಾಗಿ ಮೃತಪಟ್ಟಿದ್ದಾರೆ.

ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪರವಾಗಿ ಪೆನ್ಸಿಲ್ವೇನಿಯಾದಲ್ಲಿ ಶನಿವಾರ ನಡೆದ ಪ್ರಚಾರ ರ್‍ಯಾಲಿಯಲ್ಲಿ ಗುಂಡಿನ ದಾಳಿಗೆ ಬಲಿಯಾದವರು 50 ವರ್ಷದ ಕೋರೆ ಕಾಂಪೆರಾಟೋರ್ ಎಂಬ ಅಗ್ನಿಶಾಮಕ ದಳದ ಮಾಜಿ ಮುಖ್ಯಸ್ಥರಾಗಿದ್ದವರು ಎಂದು ಪೆನ್ಸಿಲ್ವೇನಿಯಾದ ಗವರ್ನರ್ ಜೋಶ್ ಶಾಪಿರೊ ಮಾಹಿತಿ ನೀಡಿದ್ದಾರೆ. ಅವರು



ವೀರ ಮರಣ ಹೊಂದಿದ್ದಾರೆ ಎಂದು ತಮ್ಮ ಸಂತಾಪವನ್ನು ಸೂಚಿಸಿದ್ದಾರೆ.

ಟ್ರಂಪ್ ಬೆಂಬಲಿಗರಾದ ಕಾಂಪರೇಟೋರ್ ಅವರು ತಮ್ಮ ಪತ್ನಿ ಮತ್ತು ಇಬ್ಬರು ಪುತ್ರಿಯರೊಂದಿಗೆ ಬಟ್ಲರ್‌ನಲ್ಲಿ ನಡೆದ ರ್ಯಾಲಿಯಲ್ಲಿ ಭಾಗವಹಿಸಿದ್ದರು. ಗುಂಡೇಟು ಸ್ಫೋಟಗೊಂಡಾಗ ಅವರು ತಮ್ಮ ಕುಟುಂಬವನ್ನು ಕಾಪಾಡಲು ಅವರ ಮೇಲೆ ಬಿದ್ದು, ಗಟ್ಟಿಯಾಗಿ ತಬ್ಬಿಕೊಂಡರು. ಈ ವೇಳೆ ಅವರಿಗೆ ಗುಂಡು ತಾಗಿದೆ.

ಇಬ್ಬರು ಹೆಣ್ಣುಮಕ್ಕಳ ತಂದೆಯಾಗಿರುವ ಕೋರೆ ಅಗ್ನಿಶಾಮಕ ಸಿಬ್ಬಂದಿಯಾಗಿದ್ದರು. ಕೋರೆ ಪ್ರತಿ ಭಾನುವಾರ ಚರ್ಚ್‌ಗೆ ಹೋಗುತ್ತಿದ್ದರು. ತಮ್ಮ ಕುಟುಂಬವನ್ನು ಬಹಳ ಪ್ರೀತಿಸುತ್ತಿದ್ದ ಅವರು ತಮ್ಮ ಕುಟುಂಬವನ್ನು ಬಚಾವ್ ಮಾಡಿ ಪ್ರಾಣಬಿಟ್ಟಿದ್ದಾರೆ.

ಪೆನ್ಸಿಲ್ವೇನಿಯಾದ ರ್ಯಾಲಿಯಲ್ಲಿ ಇತರ ಇಬ್ಬರು ವ್ಯಕ್ತಿಗಳು ಸಹ ಗುಂಡು ಹಾರಿಸಲ್ಪಟ್ಟರು ಎಂದು ಗವರ್ನರ್ ಶಾಪಿರೊ ತಿಳಿಸಿದ್ದಾರೆ. ಪೆನ್ಸಿಲ್ವೇನಿಯಾ ರಾಜ್ಯ ಪೊಲೀಸರ ಪ್ರಕಾರ, ಗಾಯಗೊಂಡವರನ್ನು 57 ವರ್ಷದ ಡೇವಿಡ್ ಡಚ್ ಮತ್ತು 74 ವರ್ಷದ ಜೇಮ್ಸ್ ಕೋಪನ್‌ಹೇವರ್ ಎಂದು ಗುರುತಿಸಲಾಗಿದೆ. ಇಬ್ಬರೂ ಚೇತರಿಸಿಕೊಳ್ಳುತ್ತಿದ್ದು, ಅವರ ಸ್ಥಿತಿ ಸ್ಥಿರವಾಗಿದೆ.

# ಬಂಗಲೆ ಕೂಡಲೇ ಖಾಲಿ ಮಾಡಿ, 200 ಮಾಜಿ ಸಂಸದರಿಗೆ ಸರ್ಕಾರ ನೋಟಿಸ್

**ದೆಹಲಿ:** ಲೋಕಸಭೆಯ 200ಕ್ಕೂ ಹೆಚ್ಚು ಮಾಜಿ ಸಂಸದರಿಗೆ ಕೂಡಲೇ ಸರ್ಕಾರಿ ಬಂಗಲೆ ಖಾಲಿ ಮಾಡುವಂತೆ ಕೇಂದ್ರ ಸರ್ಕಾರ ನೋಟಿಸ್ ನೀಡಿದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ಮೂಲಗಳು ಈ ಮಾಹಿತಿ ನೀಡಿವೆ. ಸಾರ್ವಜನಿಕ ಆವರಣ (ಅನಧಿಕೃತ ಒತ್ತುವರಿ ತೆರವು) ಕಾಯ್ದೆಯಡಿ ಎಲ್ಲರಿಗೂ ಈ ನೋಟಿಸ್‌ಗಳನ್ನು ನೀಡಲಾಗಿದೆ.

ನಿಯಮಗಳ ಪ್ರಕಾರ, ಹಿಂದಿನ ಲೋಕಸಭೆ ವಿಸರ್ಜನೆಯಾದ ಒಂದು ತಿಂಗಳೊಳಗೆ ಮಾಜಿ ಸಂಸದರು ತಮ್ಮ ಸರ್ಕಾರಿ ಬಂಗಲೆಗಳನ್ನು ಖಾಲಿ ಮಾಡಬೇಕು. ಇದುವರೆಗೆ 200ಕ್ಕೂ ಹೆಚ್ಚು ಮಾಜಿ ಸಂಸದರಿಗೆ ಬಂಗಲೆ ಒತ್ತುವರಿ ತೆರವು ನೋಟಿಸ್ ಜಾರಿ ಮಾಡಲಾಗಿದ್ದು, ಕೂಡಲೇ ಸರಕಾರಿ ಬಂಗಲೆಗಳನ್ನು ತೆರವು ಮಾಡುವಂತೆ ಸೂಚಿಸಲಾಗಿದೆ.

ಇದೇ ಸಮಯದಲ್ಲಿ ಇನ್ನು ಕೆಲವು ಮಾಜಿ ಸಂಸದರಿಗೆ ನೋಟಿಸ್ ಕಳುಹಿಸುವ ಪ್ರಕ್ರಿಯೆ ನಡೆಯುತ್ತಿದೆ. ಅವರು ತಮ್ಮ ಸರ್ಕಾರಿ ನಿವಾಸಗಳನ್ನು ಶೀಘ್ರದಲ್ಲೇ ಖಾಲಿ ಮಾಡದಿದ್ದರೆ, ಬಲವಂತವಾಗಿ ಹೊರಹಾಕಲು ಅಧಿಕಾರಿಗಳ ತಂಡಗಳನ್ನು ಕಳುಹಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಲೋಕಸಭೆಯ ಸೆಕ್ರೆಟರಿಯೇಟ್ ಚುನಾಯಿತ ಸಂಸದರಿಗೆ ವಸತಿ ಒದಗಿಸುತ್ತದೆ, ಆದರೆ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಕೇಂದ್ರ ಮಂತ್ರಿಗಳಿಗೆ ಲುಟ್ಯೆನ್ಸ್ ದೆಹಲಿಯಲ್ಲಿ ಬಂಗಲೆಗಳನ್ನು ಮಂಜೂರು ಮಾಡುತ್ತದೆ ಎಂಬುದು ಗಮನಾರ್ಹ. ಮಾಜಿ ಸಚಿವರು ಮತ್ತು ಮಾಜಿ



ಸಂಸದರು ತಮ್ಮ ಸರ್ಕಾರಿ ಬಂಗಲೆಗಳನ್ನು ನಿಗದಿತ ಸಮಯದೊಳಗೆ ಖಾಲಿ ಮಾಡದಿದ್ದರೆ, ಅವರ ವಿರುದ್ಧ ತೆರವು ಪ್ರಕ್ರಿಯೆಗಳನ್ನು ಪ್ರಾರಂಭಿಸಲಾಗುತ್ತದೆ. ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಖಟ್ಟರ್ ಅವರಿಗೆ 83 ಲೋಧಿ ಎಸ್ಟೇಟ್‌ನಲ್ಲಿ ಬಂಗಲೆ ಮಂಜೂರು ಮಾಡಲಾಗಿದೆ. ಇದುವರೆಗೆ ಯಾವುದೇ ಮಾಜಿ ಕೇಂದ್ರ ಸಚಿವರಿಗೆ ನಿಗದಿತ ಸಮಯವನ್ನು ಮೀರಿದ್ದಕ್ಕಾಗಿ ಉಚ್ಚಾಟನೆ ನೋಟಿಸ್ ನೀಡಲಾಗಿಲ್ಲ. ಸ್ಮೃತಿ ಇರಾನಿ ಸೇರಿದಂತೆ 4 ಕ್ಕೂ ಹೆಚ್ಚು ಮಾಜಿ ಕೇಂದ್ರ ಸಚಿವರು ಇದುವರೆಗೆ ಲುಟ್ಯೆನ್ಸ್ ದೆಹಲಿಯಲ್ಲಿರುವ ತಮ್ಮ ಸರ್ಕಾರಿ ಬಂಗಲೆಗಳನ್ನು ಖಾಲಿ ಮಾಡಿದ್ದಾರೆ. ಈ ತಿಂಗಳ ಆರಂಭದಲ್ಲಿ ಮಾಜಿ ಸಚಿವೆ ಸ್ಮೃತಿ ಅವರು ಲುಟ್ಯೆನ್ಸ್‌ನ ದೆಹಲಿಯ 28 ತುಘಲಕ್ ಕ್ರೆಸೆಂಟ್‌ನಲ್ಲಿರುವ ತಮ್ಮ ಸರ್ಕಾರಿ ಬಂಗಲೆಯನ್ನು ಖಾಲಿ ಮಾಡಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಡಿಸೆಂಬರ್‌ನಲ್ಲೂ ರಿಲೀಸ್ ಆಗಲ್ಲ 'ಪುಷ್ಪ 2'



ಅಲ್ಲು ಅರ್ಜುನ್ ನಟನೆಯ 'ಪುಷ್ಪ' ಸಿನಿಮಾ ರಿಲೀಸ್ ಆಗಿದ್ದು 2021ರ ಡಿಸೆಂಬರ್ ತಿಂಗಳಲ್ಲಿ. ಈ ವರ್ಷಾಂತ್ಯಕ್ಕೆ ಸಿನಿಮಾ ರಿಲೀಸ್ ಆಗಿ ಮೂರು ವರ್ಷ ಕಳೆಯಲಿದೆ. ಅಲ್ಲಿಂದ ಇಲ್ಲಿಯವರೆಗೂ ಸಿನಿಮಾದ ಶೂಟಿಂಗ್ ಮಾಡುತ್ತಲೇ ಬರಲಾಗುತ್ತಿದೆ. ಈ ಚಿತ್ರದ ಕಾರಣಕ್ಕೆ ಅಲ್ಲು ಅರ್ಜುನ್ ಅವರು ಬೇರೆ ಯಾವುದೇ ಸಿನಿಮಾಗಳನ್ನೂ ಮಾಡುತ್ತಿಲ್ಲ. ಈ ಚಿತ್ರದ ರಿಲೀಸ್ ದಿನಾಂಕ ಪದೇ ಪದೇ ವಿಳಂಬ ಆಗುತ್ತಿದೆ. ಎಲ್ಲವೂ ಅಂದುಕೊಂಡಂತೆ ನಡೆದಿದ್ದರೆ ಆಗಸ್ಟ್ 15ರಂದು ಸಿನಿಮಾ ರಿಲೀಸ್ ಆಗಬೇಕಿತ್ತು. ಆದರೆ, ಚಿತ್ರದ ಬಿಡುಗಡೆ ದಿನಾಂಕ ಡಿಸೆಂಬರ್ ಗೆ ಹೋಗಿದೆ. ಈಗ ಕೆಲವು ವರದಿಗಳು ಸಿನಿಮಾದ ರಿಲೀಸ್ ಡೇಟ್ ಮುಂದಿನ ವರ್ಷಕ್ಕೆ ಹೋಗಲಿದೆಯೇ ಎನ್ನುವ ಪ್ರಶ್ನೆ ಮೂಡುವಂತೆ ಮಾಡಿದೆ.

'ಪುಷ್ಪ 2' ಸಿನಿಮಾ ಟಾಲಿವುಡ್‌ನ ಸಾಕಷ್ಟು ನಿರೀಕ್ಷಿತ ಸಿನಿಮಾ. ಅಲ್ಲು ಅರ್ಜುನ್ ಅವರು ಈ ಚಿತ್ರದಲ್ಲಿ ಪ್ರಮುಖ ಪಾತ್ರ ಮಾಡಿದ್ದಾರೆ. ಈ ಚಿತ್ರದ ರಿಲೀಸ್ ದಿನಾಂಕ ಮತ್ತೆ ಮುಂದಕ್ಕೆ ಹೋಗಬಹುದು ಎನ್ನಲಾಗುತ್ತಿದೆ. ಅಲ್ಲು ಅರ್ಜುನ್ ಅವರು ಸಿನಿಮಾದ ಶೂಟಿಂಗ್ ಬಗ್ಗೆ ಅಸಮಾಧಾನ ತೋಡಿಕೊಂಡಿದ್ದಾರಂತೆ. ಸರಿಯಾದ ರೀತಿಯಲ್ಲಿ ಶೂಟಿಂಗ್‌ನ ಶೆಡ್ಯೂಲ್ ಮಾಡದೆ ಇರುವುದು ಇದಕ್ಕೆ ಕಾರಣ. ಈ ಕಾರಣದಿಂದಲೇ ಅವರು ಗಡ್ಡವನ್ನು ಟ್ರಿಮ್ ಮಾಡಿದ್ದಾರೆ. ಅವರು ಈಗ ಕುಟುಂಬದ ಜೊತೆ ಯುರೋಪ್ ಟ್ರಿಪ್ ತೆರಳಿದ್ದಾರೆ. ನಿರ್ದೇಶಕ ಸುಕುಮಾರ್ ಅವರು ಅಮೆರಿಕ ತೆರಳಿದ್ದಾರೆ. ಇದರಿಂದ ಶೂಟಿಂಗ್ ವಿಳಂಬ ಆಗುತ್ತಿದೆ.

'ಪುಷ್ಪ 2' ತಂಡದ ಕಡೆಯಿಂದ ಸಾಂಗ್ ಹಾಗೂ ಟೀಸರ್ ರಿಲೀಸ್ ಆಗಿದೆ. ಎರಡನೇ ಭಾಗ ಯಾವ ರೀತಿಯಲ್ಲಿ ಮೂಡಿ ಬರಲಿದೆ ಎನ್ನುವ ಕುತೂಹಲ ಅಭಿಮಾನಿಗಳಲ್ಲಿ ಇದೆ. ಒಂದೊಮ್ಮೆ ಸಿನಿಮಾದ ರೀಶೂಟ್ ಏನಾದರೂ ಮಾಡಲಾಗುತ್ತಿದೆಯೇ ಎನ್ನುವ ಪ್ರಶ್ನೆಯೂ ಅಭಿಮಾನಿಗಳಿಗೆ ಮೂಡಿದೆ.

'ಪುಷ್ಪ 2' ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ಹಾಗೂ ಅಲ್ಲು ಅರ್ಜುನ್ ಪ್ರಮುಖ ಪಾತ್ರ ಮಾಡಿದ್ದಾರೆ. ಫಹಾದ್ ಫಾಸಿಲ್ ಅವರು ವಿಲನ್ ಪಾತ್ರ ಮಾಡುತ್ತಿದ್ದಾರೆ. ಅನಸೂಯಾ ಭಾರದ್ವಾಜ್, ಸುನಿಲ್, ರಾವ್ ರಮೇಶ್, ಡಾಲಿ ಧನಂಜಯ್ ಕಾಣಿಸಿಕೊಳ್ಳಲಿದ್ದಾರೆ.

## ಸಿನಿಮಾ ಸೋತಾಗ ಅಕ್ಷಯ್ ಕುಮಾರ್ ಹೇಗಿರುತ್ತಾರೆ?

### ನಿರ್ದೇಶಕಿ ಕೊಟ್ಟರು ಉತ್ತರ



ಸುಧಾ ಕೊಂಗರ ನಿರ್ದೇಶನದ 'ಸೂರರೈ ಪೋಟ್ರು,' ಸಿನಿಮಾ ಭರ್ಜರಿ ಮೆಚ್ಚುಗೆ ಪಡೆದಿತ್ತು. ಈ ಚಿತ್ರ ರಾಷ್ಟ್ರಪ್ರಶಸ್ತಿ ಬಾಚಿಕೊಂಡಿತ್ತು. ಕೊವಿಡ್ ಸದ್ದು ಮಾಡುತ್ತಿರುವ ಸಂದರ್ಭದಲ್ಲೇ ಈ ಸಿನಿಮಾ ರಿಲೀಸ್ ಆದರೂ ಜನರು ಈ ಚಿತ್ರವನ್ನು ಥಿಯೇಟರ್ ನಲ್ಲಿ ನೋಡಿ ಮೆಚ್ಚಿಕೊಂಡಿದ್ದರು. ಈ ಚಿತ್ರವನ್ನು 'ಸರ್ಫಿರಾ' ಹೆಸರಲ್ಲಿ ಹಿಂದಿಗೆ ರಿಮೇಕ್ ಮಾಡಲಾಗಿದ್ದು ಅಕ್ಷಯ್ ಕುಮಾರ್ ನಟಿಸಿದ್ದರು. ಆದರೆ, ಈ ಸಿನಿಮಾ ಯಶಸ್ಸು ಕಾಣುತ್ತಿಲ್ಲ. ಈ ಬಗ್ಗೆ ಅಕ್ಷಯ್ ಕುಮಾರ್ ಅವರು ಅಪ್ಸೆಟ್ ಆಗುತ್ತಾರಂತೆ. ಈ ಬಗ್ಗೆ ನಿರ್ದೇಶಕಿ ಸುಧಾ ಕೊಂಗರ ಅವರು ಮಾತನಾಡಿದ್ದಾರೆ.



'ಸಿನಿಮಾ ಶೂಟಿಂಗ್ ಆರಂಭದ ಆರೇಳು ದಿನ ನಾನು ಅವರನ್ನು ಅರ್ಥ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ನಮ್ಮ ಮಧ್ಯೆ ಘರ್ಷಣೆ ಇತ್ತು. ಆದರೆ, ಅವರು ಸಿಟ್ಟಾಗುತ್ತಿದ್ದಾಗಲಿ ಅಥವಾ ಕೂಗಾಡುತ್ತಿದ್ದುದಾಗಲಿ ಮಾಡುತ್ತಾ ಇರಲಿಲ್ಲ. ನಾನು ಆ ಬಗ್ಗೆ ಆಲೋಚಿಸುತ್ತಲೂ ಇರಲಿಲ್ಲ. ನನಗೆ ಏನು ಬೇಕೋ ಅದನ್ನೇ ಶೂಟ್ ಮಾಡುತ್ತಿದ್ದೆ. ಆದರೆ, ಅವರು ಕುಗ್ಗಿದ್ದಾಗ ನೋಡೋಕೆ ಆಗಲ್ಲ' ಎಂದಿದ್ದಾರೆ ಅವರು.

'ನಾವು ಅಂದು ಉಡುಪಿ ದೃಶ್ಯವನ್ನು ಶೂಟ್ ಮಾಡಬೇಕಿತ್ತು. ಅದಕ್ಕೂ ಹಿಂದಿನ ದಿನ ಅವರ ಸಿನಿಮಾ ರಿಲೀಸ್ ಆಗಿ ಮಿಶ್ರಪ್ರತಿಕ್ರಿಯೆ ಪಡೆದಿತ್ತು. ಈ ಕಾರಣಕ್ಕೆ ಅವರು ಸೆಟ್ ನಲ್ಲಿ ನಿರುತ್ಸಾಹಿ ಆಗಿ ಕುಳಿತಿದ್ದರು. ಆ ಉಡುಪಿ ದೃಶ್ಯ ನನ್ನ ಫೇವರಿಟ್ ಆಗಿತ್ತು. ಅದನ್ನು ಹೇಗೆ ಶೂಟ್ ಮಾಡುತ್ತೇವೇನೋ ಎನ್ನುವ ಭಯ ನನ್ನನ್ನು ಕಾಡುತ್ತಿತ್ತು. ಆದರೂ ದೃಶ್ಯ ಪರ್ಫೆಕ್ಟ್ ಆಗಿ ಬಂದಿತ್ತು' ಎಂದಿದ್ದಾರೆ ಸುಧಾ.

'ಆ ದೃಶ್ಯ ಸರಿಯಾಗಿ ಬಂದಿದೆ ಎಂದು ನಾನು ಹೇಳಿದೆ. ಆದಾಗ್ಯೂ ರೀಟೇಕ್ ತೆಗೆದುಕೊಳ್ಳೋಕೆ ಅವರು ಹೇಳಿದರು. ನನಗೋಸ್ಕರ ಮತ್ತೊಂದು ಟೇಕ್ ಎಂದರು. ಇದು ಹಿಂದೆಂದೂ ಆಗಿರಲಿಲ್ಲ. ಅವರು ಪ್ರತಿ ಚಿತ್ರಕ್ಕೂ ಸಂಪೂರ್ಣ ಪರಿಶ್ರಮ ಹಾಕುತ್ತಾರೆ' ಎಂದಿದ್ದಾರೆ ಸುಧಾ.



## 50ನೇ ಸಿನಿಮಾದಲ್ಲಿ ಕ್ರೂರಿಯಾದ ಧನುಷ್




### 'ರಾಯನ್' ಟ್ರೇಲರ್ ನಲ್ಲಿ ರಕ್ತಪಾತ

ನಟ ಧನುಷ್ ಅವರ 50ನೇ ಸಿನಿಮಾ 'ರಾಯನ್ ' ಮೇಲೆ ಎಲ್ಲರಿಗೂ ನಿರೀಕ್ಷೆ ಇದೆ. ಆ ನಿರೀಕ್ಷೆಯನ್ನು ಡಬಲ್ ಮಾಡುವ ರೀತಿಯಲ್ಲಿ ಈಗ ಟ್ರೇಲರ್ ಬಿಡುಗಡೆ ಆಗಿದೆ. ಸ್ವತಃ ಧನುಷ್ ಅವರೇ ಈ ಚಿತ್ರಕ್ಕೆ ನಿರ್ದೇಶನ ಕೂಡ ಮಾಡಿರುವುದರಿಂದ ಕುತೂಹಲ ಜಾಸ್ತಿ ಇದೆ. ಟ್ರೇಲರ್ ನಲ್ಲಿ ಧನುಷ್ ಅಬ್ಬರಿಸಿದ್ದಾರೆ. ಈ ಚಿತ್ರದಿಂದ ಅವರಿಗೆ ಭರ್ಜರಿ ಗೆಲುವು ಸಿಗುವ ನಿರೀಕ್ಷೆ ದಟ್ಟವಾಗಿದೆ. ಶೀಘ್ರದಲ್ಲೇ ಈ ಸಿನಿಮಾ ಬಿಡುಗಡೆ ಆಗಿದೆ. 'ರಾಯನ್ ' ಸಿನಿಮಾದಲ್ಲಿ ಧನುಷ್ ಅವರಿಗೆ ಸಂಪೂರ್ಣ ಮಾಸ್ ಅವತಾರ ಇರಲಿದೆ ಎಂಬುದಕ್ಕೆ ಟ್ರೇಲರ್ ನಲ್ಲಿ ಸುಳಿವು ಸಿಕ್ಕಿದೆ.

50ನೇ ಸಿನಿಮಾ ಆದ್ದರಿಂದ ಧನುಷ್ ಅವರು ತುಂಬ ಕಾಳಜಿ ವಹಿಸಿ 'ರಾಯನ್' ಚಿತ್ರದಲ್ಲಿ ನಟಿಸಿ, ನಿರ್ದೇಶಿಸಿದ್ದಾರೆ. ಈ ಸಿನಿಮಾದಲ್ಲಿ ದೊಡ್ಡ ಪಾತ್ರವರ್ಗ ಇದೆ. ಎಸ್.ಜೆ. ಸೂರ್ಯ, ಪ್ರಕಾಶ್ ರಾಜ್ , ಸೆಲ್ವರಾಘವನ್ , ಸಂದೀಪ್ ಕಿಶನ್ , ಕಾಳಿದಾಸ್ ಜಯರಾಮ್ ಮುಂತಾದವರು ಈ ಚಿತ್ರದಲ್ಲಿ ನಟಿಸಿದ್ದಾರೆ. ಮುಖ್ಯ ಪಾತ್ರಗಳ ಝಲಕ್ ಅನ್ನು 'ರಾಯನ್ ' ಟ್ರೇಲರ್ ನಲ್ಲಿ ತೋರಿಸಲಾಗಿದೆ.

ಮುಗ್ಧ ಬಾಲಕನೊಬ್ಬ ಕ್ರೂರಿಯಾಗಿ ಬದಲಾಗುವ ಕಹಾನಿ 'ರಾಯನ್ ' ಸಿನಿಮಾದಲ್ಲಿ ಇದೆ ಎಂಬ ಸುಳಿವು ನೀಡಲಾಗಿದೆ. ಬಾಲಕನಲ್ಲಿನ ಆ ಬದಲಾವಣೆಗೆ ಕಾರಣ ಏನು ಎಂಬುದನ್ನು ಸಿನಿಮಾ ನೋಡಿಯೇ ತಿಳಿಯಬೇಕು. ಜುಲೈ 26ರಂದು 'ರಾಯನ್ ' ಬಿಡುಗಡೆ ಆಗಲಿದೆ. ಟ್ರೇಲರ್ ನಲ್ಲಿ ಸಿನಿಮಾದ ಗುಣಮಟ್ಟ ಕಾಣಿಸಿದೆ. ಪ್ರೇಕ್ಷಕರು ಈ ಸಿನಿಮಾ ನೋಡಲು ಕಾದಿದ್ದಾರೆ.

'ಸನ್ ಪಿಕ್ಚರ್ಸ್ ' ಮೂಲಕ 'ರಾಯನ್ ' ಸಿನಿಮಾ ನಿರ್ಮಾಣ ಆಗಿದೆ. ತಮಿಳು, ತೆಲುಗು, ಹಿಂದಿ ವರ್ಷನ್ ನಲ್ಲಿ ಟ್ರೇಲರ್ ಬಿಡುಗಡೆ ಮಾಡಲಾಗಿದೆ. ಓಂ ಪ್ರಕಾಶ್ ಛಾಯಾಗ್ರಹಣ, ಎ.ಆರ್ . ರೆಹಮಾನ್ ಅವರ ಸಂಗೀತ ನಿರ್ದೇಶನ ಈ ಸಿನಿಮಾಗೆ ಇದೆ. 2024ರ ಆರಂಭದಲ್ಲಿ ಧನುಷ್ ನಟನೆಯ 'ಕ್ಯಾಪ್ಟನ್ ಮಿಲ್ಲರ್ ' ಸಿನಿಮಾ ಬಿಡುಗಡೆಯಾಗಿ ಸೋಲು ಕಂಡಿತ್ತು. ಈಗ ಅವರು 'ರಾಯನ್ ' ಸಿನಿಮಾ ಮೂಲಕ ಗೆಲ್ಲುವ ಸೂಚನೆ ಕಾಣಿಸಿದೆ. ಟ್ರೇಲರ್ ನೋಡಿದ ಅಭಿಮಾನಿಗಳು ಪಾಸಿಟಿವ್ ಕಮೆಂಟ್ ಮಾಡುತ್ತಿದ್ದಾರೆ.

# ಟೀಮ್ ಇಂಡಿಯಾ ಟೆಸ್ಟ್ ತಂಡದ ಆಟಗಾರರು ದೇಶೀಯ ಟೂರ್ನಿ ಆಡಲೇಬೇಕು..!



ಟೀಮ್ ಇಂಡಿಯಾದ ಟೆಸ್ಟ್ ಸ್ಪೆಷಲಿಸ್ಟ್‌ಗಳು ದೇಶೀಯ ಟೂರ್ನಿಯಲ್ಲಿ ಭಾಗವಹಿಸಬೇಕೆಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಕಟ್ಟಪ್ಪಣೆ ಹೊರಡಿಸುವ ಸಾಧ್ಯತೆಯಿದೆ. ಏಕೆಂದರೆ ಟೆಸ್ಟ್ ತಂಡದಲ್ಲಿರುವ ಆಟಗಾರರು ರಾಷ್ಟ್ರೀಯ ತಂಡದಿಂದ ಹೊರಗುಳಿದಾಗ ಯಾವುದೇ ಟೂರ್ನಿಯಲ್ಲಿ ಕಾಣಿಸಿಕೊಳ್ಳುವುದಿಲ್ಲ. ಆದರೆ ಇನ್ಮುಂದೆ ದೇಶೀಯ ಟೆಸ್ಟ್ ಪಂದ್ಯಾವಳಿಗಳಲ್ಲಿ ಭಾಗವಹಿಸುವುದು ಕಡ್ಡಾಯ ಮಾಡಲು ಬಿಸಿಸಿಐ ಮುಂದಾಗಿದೆ.

ಇದಾಗ್ಯೂ ಟೀಮ್ ಇಂಡಿಯಾದ ಸ್ಟಾರ್ ಆಟಗಾರರಾದ ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ ಮತ್ತು ಜಸ್‌ಪ್ರೀತ್ ಬುಮ್ರಾಗೆ ಈ ನಿಯಮದಿಂದ ವಿನಾಯಿತಿ ನೀಡಲಾಗುತ್ತದೆ. ಅಂದರೆ ಈ ಮೂವರು ಆಟಗಾರರು ರಾಷ್ಟ್ರೀಯ ತಂಡದಿಂದ ಹೊರಗುಳಿದರೂ, ದೇಶೀಯ ಟೂರ್ನಿಗಳಲ್ಲಿ ಕಾಣಿಸಿಕೊಳ್ಳುವುದು ಮತ್ತು ಬಿಡುವುದು ಅವರ ಆಯ್ಕೆ ಎಂದು ಬಿಸಿಸಿಐ ಮೂಲಗಳು ತಿಳಿಸಿವೆ.

ಇನ್ನುಳಿದ ಟೆಸ್ಟ್ ಆಟಗಾರರು ಫಸ್ಟ್ ಕ್ಲಾಸ್ ಟೂರ್ನಿಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ ಮಾಡಲಾಗುತ್ತಿದೆ. ಇದರಿಂದ ಫಾರ್ಮ್‌ನಲ್ಲಿರುವ ಆಟಗಾರರನ್ನು ಟೆಸ್ಟ್ ತಂಡಕ್ಕೆ ಆಯ್ಕೆ ಮಾಡಲು ಸಹಕಾರಿಯಾಗಲಿದೆ ಎಂಬುದು ಬಿಸಿಸಿಐ ಆಯ್ಕೆ ಸಮಿತಿಯ ಅಭಿಪ್ರಾಯ.

ಅದರಂತೆ ಬಾಂಗ್ಲಾದೇಶ್ ಮತ್ತು ಮತ್ತು ನ್ಯೂಝಿಲೆಂಡ್ ವಿರುದ್ಧದ ಟೆಸ್ಟ್ ಸರಣಿಗಳಿಗೂ ಮುನ್ನ ಭಾರತೀಯ ಟೆಸ್ಟ್ ತಂಡದ ಆಟಗಾರರು ಕನಿಷ್ಠ ಒಂದು ದುಲೀಪ್ ಟ್ರೋಫಿ ಪಂದ್ಯದಲ್ಲಿ ಭಾಗವಹಿಸಬೇಕು ಎಂದು ಸೂಚಿಸಲಾಗಿದೆ.

ಮುಂಬರುವ ದುಲೀಪ್ ಟ್ರೋಫಿಯ ತಂಡಗಳಲ್ಲಿ ಟೀಮ್ ಇಂಡಿಯಾದ ಟೆಸ್ಟ್ ಆಟಗಾರರನ್ನು ಸೇರಿಸಿಕೊಳ್ಳಲಾಗುತ್ತದೆ. ಅಲ್ಲಿ ನೀಡಿದ ಪ್ರದರ್ಶನದ ಆಧಾರದ ಮೇಲೆ ಮತ್ತೆ ಆಯ್ಕೆಗೆ ಪರಿಗಣಿಸಲಾಗುತ್ತದೆ ಎಂದು ತಿಳಿದು ಬಂದಿದೆ.

ಇಂಗ್ಲೆಂಡ್ ವಿರುದ್ಧದ ಐದು ಪಂದ್ಯಗಳ ಟೆಸ್ಟ್ ಸರಣಿಯ ಸಂದರ್ಭದಲ್ಲಿ, ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರು ಕೇಂದ್ರೀಯ ಒಪ್ಪಂದ ಹೊಂದಿರುವ ಆಟಗಾರರು ದೇಶೀಯ ಸರ್ಕ್ಯೂಟ್ ನಲ್ಲಿ ಭಾಗವಹಿಸಬೇಕು ಎಂದು ಕಠಿಣ ಸಂದೇಶ ರವಾನಿಸಿದ್ದರು. ಇದರ ಮೊದಲ ಹೆಜ್ಜೆಯಾಗಿ ಇದೀಗ ಭಾರತ ಟೆಸ್ಟ್ ತಂಡದ ಆಟಗಾರರು ದುಲೀಪ್ ಟ್ರೋಫಿಯಲ್ಲಿ ಭಾಗವಹಿಸಬೇಕೆಂದು ಸೂಚಿಸಲಾಗಿದೆ.

## ಸೂರ್ಯನಿಗೆ ಪಟ್ಟ ಕಟ್ಟಲು ಗೌತಮ್ ಗಂಭೀರ್ ಪ್ಲ್ಯಾನ್..!




ಭಾರತ ಟಿ20 ತಂಡದ ಮುಂದಿನ ನಾಯಕ ಯಾರು? ಈ ಪ್ರಶ್ನೆಗೆ ಸದ್ಯ ಕೇಳಿ ಬರುತ್ತಿರುವ ಉತ್ತರ ಸೂರ್ಯಕುಮಾರ್ ಯಾದವ್. ಜುಲೈ 16ರ ತನಕ ಹಾರ್ದಿಕ್ ಪಾಂಡ್ಯ ಹೆಸರು ನಾಯಕತ್ವದ ರೇಸ್‌ನಲ್ಲಿ ಮುಂಚೂಣಿಯಲ್ಲಿತ್ತು. ಆದರೀಗ ಶ್ರೀಲಂಕಾ ವಿರುದ್ಧದ ಟಿ20 ಸರಣಿಗೆ ಸೂರ್ಯಕುಮಾರ್ ಯಾದವ್ ಅವರನ್ನು ನಾಯಕನಾಗಿ ಆಯ್ಕೆ ಮಾಡುವಂತೆ ಟೀಮ್ ಇಂಡಿಯಾ ಕೋಚ್ ಗೌತಮ್ ಗಂಭೀರ್ ಹೇಳಿದ್ದಾರೆ ಎಂದು ವರದಿಯಾಗಿದೆ.

ಟಿ20 ತಂಡದ ನಾಯಕನಾಗಿ ಹಾರ್ದಿಕ್ ಪಾಂಡ್ಯ ಬದಲಿಗೆ ಸೂರ್ಯಕುಮಾರ್ ಯಾದವ್ ಉತ್ತಮ ಆಯ್ಕೆ. ಅವರನ್ನೇ ಟಿ20 ತಂಡದ ಕ್ಯಾಪ್ಟನ್ ಆಯ್ಕೆ ಮಾಡುವಂತೆ ಗಂಭೀರ್ ಆಯ್ಕೆ ಸಮಿತಿಗೆ ಸೂಚಿಸಿದ್ದಾರೆ ಎಂದು ವರದಿಯಾಗಿದೆ. ಇದಕ್ಕೆ ಮುಖ್ಯ ಕಾರಣ ಪಾಂಡ್ಯ ಅವರ ಫಿಟ್‌ನೆಸ್ ಸಮಸ್ಯೆ.

ಹಾರ್ದಿಕ್ ಪಾಂಡ್ಯ ಸಂಪೂರ್ಣ ಫಿಟ್‌ನೆಸ್ ನೊಂದಿಗೆ ಕಾಣಿಸಿಕೊಳ್ಳುವುದು ತುಂಬಾ ವಿರಳ. ಇದಕ್ಕೆ ಸಾಕ್ಷಿ 2023ರ ಏಕದಿನ ವಿಶ್ವಕಪ್. ಕಳೆದ ಏಕದಿನ ವಿಶ್ವಕಪ್ ಅನ್ನು ಫಿಟ್‌ನೆಸ್ ಸಮಸ್ಯೆಯ ಕಾರಣ ಪಾಂಡ್ಯ ಅರ್ಧದಲ್ಲೇ ತೊರೆದಿದ್ದರು. ಇದಾದ ಬಳಿಕ ಟೀಮ್ ಇಂಡಿಯಾ ಪರ ಕಣಕ್ಕಿಳಿದದ್ದು, ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ ಎಂಬುದು ವಿಶೇಷ.

ಹೀಗಾಗಿಯೇ ಸಂಪೂರ್ಣ ಫಿಟ್‌ನೆಸ್ ನೊಂದಿಗೆ ತಂಡದ ಖಾಯಂ ಸದಸ್ಯರಾಗಿರುವ ಆಟಗಾರನಿಗೆ ನಾಯಕತ್ವ ನೀಡುವಂತೆ ಗೌತಮ್ ಗಂಭೀರ್ ಆಯ್ಕೆ ಸಮಿತಿಗೆ ಮನವಿ ಮಾಡಿದ್ದಾರೆ. ಈ ಮನವಿಯಂತೆ ಇದೀಗ ಸೂರ್ಯಕುಮಾರ್ ಯಾದವ್ ಹೆಸರು ಮುಂಚೂಣಿಗೆ ಬಂದಿದ್ದು, ಹೀಗಾಗಿ ಅವರಿಗೆ ಕ್ಯಾಪ್ಟನ್ ಪಟ್ಟ ನೀಡುವ ಸಾಧ್ಯತೆಯಿದೆ ಎಂದು ವರದಿಗಳಾಗಿವೆ.

ಸೂರ್ಯಕುಮಾರ್ ಯಾದವ್ ಈಗಾಗಲೇ ಭಾರತ ಟಿ20 ತಂಡದ ನಾಯಕರಾಗಿ ಕಾಣಿಸಿಕೊಂಡಿದ್ದಾರೆ. ಪ್ರಮುಖ ಆಟಗಾರರ ಅನುಪಸ್ಥಿತಿ ನಡುವೆ ಸೂರ್ಯ 7 ಟಿ20 ಪಂದ್ಯಗಳಲ್ಲಿ ಭಾರತ ತಂಡವನ್ನು ಮುನ್ನಡೆಸಿದ್ದಾರೆ. ಈ ವೇಳೆ ಟೀಮ್ ಇಂಡಿಯಾ 5 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದೆ. ಹೀಗಾಗಿ ಟೀಮ್ ಇಂಡಿಯಾ ಟಿ20 ತಂಡದ ಕ್ಯಾಪ್ಟನ್ಸಿ ಪಟ್ಟ ಸೂರ್ಯಕುಮಾರ್ ಯಾದವ್‌ಗೆ ಒಲಿದರೂ ಅಚ್ಚರಿಪಡಬೇಕಿಲ್ಲ.

### ನಿಖಿಲ್ ಸ್ಪರ್ಧೆಗೆ ಜೆಡಿಎಸ್ ಡಿಮ್ಯಾಂಡ್

# ಕಾಂಗ್ರೆಸ್ ಮತಗಳಿಕೆ ಹೆಚ್ಚಳ



**ಚನ್ನಪಟ್ಟಣ:** ಚನ್ನಪಟ್ಟಣ ವಿಧಾನಸಭೆ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ಕಣಕ್ಕಿಳಿಸಬೇಕು ಎಂದು ಜೆಡಿಎಸ್ ತಾಲೂಕು ಅಧ್ಯಕ್ಷ ಎಚ್.ಸಿ.ಜಯಮುತ್ತು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಜೆಡಿಎಸ್ ಗೆದ್ದ ಏಕೈಕ ಕ್ಷೇತ್ರ ಇದಾಗಿದ್ದು, ಜೆಡಿಎಸ್ ತೆಕ್ಕೆಯಲ್ಲಿಯೇ ಉಳಿಸಿಕೊಳ್ಳುವ ನಿಟ್ಟಿನಲ್ಲಿ ನಿಖಿಲ್ ಅವರನ್ನೇ ಸ್ಪರ್ಧೆಗಿಳಿಸಬೇಕು ಎಂದು ಆಗ್ರಹಿಸಿದರು.

**ಗೊಂದಲದ ಗೂಡು:** ಉಪಚುನಾವಣೆಯ ಅಭ್ಯರ್ಥಿ ಯಾವ ಪಕ್ಷದಿಂದ ಯಾರೆಂಬ ವಿಚಾರ ಇನ್ನು ನಿರ್ಧಾರವಾಗದ ಕಾರಣ ಎಲ್ಲರಲ್ಲೂ ಗೊಂದಲವಿದೆ. ಕಾರ್ಯಕರ್ತರಲ್ಲಿ ಗೊಂದಲ ಪರಿಹರಿಸುವ ನಿಟ್ಟಿನಲ್ಲಿ ನಿಖಿಲ್ ಅವರ ಹೆಸರನ್ನು ವರಿಷ್ಠರು ಆದಷ್ಟು ಬೇಗ ಘೋಷಿಸಬೇಕು ಎಂದು ಒತ್ತಾಯಿಸಿದರು.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಜೆಡಿಎಸ್ ಪ್ರಬಲವಾಗಿದ್ದರೂ ಲೋಕಸಭಾ ಚುನಾವಣೆಯಲ್ಲಿ ಕ್ಷೇತ್ರವನ್ನು ಬಿಜೆಪಿಗೆ ಬಿಟ್ಟುಕೊಟ್ಟು, ಡಾ.ಮಂಜುನಾಥ್ ಅವರನ್ನು ಬಿಜೆಪಿಯಿಂದ ಕಣಕ್ಕೆ ಇಳಿಸಲಾಗಿತ್ತು. ಇದೀಗ ರಾಜ್ಯದ ಮೂರು ಕ್ಷೇತ್ರಗಳಲ್ಲಿ ಉಪಚುನಾವಣೆ ನಡೆಯಲಿದ್ದು, ಜೆಡಿಎಸ್ ಪ್ರಬವಾಗಿರುವ ಚನ್ನಪಟ್ಟಣವನ್ನು ನಮ್ಮ ಪಕ್ಷಕ್ಕೆ ಬಿಟ್ಟುಕೊಡಬೇಕು. ಆ ನಿಟ್ಟಿನಲ್ಲಿ ಎನ್‌ಡಿಎ ವರಿಷ್ಠರು ಕುಳಿತು ಚರ್ಚಿಸಿ ಶೀಘ್ರದಲ್ಲೇ ನಿರ್ಧಾರ ಪ್ರಕಟಿಸಬೇಕು ಎಂದು ಮನವಿ ಮಾಡಿದರು.

**ನಿಖಿಲ್ ಕಣಕ್ಕಿಳಿಸಿ:** ಕುಮಾರಸ್ವಾಮಿ ಕೇಂದ್ರ ಸಚಿವರಾಗಿದ್ದು, ರಾಜ್ಯದಲ್ಲಿ ಪಕ್ಷ ಸಂಘಟನೆಯ ಜವಾಬ್ದಾರಿ ನಿಖಿಲ್ ಕುಮಾರಸ್ವಾಮಿ ಅವರ ಮೇಲಿದೆ. ಕ್ಷೇತ್ರದಿಂದ ನಿಖಿಲ್ ಅವರನ್ನು ಕಣಕ್ಕಿಳಿಸಿದಲ್ಲಿ ಪಕ್ಷ ಸಂಘಟನೆಗೆ ಅನುಕೂಲವಾಗುತ್ತದೆ. ಎಲ್ಲಕ್ಕಿಂತ ಮುಖ್ಯವಾಗಿ ಜಿಲ್ಲೆಯಲ್ಲಿ ಜೆಡಿಎಸ್ ಅಸ್ತಿತ್ವ ಉಳಿಸಿಕೊಳ್ಳಬೇಕು ಎಂದರು.

**ಸಿಪಿವೈ ಮುಂದಾಳತ್ವ ವಹಿಸಲಿ:** ವಿಧಾನ ಪರಿಷತ್ ಸದಸ್ಯರಾಗಿರುವ ಸಿ.ಪಿ.ಯೋಗೇಶ್ವರ್ ಅಧಿಕಾರಾವಧಿ ಇನ್ನು ಮೂರುವರೆ ವರ್ಷವಿದೆ. ಈಗಾಗಲೇ ಅವರು ಸಾಕಷ್ಟು ಬಾರಿ ಶಾಸಕರಾಗಿದ್ದು, ಈಗ ಎಂಎಲ್‌ಸಿ ಆಗಿದ್ದಾರೆ. ಅವರು ಮನಸ್ಸು ಮಾಡಿ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡಬೇಕು. ಚುನಾವಣೆಯ ಮುಂದಾಳತ್ವವನ್ನು ಅವರೇ ವಹಿಸಿಕೊಂಡು ನಿಖಿಲ್ ಅವರನ್ನು ಗೆಲ್ಲಿಸುವ ಹೊಣೆ ಹೊರಬೇಕು ಎಂದರು.

**ಹೆಚ್ಚಿದ ಕೈ ಮತಗಳಿಕೆ:** ಲೋಕಸಭೆ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಮತಗಳಿಕೆ ಹೆಚ್ಚಳಗೊಂಡಿದೆ. ಚುನಾವಣೆಯಲ್ಲಿ 85 ಸಾವಿರ ಮತ ಪಡೆಯುವ ಮೂಲಕ ಸುಮಾರು 70 ಸಾವಿರದಷ್ಟು ಮತಗಳಿಕೆ ಹೆಚ್ಚಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ಮೈತ್ರಿ ಅಭ್ಯರ್ಥಿ ಘೋಷಣೆ ತಡ ಮಾಡಬಾರದು. ಕ್ಷೇತ್ರದಲ್ಲಿ ಒಮ್ಮತದ ಅಭ್ಯರ್ಥಿಯನ್ನು ಕಣಕ್ಕಿಳಿಸುವ ನಿಟ್ಟಿನಲ್ಲಿ ಮಾಜಿ ಪ್ರಧಾನಿ ದೇವೇಗೌಡರು ಹಾಗೂ ಕುಮಾರಸ್ವಾಮಿ ಶೀಘ್ರ ತೀರ್ಮಾನ ಕೈಗೊಳ್ಳಬೇಕು ಎಂದರು.

ಸಿಪಿವೈ ಜೆಡಿಎಸ್‌ನಿಂದಲೇ ಸ್ಪರ್ಧೆ ಮಾಡಿದರೆ ತಾಲೂಕು ಜೆಡಿಎಸ್ ಬೆಂಬಲ ನೀಡುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಯೋಗೇಶ್ವರ್ ಜೆಡಿಎಸ್‌ನಿಂದ ಸ್ಪರ್ಧಿಸುತ್ತೇನೆ ಎಂದು ಎಲ್ಲೂ ಹೇಳಿಲ್ಲ. ಅವರು ಜೆಡಿಎಸ್‌ಗೆ ಬಂದರೆ ಸ್ವಾಗತ. ಅವರಿಗೆ ಟಿಕೆಟ್ ನೀಡುವುದೋ ಬಿಡೋವುದೋ ಎಂಬದನ್ನು ಪಕ್ಷದಲ್ಲಿ ಚರ್ಚೆ ಮಾಡುತ್ತೇವೆ. ಪಕ್ಷದ ವರಿಷ್ಠರು ಸೂಚಿಸಿದರೆ ಜೆಡಿಎಸ್ ನಿಂದಲೇ ಅಭ್ಯರ್ಥಿ ಆಗಲಿ. ಆದರೆ ನಿಖಿಲ್ ಅವರೇ ಅಭ್ಯರ್ಥಿ ಆಗಲಿ ಅನ್ನೋದು ನಮ್ಮ ಒತ್ತಾಯ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ನಗರಾಧ್ಯಕ್ಷ ಅಜಯ್, ಒಕ್ಕಲಿಗರ ಸಂಘದ ನಿರ್ದೇಶಕ ಹಾಪ್ ಕಾಮ್ಸ್ ದೇವರಾಜು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಗೋವಿಂದಹಳ್ಳಿ ನಾಗರಾಜು, ನಗರಸಭೆ ಸದಸ್ಯ ಮಂಜುನಾಥ್, ಮುಖಂಡರಾದ ಬೋರ್‌ವೆಲ್ ರಾಮಚಂದ್ರು ಇತರರಿದ್ದರು.

## ಸಿಎಂ ವಿರುದ್ಧ ಚುನಾವಣಾ ಆಯೋಗಕ್ಕೆ 2 ಪ್ರತ್ಯೇಕ ದೂರು



**ಬೆಂಗಳೂರು:** ವಿಧಾನಸಭೆ ಕಲಾಪ ನಿನ್ನೆಯಿಂದ ಶುರುವಾಗಿದ್ದು, ಇದರ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಚುನಾವಣಾ ಆಯೋಗಕ್ಕೆ ಎರಡು ಪ್ರತ್ಯೇಕ ದೂರು ಸಲ್ಲಿಕೆ ಮಾಡಲಾಗಿದೆ. 2018-23ರ ಚುನಾವಣೆಯ ಅಫಿಡವಿಟ್‌ನಲ್ಲಿ ಸಿದ್ದರಾಮಯ್ಯ ಅವರು ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಸಾಮಾಜಿಕ ಕಾರ್ಯಕರ್ತ ಟಿ.ಜೆ.ಅಬ್ರಹಾಂ ಅವರು ದೂರು ಸಲ್ಲಿಸಿದ್ದಾರೆ.

**ಅಫಿಡವಿಟ್‌ನಲ್ಲಿ ಸುಳ್ಳು ಮಾಹಿತಿ ನೀಡಿದ ಆರೋಪ:** 2018ರ ವಿಧಾನಸಭೆ ಚುನಾವಣೆ ವೇಳೆ ಸಿದ್ದರಾಮಯ್ಯ ಅವರು ನೀಡಿದ್ದ ಅಫಿಡವಿಟ್‌ನಲ್ಲಿ ಪತ್ನಿ ಪಾರ್ವತಿ ಹೆಸರಿನಲ್ಲಿ 3 ಎಕರೆ 16 ಗುಂಟೆ ಕೃಷಿ ಜಮೀನು ಇದ್ದು, ಇದರ ಮೌಲ್ಯ 25 ಲಕ್ಷ ರೂ. ಎಂದು ನಮೂದಿಸಿದ್ದಾರೆ. ಆದರೆ, 2005ರಲ್ಲೇ ಈ ಜಮೀನು ಪರಿವರ್ತನೆ ಮಾಡಿಸಿದ್ದ ದಾಖಲೆ ನೀಡಿ ದೂರು ಸಲ್ಲಿಸಿದ್ದಾರೆ. 2023ರ ವಿಧಾನಸಭೆ ಚುನಾವಣೆ ವೇಳೆ 14 ಮುಡಾ ಸೈಟ್‌ಗಳ ಮೌಲ್ಯ ಕೇವಲ 8 ಕೋಟಿ ಎಂದು ಅಫಿಡವಿಟ್‌ನಲ್ಲಿ ನಮೂದಿಸಿದ್ದಾರೆ.

ಇನ್ನು ಮುಡಾದ 14 ಸೈಟ್‌ಗಳ ಅಸಲಿ ಮಾರುಕಟ್ಟೆ ಮೌಲ್ಯ 34 ಕೋಟಿ ರೂಪಾಯಿಯಾಗಿದ್ದು, ಉದ್ದೇಶಪೂರ್ವಕವಾಗಿ ಸಿಎಂ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿಗೆ ಸಾಮಾಜಿಕ ಹೋರಾಟಗಾರ ಟಿ.ಜೆ.ಅಬ್ರಹಾಂ ಅವರು ಎರಡನೇ ದೂರು ಸಲ್ಲಿಸಿದ್ದಾರೆ. ಮುಡಾ ಹಗರಣದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರ ತಲೆಗೆ ಮತ್ತೊಂದು ದೂರು ದಾಖಲಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com